ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 132 ಸಂಚಿಕೆ- 132 | PAGE-8 ಪುಟ-8 | ಗುರುವಾರ 03.07.2025 | RS.2/- ಬೆಲೆ 2/-

## ನನಗೆ ಬೇರೆ ದಾರಿ ಇಲ್ಲ, ಸಿದ್ದರಾಮಯ್ಯ ಬೆನ್ನಿಗೆ ನಿಂತು ಬೆಂಬಲಿಸುತ್ತೇನೆ: ಡಿಕೆಶಿ



ಮಲ್ಲಮ್ಮನುಡಿವಾರ್ತೆ ಬೆಂಗಳೂರು/ ಚಿಕ್ಕಬಳ್ಳಾಪುರ:ಜು.2: ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಐದು ವರ್ಷ ತಾವೇ ಸಿಎಂ ಎಂದು ಪ್ರತಿಪಾದಿಸುತ್ತಿದ್ದಂತೆ, ಆ ಹುದ್ದೆಯ ಪ್ರಮುಖ ಆಕಾಂಕ್ಷಿಯಾಗಿರುವ ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು, ಅದಕ್ಕೆ ತಮ್ಮ ಅಭ್ಯಂತರವಿಲ್ಲ ಮತ್ತು ಮುಖ್ಯಮಂತ್ರಿಯನ್ನು ಬೆಂಬಲಿಸುವುದಾಗಿ ಬುಧವಾರ ಹೇಳಿದ್ದಾರೆ.

ಐದು ವರ್ಷ ನಾನೇ ಮುಖ್ಯಮಂತ್ರಿ ಎಂಬ ಸಿದ್ದರಾಮಯ್ಯ ಹೇಳಿಕೆಗೆ ಪ್ರತಿಕ್ರಿಯಿಸಿದ ಡಿಕೆ ಶಿವಕುಮಾರ್ ಅವರು, ನನಗೆ ಬೇರೆ ದಾರಿ ಇಲ್ಲ. ನಾನು ಬೆಂಬಲ ನೀಡಲೇಬೇಕು ಮತ್ತು ಕಾಂಗ್ರೆಸ್ ಹೈಕಮಾಂಡ್‌ನ ನಿರ್ದೇಶನಗಳನ್ನು ಪಾಲಿಸುವುದಾಗಿ ಹೇಳಿದರು.

ಇಂದು ನಂದಿ ಬೆಟ್ಟದಲ್ಲಿ ನಡೆಯುತ್ತಿರುವ ಸಚಿವ ಸಂಪುಟ ಸಭೆಯಲ್ಲಿ ಭಾಗವಹಿಸುವುದಕ್ಕಾಗಿ ಆಗಮಿಸಿದ್ದ ಡಿಸಿಎಂ ಡಿಕೆ ಶಿವಕುಮಾರ್ ಅವರು, "ನನಗೆ ಯಾವ ಆಯ್ಕೆ ಇದೆ? ಬೇರೆ ಮಾರ್ಗ ಇಲ್ಲ. ನಾನು ಅವರ(ಸಿದ್ದರಾಮಯ್ಯ) ಬೆನ್ನಿಗೆ ನಿಂತು ಬೆಂಬಲಿಸುತ್ತೇನೆ. ಅವರು ಸಿಎಂ ಆಗಿ ಮುಂದುವರೆಯುವುದಕ್ಕೆ ನನಗೆ ಯಾವುದೇ ಆಕ್ಷೇಪವಿಲ್ಲ. ಪಕ್ಷದ ಹೈಕಮಾಂಡ್ ಏನು ಹೇಳುತ್ತದೆ ಅದನ್ನು ಮಾಡುತ್ತೇನೆ" ಎಂದು ಸುದ್ದಿಗಾರರಿಗೆ ತಿಳಿಸಿದರು.

ನೀವು ಪಕ್ಷ ಕಟ್ಟಲು ಕಷ್ಟಪಟ್ಟಿದ್ದೀರಿ ಆ ಕಾರಣಕ್ಕೆ ನಿಮ್ಮ ಬೆಂಬಲಿಗರು ಸಿಎಂ ಸ್ಥಾನಕ್ಕೆ ನಿಮ್ಮ ಹೆಸರು ಪ್ರಸ್ತಾಪಿಸುತ್ತಿದ್ದಾರೆ ಎಂಬ ವರದಿಗಾರರ ಪ್ರಶ್ನೆಗೆ ಉತ್ತರಿಸಿದ ಡಿಕೆಶಿ, "ನಾನೊಬ್ಬನೆ ಪಕ್ಷ ಕಟ್ಟಿದ್ದೇನೆಯೇ? ನನ್ನಂತೆ ನೂರಾರು, ಸಾವಿರಾರು ಲಕ್ಷಾಂತರ ಜನ ಪಕ್ಷ ಕಟ್ಟಿದ್ದಾರೆ. ಮೊದಲು ಅವರ ನಂಬಿಕೆ ಉಳಿಸಿಕೊಳ್ಳೋಣ" ಎಂದು ಹೇಳಿದರು. ಪಕ್ಷದ ಶಿಸ್ತು ಮುಖ್ಯ ಎಂದು ಸ್ಪಷ್ಟಪಡಿಸಿದ ರಾಜ್ಯ ಕಾಂಗ್ರೆಸ್ ಅಧ್ಯಕ್ಷರೂ ಆಗಿರುವ ಡಿಕೆ ಶಿವಕುಮಾರ್, ತಮ್ಮನ್ನು ಸಿಎಂ ಮಾಡುವಂತೆ ನಾನು ಯಾರನ್ನೂ ಕೇಳಿಲ್ಲ ಮತ್ತು ನಾಯಕತ್ವ ಬದಲಾವಣೆಯ ವಿಷಯದ ಬಗ್ಗೆ ಸಾರ್ವಜನಿಕ ಹೇಳಿಕೆ ನೀಡುವ ನಾಯಕರಿಗೆ ನೋಟಿಸ್ ನೀಡಲಾಗುವುದು ಎಂದು ಎಚ್ಚರಿಸಿದರು. ಶಿವಕುಮಾರ್ ಅವರನ್ನು ಸಿಎಂ ಮಾಡಬೇಕು ಎಂದು ಮಂಗಳವಾರ ಹೇಳಿಕೆ ನೀಡಿದ ರಾಮನಗರ ಕಾಂಗ್ರೆಸ್ ಶಾಸಕ ಎಚ್‌ಎ ಇಕ್ಬಾಲ್ ಹುಸೇನ್ ಅವರಿಗೆ ಶೋಕಾಸ್ ನೋಟಿಸ್ ನೀಡಲಾಗಿದೆ. "ನಾನು ಅವರಿಗೆ ನೋಟಿಸ್ ನೀಡಿದ್ದೇನೆ. ಇತರರಿಗೂ ನೋಟಿಸ್ ನೀಡಬೇಕಾಗುತ್ತದೆ. ಶಿಸ್ತು ಮುಖ್ಯ. ಸಿಎಂ ಹುದ್ದೆಗೆ ನನ್ನ ಹೆಸರು ಹೇಳುವಂತೆ ನಾನು ಯಾರನ್ನೂ ಕೇಳಿಲ್ಲ. ಅದರ ಅಗತ್ಯ ನನಗೆ ಇಲ್ಲ. ಸಿಎಂ(ಸಿದ್ದರಾಮಯ್ಯ) ಇರುವಾಗ, ಯಾವುದೇ ಭಿನ್ನಾಭಿಪ್ರಾಯದ ಅಗತ್ಯವಿಲ್ಲ" ಎಂದು ಶಿವಕುಮಾರ್ ಸುದ್ದಿಗಾರರಿಗೆ ತಿಳಿಸಿದರು.

## ನೆಹರೂ ಕೈಯಿಂದಾಗದ್ದು, ಪ್ರಿಯಾಂಕ್ ಖರ್ಗೆಯಿಂದ ಸಾಧ್ಯನಾ?: ಯತ್ನಾಳ್



ಮಲ್ಲಮ್ಮ ನುಡಿ ವಾರ್ತೆ ವಿಜಯಪುರ:ಜು.2: ಜವಾಹರಲಾಲ್ ನೆಹರೂ ಅವರಿಂದಲೇ ಆರ್‌ಎಸ್‌ಎಸ್ ನಿಷೇಧ ಮಾಡೋಕೆ ಆಗಲಿಲ್ಲ. ಇನ್ನು ಪ್ರಿಯಾಂಕ್ ಖರ್ಗೆಯಿಂದ ಸಾಧ್ಯನಾ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಗುಡುಗಿದರು.

ಖರ್ಗೆ ಯಾವ ದಲಿತರನ್ನ ಉದ್ಧಾರ ಮಾಡಿದ್ದಾರೆ ತೋರಿಸಲಿ. ಇವರು ಅಂಬೇಡ್ಕರ್ ಅನುಯಾಯಿ ಅಲ್ಲ. ಸೋನಿಯಾ ಗಾಂಧಿ ಅನುಯಾಯಿ ಎಂದು ವಾಗ್ದಾಳಿ ನಡೆಸಿದರು.

ನಮ್ಮ ತಂಡದವರಿಗೆ ಪಕ್ಷದಲ್ಲಿ ಸ್ಥಾನ ನೀಡಿದರೆ ನನಗೆ ಸಂತೋಷ. ಮೊದಲು ನಮ್ಮ ತಂಡದವರು ಒಳಗೆ ಹೋಗಲಿ. ಆ ಬಳಿಕ ಯತ್ನಾಳ್ ವಾಪಸ್ ಕರೆತರುವ ಬಗ್ಗೆ ಅವರೇ ಮಾತಾಡ್ತಾರೆ ಎಂದು ಯತ್ನಾಳ್ ಟೀಂ ಒಡೆಯಲು ಯತ್ನಾಳ್ ಟೀಂಗೆ ಪಕ್ಷದಲ್ಲಿ ಹುದ್ದೆ ನೀಡುವ ಬಗ್ಗೆ ಬಿಜೆಪಿ ನಾಯಕರ ಚಿಂತನೆ ವಿಚಾರಕ್ಕೆ ಪ್ರತಿಕ್ರಿಯಿಸಿದರು.

ನಾನು ಈ ಹಿಂದೆ ಕೋರ್ ಕಮಿಟಿ ಸದಸ್ಯನಾಗಿದ್ದೆ. ಆ ಸಮಯದಲ್ಲಿ ಟಿಕೆಟ್ ವಂಚಿತರ ಪರವಾಗಿ ಸಭೆಯಲ್ಲಿ ವಾದ ಮಾಡಿದ್ದೆ. ಅದೇ ರೀತಿ ಈಗಲೂ ಮೊದಲು ನಮ್ಮ ತಂಡದವರು ಒಳಗೆ ಕಾಲಿಡಲಿ. ಆ ಬಳಿಕ ಅವರೇ ನನ್ನನ್ನು ವಾಪಸ್ ಕರೆಸುವ ಬಗ್ಗೆ ಸಭೆಯಲ್ಲಿ ಮಾತಾಡ್ತಾರೆ. ನಮ್ಮ ತಂಡದಲ್ಲಿ ಯಾವುದೇ ಭಿನ್ನಾಭಿಪ್ರಾಯ ಇಲ್ಲ ಎಂದು ಸ್ಪಷ್ಟಪಡಿಸಿದರು.

## ಕಾಂಗ್ರೆಸ್ ಸರ್ಕಾರದ ಭ್ರಷ್ಟಾಚಾರ ಖಂಡಿಸಿ ಜೆಡಿಎಸ್ ಪ್ರತಿಭಟನೆ



ಮಲ್ಲಮ್ಮನುಡಿವಾರ್ತೆ ಬೆಂಗಳೂರು, ಜು.2: ರಾಜ್ಯದ ಕಾಂಗ್ರೆಸ್ ಸರ್ಕಾರದ ಭ್ರಷ್ಟಾಚಾರ ಹಾಗೂ ಆಡಳಿತ ವೈಫಲ್ಯ ಖಂಡಿಸಿ ಜೆಡಿಎಸ್ ಬೆಂಗಳೂರು ಮಹಾನಗರ ವತಿಯಿಂದ ಬೃಹತ್ ಪ್ರತಿಭಟನೆ ನಡೆಸಲಾಯಿತು.

ನಗರದಲ್ಲಿಂದು ಫ್ರೀಡಂ ಪಾರ್ಕಿನ ಮೈದಾನದಲ್ಲಿ ಜೆಡಿಎಸ್ ಕಾರ್ಯಕರ್ತರು ಹಾಗೂ ಮುಖಂಡರು, ಸರ್ಕಾರದ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

(2ನೇ ಪುಟ ನೋಡಿ)

## ಶಿಷ್ಟಾಚಾರ ಉಲ್ಲಂಘಿಸಿದಲ್ಲಿ ಶಿಸ್ತು ಕ್ರಮಕ್ಕೆ ಶಿಫಾರಸ್ಸು:ಎಂ.ನಾಗರಾಜು



ಮಲ್ಲಮ್ಮ ನುಡಿ ವಾರ್ತೆ ಬೀದರ. ಜು.02: ಜಿಲ್ಲೆಯ ಎಲ್ಲಾ ಇಲಾಖೆಗಳ ಅಧಿಕಾರಿಗಳು ಎಲ್ಲಾ ಸರ್ಕಾರಿ ಸಮಾರಂಭಗಳ ಆಹ್ವಾನ ಪತ್ರಿಕೆ, ಆಮಂತ್ರಣಗಳಲ್ಲಿ ಕಡ್ಡಾಯವಾಗಿ ಶಿಷ್ಟಾಚಾರ ಪಾಲಿಸುವಂತೆ ವಿಧಾನ ಪರಿಷತ್ ಶಾಸಕರು ಹಾಗೂ ಹಕ್ಕುಬಾಧ್ಯತೆ ಸಮಿತಿ ಅಧ್ಯಕ್ಷರಾದ

(2ನೇ ಪುಟ ನೋಡಿ)






ಒಂದನೇ ಪುಟದಿಂದ

# ಖಂಡಿಸಿ ಜೆಡಿಎಸ್ ಪ್ರತಿಭಟನೆ

ಗ್ಯಾರಂಟಿ ಯೋಜನೆಗಳ ಮೂಲಕ ಅಧಿಕಾರಿ ಹಿಡಿದ ಕಾಂಗ್ರೆಸ್ ಸರ್ಕಾರ, ಇದೀಗ ಆ ಯೋಜನೆಗಳನ್ನು ಸಮರ್ಪಕವಾಗಿ ಜಾರಿ ಮಾಡುವಲ್ಲಿಯೂ ವಿಫಲವಾಗಿದೆ. ಜನರಿಗೆ ಕನಿಷ್ಠ ಮೂಲ ಸೌಕರ್ಯ ಒದಗಿಸುತ್ತಿಲ್ಲ.

ಗುತ್ತಿಗೆದಾರರ ಬಾಕಿ ಹಣ ಪಾವತಿ ಮಾಡುವುದಕ್ಕೂ ವಿಳಂಬ ಮಾಡುತ್ತಿದೆ. ಪರಿಶಿಷ್ಟರಿಗೆ ಮೀಸಲಾಗಿರುವ ಹಣವನ್ನು ಬಿಡುಗಡೆ ಮಾಡುವಲ್ಲಿ ತಾರತಮ್ಯ ಎಸಗುತ್ತಿದ್ದು, ಕೇವಲ ತುಷ್ಟೀಕರಣ ರಾಜಕಾರಣದಲ್ಲಿಯೇ ಕಾಲಹರಣ ಮಾಡುತ್ತಿದೆ ಎಂದು ಜೆಡಿಎಸ್ ನಾಯಕರು ಆರೋಪಿಸಿದರು.

ಬಡವರಿಗೆ ಮನೆ ವಿತರಣೆ ಮಾಡುವಲ್ಲಿಯೂ ಸರ್ಕಾರ ಲೋಪ ಎಸಗಿದ್ದು, ಒಂದು ಮನೆಗೆ 10ಸಾವಿರ ವಸೂಲಿ ಮಾಡುತ್ತಿದ್ದಾರೆ. ರಾಜಕೀಯದಲ್ಲಿ ಯಾರೂ ಶಾಶ್ವತ ಅಲ್ಲ. ನಮ್ಮ ಅವಧಿಯಲ್ಲಿ ಮಾಡುವ ಒಳ್ಳೆಯ ಕೆಲಸಗಳು ಶಾಶ್ವತವಾಗಿ ಉಳಿಯುತ್ತದೆ.

ಒಟ್ಟಾರೆ, ರಾಜ್ಯ ಕಾಂಗ್ರೆಸ್ ಸರ್ಕಾರದ ಆಡಳಿತದಲ್ಲಿನ ಭ್ರಷ್ಟಾಚಾರ, ಲಂಚಗುಳಿತನ, ಸರ್ಕಾರದ ಆಡಳಿತದ ವೈಫಲ್ಯದ ಬಗ್ಗೆ ಹಾಗೂ ಸರ್ಕಾರ ದಿವಾಳಿಯಾಗಿದೆ ಎಂದು ಬೇಸರಗೊಂಡು ಸ್ವಪಕ್ಷದ ಹಿರಿಯ ಶಾಸಕರುಗಳೇ ಟೀಕಾ ಪ್ರಹಾರ ಮಾಡುತ್ತಿದ್ದು, ಇದೇ ವಿಚಾರವಾಗಿ ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ಧ ನಾವು ಮುಂದುವರೆಸುತ್ತೇವೆ ಎಂದು ಜೆಡಿಎಸ್ ನಾಯಕರು ಹೇಳಿದರು.

# ಕ್ರಮಕ್ಕೆ ಶಿಫಾರಸ್ಸು:ಎಂ.ನಾಗರಾಜು

ಎಂ.ನಾಗರಾಜು ಅವರು ತಿಳಿಸಿದರು.

ಅವರು ಜಿಲ್ಲಾ ಪಂಚಾಯತ ಸಭಾಂಗಣದಲ್ಲಿಂದು ಜರುಗಿದ ಶಿಷ್ಠಾಚಾರ ಉಲ್ಲಂಘನೆ ಪ್ರಕರಣಗಳ ಕುರಿತು ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡುತ್ತಾ, ಪ್ರಜಾತಂತ್ರ ವ್ಯವಸ್ಥೆಯಲ್ಲಿ ಶಾಸಕಾಂಗ ಹಾಗೂ ಕಾರ್ಯಾಂಗ ಒಟ್ಟಾಗಿ ಕಾರ್ಯನಿರ್ವಹಿಸಬೇಕು. ಅಧಿಕಾರಿಗಳು ವಿಧಾನಸಭೆ ಹಾಗೂ ವಿಧಾನ ಪರಿಷತ್ತಿನ ಎಲ್ಲ ಶಾಸಕರಿಗೂ ಸಮಾನ ಗೌರವ ಆದ್ಯತೆ ನೀಡತಕ್ಕದ್ದು, ವಿಧಾನ ಪರಿಷತ್ ಸದಸ್ಯರನ್ನು ಕಡೆಗಣಿಸುವುದು ಶಿಷ್ಟಾಚಾರದ ಉಲ್ಲಂಘನೆಯಾಗುತ್ತದೆ. ಶಿಷ್ಠಾಚಾರ ಉಲ್ಲಂಘಿಸುವ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮಕ್ಕೆ ಸಮಿತಿಯು ಶಿಫಾರಸ್ಸು ಮಾಡಲಿದೆ ಎಂದರು.

ಬೀದರ ಜಿಲ್ಲೆಯಲ್ಲಿ ಅನೇಕ ಕಾರ್ಯಕ್ರಮಗಳಲ್ಲಿ ಆಹ್ವಾನ, ಆಮಂತ್ರಣ ಪತ್ರಿಕೆಗಳಲ್ಲಿ ವಿಧಾನ ಪರಿಷತ್ ಸದಸ್ಯರನ್ನು ಕಡೆಗಣಿಸಿ ಶಿಷ್ಠಾಚಾರ ಉಲ್ಲಂಘಿಸಿದ ಅನೇಕ ಪ್ರಕರಣಗಳಿವೆ. ಈ ಅಧಿಕಾರಿಗಳನ್ನು ಬೆಂಗಳೂರಿಗೆ ಕರೆಯಿಸಿ ವಿಚಾರಣೆ ನಡೆಸುವುದನ್ನು ತಪ್ಪಿಸಲು ನಾವೇ ಖುದ್ದಾಗಿ ಬೀದರಗೆ ಬಂದು ಸಮಿತಿ ಸಭೆ ನಡೆಸುತ್ತಿದ್ದೇವೆ. ಅಧಿಕಾರಿಗಳು ಈಗಲಾದರೂ ಎಚ್ಚೆತ್ತು ವಿಧಾನ ಪರಿಷತ್ತ ಸದಸ್ಯರಿಗೂ ಸಮಾನ ಗೌರವ ನೀಡಬೇಕೆಂದು ಎಂ.ನಾಗರಾಜು ಕಟುವಾಗಿ ನುಡಿದರು.

ಶಿಷ್ಠಾಚಾರ ಪಾಲನೆ ಕುರಿತು 6 ತಿಂಗಳಿಗೊಮ್ಮೆ ಎಲ್ಲಾ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಭೆ ಅಥವಾ ಕಾರ್ಯಾಗಾರ ಏರ್ಪಡಿಸಿ ಅರಿವು ಮೂಡಿಸಬೇಕು. ಬೀದರ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಶಿಷ್ಟಾಚಾರ ನಿರ್ವಹಣಾ ತಹಸೀಲ್ದಾರ ಹುದ್ದೆ ಖಾಲಿ ಇರುವುದರಿಂದ ಪ್ರಥಮ ದರ್ಜೆ ಸಹಾಯಕರು ನಿರ್ವಹಿಸುತ್ತಿದ್ದು ಅವರು ಜಾಗರೂಕತೆಯಿಂದ ಜವಾಬ್ದಾರಿ ಅರಿತು ಕೆಲಸ ಮಾಡಬೇಕೆಂದರು.

ವಿಧಾನ ಪರಿಷತ್ ಶಾಸಕರಾದ ಭೀಮರಾವ್ ಪಾಟೀಲ ಅವರಿಗೆ ಕಳೆದ 3 ವರ್ಷಗಳಿಂದಲೂ ಕಚೇರಿ ಕೊಠಡಿ ನೀಡದೇ ಇರುವುದಕ್ಕೆ ತೀವ್ರ ಆಕ್ಷೇಪ ಹಾಗೂ ಅತೃಪ್ತಿ ವ್ಯಕ್ತಪಡಿಸಿದ ಸಮಿತಿಯ ಎಲ್ಲ ಸದಸ್ಯರು ಹಳೆಯ ಜಿಲ್ಲಾಧಿಕಾರಿಗಳು ಹಾಗೂ ಅಪರ ಜಿಲ್ಲಾದಿಕಾರಿಗಳು ಈ ಕುರಿತು ಕ್ಷಮಾರ್ಪಣೆ ಕೇಳಿದ್ದು ಈವರೆಗೂ ಅವರಿಗೆ ಔರಾದ್‌ನಲ್ಲಿ ಕೊಠಡಿ ಒದಗಿಸಲ್ಲವೆಂದರು. ಇದಕ್ಕೆ ಉತ್ತರಿಸಿದ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ಸದ್ಯ ಕೊಠಡಿ ನೀಡುವ ಪ್ರಕ್ರಿಯೇ ಜಾರಿಯಲ್ಲಿದೆ, ಔರಾದ ಪಟ್ಟಣದಲ್ಲಿ ಪುರಸಭೆ ಅನುದಾನದಲ್ಲಿ ಕೊಠಡಿ ಸಿದ್ಧಗೊಳ್ಳುತ್ತಿದೆ ಶೀಘ್ರದಲ್ಲೇ ಕೊಠಡಿ ಸಿದ್ಧಗೊಳ್ಳಲಿದೆಯೆಂದು ತಿಳಿಸಿದರು. ಬೀದರನ ಇನ್ನೋರ್ವ ವಿಧಾನ ಪರಿಷತ್ ಸದಸ್ಯ ಡಾ.ಎಂ.ಜಿ.ಮೂಳೆ ಅವರಿಗೂ ಸಹ ಕೊಠಡಿಯ ಅಗತ್ಯವಿದೆ ಎಂದು ಅಧ್ಯಕ್ಷ ನಾಗರಾಜು ತಿಳಿಸಿದರು. ಬಸವಕಲ್ಯಾಣದ ಕೆಲ ಕಾಮಗಾರಿ ಉದ್ಘಾಟನೆಗಳಲ್ಲಿ ಅಧಿಕಾರಿಗಳು ತಮ್ಮನ್ನು ಆಹ್ವಾನಿಸದೇ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಡಾ.ಎಂ.ಜಿ.ಮೂಳೆ ತಮ್ಮ ಅಹವಾಲು ತಿಳಿಸಿದರು. ಬಾಗಲಕೋಟೆಯ ವಿಧಾನ ಪರಿಷತ್ ಸದಸ್ಯರಾದ ಪಿ.ಎಚ್.ಪೂಜಾರ ಅವರು ಮಾತಮಾಡಿ, ಜನಪ್ರತಿನಿಧಿಗಳು ಸಾರ್ವಜನಿಕರ ಸಮಸ್ಯೆ, ಅಹವಾಲುಗಳನ್ನು ಕೇಳಲು ಕಚೇರಿಯ ಅಗತ್ಯತೆ ಇರುತ್ತದೆ. ವಿಧಾನ ಪರಿಷತ್ ಸದಸ್ಯರಿಗೆ ಅಧಿಕಾರಿಗಳು ಅಸಡ್ಡೆ ತೋರಿಸುವುದು ಸರಿಯಲ್ಲ, ಅಧಿಕಾರಿಗಳು ಜವಾಬ್ದಾರಿಯುತವಾಗಿ ಕಾನೂನಿನ್ವಯ ಆತ್ಮಸಾಕ್ಷಿಯಿಂದ ಕೆಲಸ ನಿರ್ವಹಿಸಬೇಕೆಂದರು.

ಈ ಸಭೆಯಲ್ಲಿ ಹಕ್ಕು ಬಾದ್ಯತೆ ಸಮಿತಿಯ ಇತರೇ ಸದಸ್ಯರುಗಳಾದ ಡಾ.ತಳವಾರ, ಕೇಶವ ಪ್ರಸಾದ, ಭೀಮರಾವ್ ಪಾಟೀಲ, ಜಗದೇವ ಗುತ್ತೇದಾರ, ರಾಮಾಜಿರಾವ್ ಸೇರಿದಂತೆ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಗಿರೀಶ ಬದೋಲೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ ಗುಂಟಿ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಎಸ್.ಆರ್.ಎನ್. ಮೇಹತಾ ಸಿಬಿಎಸ್ ಇ ಶಾಲೆಗೆ ಜಾಗತಿಕ ಗೌರವ




ಕಲಬುರಗಿ:ಜು.2:ಎಸ್.ಆರ್.ಎನ್. ಮೇಹತಾ ಸಿಬಿಎಸ್ಇ ಶಾಲೆ,ವಹಿಸಿದ್ದುನಾಸಾ–ಎಮ್ಸ್ ಓಖಖ ಸ್ಪೇಸ್ ಸೆಟಲ್ಮೆಂಟ್ ಡಿಸೈನ್ ಸ್ಪರ್ಧೆ 2025 ರಲ್ಲಿ 8ನೇ ತರಗತಿಯ ವಿಭಾಗದಲ್ಲಿ ವಿಶ್ವಕ್ಕೆ ಪ್ರಥಮ ಸ್ಥಾನ ಗಳಿಸಿ ಭಾರತದ ಹೆಮ್ಮೆ ಹೆಚ್ಚಿಸಿದೆ.

"ಐರಾ (ಖಖಂ)" ಎಂಬ ಶೀರ್ಷಿಕೆಯಡಿ ರೂಪುಗೊಂಡ ಈ ವಿಜ್ಞಾನ ಯೋಜನೆಗೆ ನಮ್ಮ ಶಾಲೆಯ 11 ಪ್ರತಿಭಾನ್ವಿತ ವಿದ್ಯಾರ್ಥಿಗಳ ತಂಡ ಮಾದರಿ ರೂಪ ನೀಡಿದ್ದು, ಭವಿಷ್ಯದ ದೂರದೃಷ್ಟಿ, ವಿಜ್ಞಾನಗತ ನಿಖರತೆ ಮತ್ತು ನಾವೀನ್ಯತೆಯ ಉದಾಹರಣೆಯಾಗಿದೆ. ಈ ಸಾಧನೆಯ ಪರಿಣಾಮವಾಗಿ, ವಿದ್ಯಾರ್ಥಿಗಳನ್ನು ಅಮೆರಿಕದ ಒರ್ಲ್ಯಾಂಡೋದಲ್ಲಿ ನಡೆದ ಅಂತರರಾಷ್ಟ್ರೀಯ ಬಾಹ್ಯಾಕಾಶ ಅಭಿವೃದ್ಧಿ ಸಮ್ಮೇಳನ (ಖಖಆಅ–2025)ಗೆ ವಿಶೇಷವಾಗಿ ಆಹ್ವಾನಿಸಲಾಯಿತು. ವಿದ್ಯಾರ್ಥಿಗಳು ಜೂನ್ 19 ರಿಂದ 22 ರವರೆಗೆ ಯು.ಎಸ್.ಎ ಯಲ್ಲಿ ನಡೆದ ಸಮ್ಮೇಳನದಲ್ಲಿ ಭಾಗವಹಿಸಿದ್ದರು.

ಜೂನ್ 21, 2025 ರಂದು ವಿದ್ಯಾರ್ಥಿಗಳು ತಮ್ಮ ಯೋಜನೆಯನ್ನು ಪೋಸ್ಟರ್ ಪ್ರಸ್ತುತಿಕರಣ ಮತ್ತು ಮೌಖಿಕ ಪ್ರಸ್ತುತಿಕರಣದ ಮೂಲಕ 250–270 ಕ್ಕೂ ಹೆಚ್ಚು ಜಾಗತಿಕ ಬಾಹ್ಯಾಕಾಶ ವಿಜ್ಞಾನಿಗಳು ಮತ್ತು ಗಣ್ಯರ ಮುಂದೆ ಮಂಡಿಸಿದರು. ಅವರ ಸಂಶೋಧನೆ ಮತ್ತು ಆಲೋಚನಾ ಶಕ್ತಿ ಅತಿಥಿಗಳಿಂದ ವಿಶಿಷ್ಟ ಮೆಚ್ಚುಗೆ ಪಡೆಯಿತು.

ಅಲ್ಲದೆ, ವಿದ್ಯಾರ್ಥಿಗಳು ನಾಸಾದ ಕೆನೆಡಿ ಸ್ಪೇಸ್ ಸೆಂಟರ್‌ಗೆ ಭೇಟಿ ನೀಡಿ, ಬಾಹ್ಯಾಕಾಶ ಗ್ಯಾಲರಿಗಳನ್ನು ಮತ್ತು ರಾಕೆಟ್ ಲಾಂಚ್ ಪ್ಯಾಡ್‌ಗಳನ್ನು ವೀಕ್ಷಿಸಿದರು ಮತ್ತು ಖಗೋಳ ಯಾತ್ರಿಕರೊಂದಿಗೆ ಸಂವಾದ ನಡೆಸುವ ಅವಕಾಶವನ್ನು ಪಡೆದರು. ಈ ಅನುಭವವು ವಿದ್ಯಾರ್ಥಿಗಳ ಭವಿಷ್ಯ ತಂತ್ರಜ್ಞಾನ ಮತ್ತು ಬಾಹ್ಯಾಕಾಶ ಸಂಶೋಧನೆಯಲ್ಲಿ ಆಸಕ್ತಿ ಹೆಚ್ಚಿಸಿದೆ. ಜೂನ್ 30, 2025ರಂದು ವಿದ್ಯಾರ್ಥಿಗಳು ಭಾರತಕ್ಕೆ ವಾಪಸ್ಸಾಗಿದ್ದು, ತಾವು ಪಡೆದ ಜ್ಞಾನ, ಸ್ಫೂರ್ತಿ ಮತ್ತು ಸಾಧನೆಯ ಭಾವವನ್ನು ಹೊತ್ತಿದ್ದಾರೆ. ಪ್ರಾಂಶುಪಾಲರು, ಶಿಕ್ಷಕರು ಮತ್ತು ಪೋಷಕರಿಗೆ ಹೃತೂರ್ವಕ ಅಭಿನಂದನೆ ಸಲ್ಲಿಸುತ್ತೇವೆ. ಈ ಸಾದನೆ, ಶಾಲೆಯ ನಾವೀನ್ಯತೆ, ವಿಜ್ಞಾನ ಮನೋಭಾವನೆ ಮತ್ತು ಶೈಕ್ಷಣಿಕ ಉತ್ಕೃಷ್ಟತೆಯ ತೀವ್ರ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ. ಇದು ಕೇವಲ ಶಾಲೆಗೆ ಮಾತ್ರವಲ್ಲ, ಕರ್ನಾಟಕ ಮತ್ತು ಭಾರತದ ಇತಿಹಾಸಪ್ರಜ್ಞೆಯ ಸಾಧನೆಯಾಗಿದ್ದು, ಎಸ್.ಆರ್.ಎನ್. ಮೇಹತಾ ಶಾಲೆ ಜಾಗತಿಕ ಮಟ್ಟದ ಶೈಕ್ಷಣಿಕ ವೇದಿಕೆಯಾಗಿ ಗುರುತಿಸಿಕೊಂಡಿದೆ.

# ನಾಳೆ ಪ್ರತಿಭಾ ಪುರಸ್ಕಾರ



ಬೀದರ. ಜು. 02 : ಪ್ರಸಕ್ತ ಸಾಲಿನ ಎಸ್ಎಸ್ಎಲ್‌ಸಿ ಹಾಗೂ ಪಿಯುಸಿಯಲ್ಲಿ ಅತಿ ಹೆಚ್ಚಿನ ಅಂಕ ಪಡೆದ ವಿದ್ಯಾರ್ಥಿಗಳಿಗೆ ಬಹುಮಾನ ಹಾಗೂ ಸನ್ಮಾನ ಕಾರ್ಯಕ್ರಮ ಜು.4ರಂದು ಬೆಳಿಗ್ಗೆ 10 ಗಂಟೆಗೆ ಪಟ್ಟಣದ ಸಾಯಿ ಕಲ್ಯಾಣ ಮಂಟಪದಲ್ಲಿ ನಡೆಯಲಿದೆ.

ಕಮಲನಗರ, ಔರಾದ್ ತಾಲ್ಲೂಕಿನ ಪ್ರತಿಭಾವಂತ ವಿದ್ಯಾರ್ಥಿ ಹಾಗೂ ಪಾಲಕರಿಗಾಗಿ ಈ ಕಾರ್ಯಕ್ರಮ ಆಯೋಜಿಸಲಾಗಿದೆ.

ಎಸ್ಎಸ್ಎಲ್‌ಸಿ ಹಾಗೂ ಪಿಯುಸಿಯಲ್ಲಿ ಅತಿ ಹೆಚ್ಚು ಅಂಕ ಪಡೆದ ಮೂವರಿಗೆ ಕ್ರಮವಾಗಿ ?21 ಸಾವಿರ, ?11 ಸಾವಿರ, ?7 ಸಾವಿರ ನಗದು ಬಹುಮಾನ ನೀಡಲಾಗುವುದು. ಶೇ80 ಮೇಲೆ ಅಂಕ ಪಡೆದ ಎಲ್ಲ ವಿದ್ಯಾರ್ಥಿಗಳು ಹಾಗೂ ಪಾಲಕರು, ಶಿಕ್ಷಕರಿಗೆ ಸನ್ಮಾನಿಸಿ ಗೌರವಿಸಲಾಗುತ್ತದೆ.

ಶಾಸಕ ಪ್ರಭು ಚವಾಣ್ ಜನ್ಮದಿನದ ಅಂಗವಾಗಿ ಪ್ರಭು ಎಂಟರ್‌ಪ್ರೈಸಿಸ್ ವತಿಯಿಂದ ಕಾರ್ಯಕ್ರಮ ಆಯೋಜಿಸಲಾಗಿದೆ. ವಿದ್ಯಾರ್ಥಿಗಳು, ಪಾಲಕರು, ಶಿಕ್ಷಕರು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವಂತೆ ಶಾಸಕ ಪ್ರಭು ಚವಾಣ್ ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ.

# ನರೇಗಾ ಯೋಜನೆ ಸದುಪಯೋಗ ಪಡೆದುಕೊಳ್ಳಿ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಜು.2:ಕಮಲನಗರ ತಾಲ್ಲೂಕಿನ ಚಿಮೇಗಾಂವ ಗ್ರಾಮ ಪಂಚಾಯತ್ ನಲ್ಲಿ 15 ನೇ ಹಣಕಾಸಿನ ಮತ್ತು ತಾಲ್ಲೂಕು ಪಂಚಾಯತ್ ಹಾಗೂ ಜಿಲ್ಲಾ ಪಂಚಾಯತ್ ರಾಜ್ಯ ಹಣಕಾಸು ಅನುದಾನ ಆಯೋಗದ ಸಾಮಾಜಿಕ ಸಾಮಾಜಿಕ ಪರಿಶೋಧನೆ ಕುರಿತು ಗ್ರಾಮ ಸಭೆ ನಡೆಯಿತು.

ಹಿರಿಯ ನಾಗರಿಕರಾದ ಶ್ರೀ ಶಿವರಾಜ ಕಂತೆಪ್ಪ ಅವರ ಅಧ್ಯಕ್ಷತೆಯಲ್ಲಿ ಗ್ರಾಮ ಸಭೆ ನಡೆಸಲಾಯಿತು. ಸಭೆಯಲ್ಲಿ ತಾಲೂಕು ಕಾರ್ಯಕ್ರಮ ವ್ಯವಸ್ಥಾಪಕರಾದ ಆನಂದ ಅವರು ಮಾತನಾಡಿ, ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಕೈಗೊಂಡಿರುವ ಕಾಮಗಾರಿಗಳ ಬಗ್ಗೆ ಹಾಗೂ ಖರ್ಚು ವೆಚ್ಚಿನ ಬಗ್ಗೆ ತಿಳಿಸಿದರು. ಜೊತೆಗೆ ಧೀರ್ಘಬಾಳಿಕೆ ಬರುವಂತಹ ಕಾಮಗಾರಿಗಳನ್ನು ಮಾಡಿಕೊಂಡು ಆಸ್ತಿ ಸೃಜನೆ ಮಾಡಿಕೊಳ್ಳಿ ಎಂದು ತಿಳಿಸಿದರು. ಹಾಗೂ ವೈಯಕ್ತಿಕ ಕಾಮಗಾರಿಗಳಾದ ತೋಟಗಾರಿಕೆ ಬೆಳೆಗಳಾದ ಮಾವು, ಗುಲಾಬಿ, ಪೇರು, ಪಪ್ಪಾಯ ಸೇರಿದಂತೆ ತೆರೆದ ಬಾವಿ, ಬಂಡಿಂಗ್, ಕುರಿ, ಕೋಳಿ, ದನದ ಕೊಟ್ಟಿಗೆ ನಿರ್ಮಾಣ ಮಾಡಿಕೊಳ್ಳಲು ಸಹಾಯಧನ ದೊರಕುವುದು ಇಂತಹ ಯೋಜನೆಗಳ ಸದುಪಯೋಗ ಪಡೆದುಕೊಳ್ಳಿ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಗ್ರಾ.ಪಂ. ಅಧ್ಯಕ್ಷರು, ಸದಸ್ಯರು, ಪಿಡಿಓ ಪ್ರಶಾಂತ, ಕಾರ್ಯದರ್ಶಿ, ಡಿಇಓ,ಟಿಸಿ ಅಮರ ಬಿರಾದಾರ, ಟಿಎ ವಿನೋದ, ಐಇಸಿ ಸಂಯೋಜಕರಾದ ಸವಿತಾ ನಾಗೇಶ, ಸಾಮಾಜಿಕ ಪರಿಶೋಧನಾ ಸಿಬ್ಬಂದಿಗಳು, ಗ್ರಾಮಸ್ಥರು, ಕೂಲಿಕಾರರು ಸೇರಿದಂತೆ ಗ್ರಾ.ಪಂ.ಸಿಬ್ಬಂದ್ದಿಗಳು ಹಾಗೂ ಇತರರು ಇದ್ದರು.

# ೬ರಂದು ಶಾಸಕ ಪ್ರಭು ಚವ್ಹಾಣ ಜನ್ಮದಿನ: ರಕ್ತದಾನ, ಸಸಿ ನೆಡುವ ಕಾರ್ಯಕ್ರಮ



ಔರಾದ :ಜು.2:ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರ ಜನ್ಮದಿನದ ನಿಮಿತ್ತ ಅಭಿಮಾನಿಗಳ ಬಳಗದ ವತಿಯಿಂದ ಜುಲೈ 6ರಂದು ಪೂಜೆ, ಸಸಿ ನೆಡುವುದು, ರಕ್ತದಾನ ಶಿಬಿರದಂತಹ ವಿವಿಧ ಕಾರ್ಯಕ್ರಮಗಳನ್ನು ಏರ್ಪಡಿಸಲಾಗಿದೆ.

ಶಾಸಕರು ಅಂದು ಬೆಳಗ್ಗೆ 6 ಗಂಟೆಯಿಂದ ಘಮಸುಬಾಯಿ ತಾಂಡಾದಲ್ಲಿರುವ ಇಚ್ಛಾಪೂರ್ತಿ ಮಾತಾಜಗದಂಬಾದೇವಸ್ಥಾನದಲ್ಲಿ ನಡೆಯುವ ವಿಶೇಷ ಪೂಜೆ, ಹೋಮ–ಹವನಗಳಲ್ಲಿ ಭಾಗವಹಿಸುವರು. 8.30ಕ್ಕೆ ಔರಾದ್‌ನ ಅಮರೇಶ್ವರ ದೇವಸ್ಥಾನದಲ್ಲಿ ವಿಶೇಷ ಪೂಜೆ ನಡೆಸುವರು. ನಂತರ ಡಾ.ಗುರುಪಾದಪ್ಪನಾಗಮಾರಪಳ್ಳಿ ಕಲ್ಯಾಣ ಮಂಟಪಕ್ಕೆ ಆಗಮಿಸಿ ಗೋಪೂಜೆ, ಸಸಿ ನೆಡುವ ಕಾರ್ಯಕ್ರಮ ಹಾಗೂ ರಕ್ತದಾನ ಶಿಬಿರಕ್ಕೆ ಚಾಲನೆ ನೀಡುವರು. 10 ಗಂಟೆಗೆ ವೇದಿಕೆ ಕಾರ್ಯಕ್ರಮ ನಡೆಯುತ್ತದೆ.

ಭಾಲ್ಕಿ ಹಿರೇಮಠ ಸಂಸ್ಥಾನದ ಪೂಜ್ಯ ಡಾ.ಬಸವಲಿಂಗ ಪಟ್ಟದೇವರು, ಪೂಜ್ಯ ಗುರುಬಸವಪಟ್ಟದೇವರು, ಪೂಜ್ಯ ಶಿವಾನಂದ ಶಿವಾಚಾರ್ಯರು ತಮಲೂರು, ಪೂಜ್ಯ ಶಂಭುಲಿಂಗ ಶಿವಾಚಾರ್ಯರು ಥೋಣಗಾಂವ, ಪೂಜ್ಯ ಶಿವಲಿಂಗ ಶಿವಾಚಾರ್ಯರು ಹೆಡಗಾಪೂರ, ಪೂಜ್ಯ ಚಂದ್ರಶೇಖರ ಶಿಚಾಚಾರ್ಯರು ಗುಡಪಳ್ಳಿ, ಪೂಜ್ಯ ಝೂಪಾ ಮಹಾರಾಜ, ಪೂಜ್ಯ ಮುರುಳಿ ಮಹಾರಾಜ, ಪೂಜ್ಯ ಗೋವಿಂದ ಮಹಾರಾಜರು ಸೇರಿದಂತೆ ಇನ್ನಿತರೆ ಪೂಜ್ಯರು ಹಾಗೂ ಪ್ರಮುಖರು ಕಾರ್ಯಕ್ರಮದಲ್ಲಿ ಭಾಗವಹಿಸುವರು.

ಶಾಸಕರ ಜನ್ಮದಿನದ ನಿಮಿತ್ತ ಪ್ರಧಾನಮಂತ್ರಿ ನರೇಂದ್ರ ಮೋದಿಯವರ 'ತಾಯಿಯ ಹೆಸರಲ್ಲಿ ಒಂದು ಗಿಡ' ಆಶಯದಂತೆ ಅಭಿಮಾನಿಗಳು, ಕಾರ್ಯಕರ್ತರು ಹಾಗೂ ಹಿತೈಶಿಗಳಿಂದ ಕ್ಷೇತ್ರದಾದ್ಯಂತ ಸಾವಿರಾರು ಸಸಿಗಳನ್ನು ನೆಡಲಾಗುತ್ತಿದೆ. ಉತ್ತಮ ವಾತಾವರಣಕ್ಕಾಗಿ ಎಲ್ಲ ಶಾಲಾ–ಕಾಲೇಜು, ಅಂಗನವಾಡಿ, ಸರ್ಕಾರಿ ಆಸ್ಪತ್ರೆ ಸೇರಿದಂತೆ ಸಾರ್ವಜನಿಕ ಸ್ಥಳಗಳಲ್ಲಿ ಸಸಿ ನೆಟ್ಟು ಪೋಷಿಸಬೇಕು.

ರೋಗಿಗಳ ಜೀವ ಉಳಿಸಲು ನೆರವಾಗುವ ಸದಾಶಯದೊಂದಿಗೆ ಜುಲೈ 6ರಂದು ಔರಾದ್‌ನಲ್ಲಿ ರಕ್ತದಾನ ಶಿಬಿರ ಏರ್ಪಡಿಸಲಾಗಿದೆ. ರಕ್ತದಾನದಿಂದ ಯಾವುದೇ ಅಡ್ಡ ಪರಿಣಾಮಗಳು ಉಂಟಾಗುವುದಿಲ್ಲ. ಹೊಸ ರಕ್ತ ಉತ್ಪತ್ತಿಯಾಗುವ ಜೊತೆಗೆ ಸಾವಿನ ದವಡೆಯಲ್ಲಿರುವ ಸಾಕಷ್ಟು ರೋಗಿಗಳ ಜೀವ ಉಳಿಸಲು ನೆರವಾಗುತ್ತದೆ. ಅಭಿಮಾನಿಗಳು, ಕಾರ್ಯಕರ್ತರು ಹಾಗೂ ಯುವ ಜನತೆ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಶಾಸಕರು ಕೋರಿದ್ದಾರೆ.

*ಸಾರ್ವಜನಿಕರಲ್ಲಿ ಮನವಿ:*

ಪ್ರತಿ ವರ್ಷದಂತೆ ಶಾಸಕರ ಜನ್ಮದಿನವಾದ ಜುಲೈ 6ರಂದು ವಿದ್ಯಾರ್ಥಿಗಳಿಗೆ ಸನ್ಮಾನಿಸುವ ಕಾರ್ಯಕ್ರಮ ನಡೆಸಲಾಗುತ್ತದೆ. ಆದರೆ ಅಂದು ಶುಭ ಕೋರಲು ಹಿತೈಶಿಗಳು, ಮುಖಂಡರು, ಕಾರ್ಯಕರ್ತರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುವುದರಿಂದ ಸಾಕಷ್ಟು ದಟ್ಟಣೆಯಾಗಿ ವಿದ್ಯಾರ್ಥಿಗಳು ಸೇರಿದಂತೆ ಎಲ್ಲರಿಗೂ ಸಮಸ್ಯೆಯಾಗುತ್ತಿರುವುದನ್ನು ಕಂಡು ಈ ಬಾರಿ ಎರಡು ದಿನ ಮುಂಚಿತವಾಗಿ ಜುಲೈ 4ರಂದು ಸಾಧಕ ವಿದ್ಯಾರ್ಥಿಗಳು, ಅವರ ಪೋಷಕರು ಮತ್ತು ಶಾಲೆಯ ಮುಖ್ಯಗುರುಗಳಿಗೆ ಸನ್ಮಾನ ಕಾರ್ಯಕ್ರಮ ಏರ್ಪಡಿಸಲಾಗಿದೆ.

ಆದ್ದರಿಂದ ಶುಭಾಶಯ ತಿಳಿಸಲು ಇಚ್ಛಿಸುವ ಎಲ್ಲ ಅಭಿಮಾನಿಗಳು, ಹಿತೈಷಿಗಳು, ಮುಖಂಡರು, ಕಾರ್ಯಕರ್ತರು ಹಾಗೂ ಸಾರ್ವಜನಿಕರು ಜುಲೈ 6ರಂದು ಔರಾದ(ಬಿ) ಪಟ್ಟಣದ ಡಾ.ಗುರುಪಾದಪ್ಪ ನಾಗಮಾರಪಳ್ಳಿ ಕಲ್ಯಾಣ ಮಂಟಪದಲ್ಲಿ ಬೆಳಗ್ಗೆ 10 ಗಂಟೆಗೆ ಜರುಗಲಿರುವ ಕಾರ್ಯಕ್ರಮಕ್ಕೆ ಆಗಮಿಸಬೇಕೆಂದು ಶಾಸಕರು ಮನವಿ ಮಾಡಿದ್ದಾರೆಂದು ಶಾಸಕರ ಕಛೇರಿಯ ಪ್ರಕಟಣೆ ತಿಳಿಸಿದೆ.

## ಔರಾದ ಸರ್ಕಾರಿ ಪಾಲಿಟೆಕ್ನಿಕಲ್ ವಿದ್ಯಾರ್ಥಿ ರಾಜ್ಯಕ್ಕೆ 225ನೇ ರ್ಯಾಂಕ್



ಮಲ್ಲಮ್ಮ ನುಡಿ ವಾರ್ತೆ

ಔರಾದ:ಜು.2:ಔರಾದ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನ ಮೆಕ್ಯಾನಿಕಲ್ ಇಂಜಿನಿಯರಿಂಗ್ ವಿಭಾಗದ ವಿದ್ಯಾರ್ಥಿ ಶಿಂಧೆ ಸುಧೀರ ಅವರು ಡಿ.ಸಿಇಟಿ ಪರೀಕ್ಷೆಯಲ್ಲಿ ರಾಜ್ಯಕ್ಕೆ 225ನೇ ರ್ಯಾಂಕ್ ಪಡೆದು ಉತ್ತಮ ಸಾಧನೆ ಮಾಡಿರುವುದಕ್ಕೆ ಕಾಲೇಜಿನ ಪ್ರಾಂಶುಪಾಲರಾದ ಡಾ.ಸಂಜೀವಕುಮಾರಡಿ.ಅವರು ಅಭಿನಂದನೆ ವ್ಯಕ್ತಪಡಿಸಿದ್ದಾರೆ.

ಪ್ರಸಕ್ತ ಸಾಲಿನಲ್ಲಿ ಸಂಸ್ಥೆಯ ವಿದ್ಯರ್ಥಿಗಳು ಅಭುತಪೂರ್ವ ಸಾಧನೆ ಮಾಡಿದ್ದು, ದೇಶದ ಪ್ರತಿಷ್ಠಿತ ಕಂಪನಿಗಳಲ್ಲಿ ವಿದ್ಯಾರ್ಥಿಗಳು ಕೆಲಸ ಪಡೆದಿದುಕೂಡ ಹೆಮ್ಮೆಯ ವಿಷಯವಾಗಿದೆ. ಮುಂದಿನ ದಿನಗಳಲ್ಲಿ ವಿದ್ಯಾರ್ಥಿಗಳಿಗೆ ಇದು ಪ್ರೇರಣೆಯಾಗಿ ಹೊರಹೊಮ್ಮುವುದಾಗಿದೆ ಕಾಲೇಜಿನಲ್ಲಿ ಸಿವಿಲ್ ಇಂಜಿನಿಯರಿಂಗ್,ಮೆಕ್ಯಾನಿಕಲ್ ಇಂಜಿನಿಯರಿಂಗ್,ಅಲ್ಟರ್‌ನೆಟ್ ಎನರ್ಜಿ ಇಂಜಿನಿಯರಿಂಗ್, ಆಟೋಮೆಷನ್ ಮತ್ತು ರೊಬೋಟಿಕ್ಸ್ ಇಂಜಿನಿಯರಿಂಗ್ ಹಾಗೂ ಕಮರ್ಷಿಯಲ್ ಪ್ರಾಕ್ಟೀಸ್ ಇನ್ ಕನ್ನಡ ಕೋರ್ಸುಗಳ ಲಭ್ಯವಿದ್ದು ಗ್ರಾಮೀಣ ವಿದ್ಯಾರ್ಥಿಗಳಿಗೆ ಉದ್ಯೋಗ ಹಾಗೂ ಉನ್ನತ ತಾಂತ್ರಿಕ ಶಿಕ್ಷಣದ ಪೂರಕ ವಾತಾವರಣ ಸಂಸ್ಥೆಯಲ್ಲಿ ಒದಗಿಸಲಾಗಿದೆ. ಪ್ರಥಮ ಸೆಮಿಸ್ಟರ್ ದಾಖಲಾತಿಗೆ ಈಗಾಗಲೇ ಪ್ರಕ್ರಿಯೆಯಲ್ಲಿದ್ದು ಕೆಲವೇ ಸೀಟುಗಳು ಖಾಲಿ ಇದ್ದ ಕಾರಣ ದಾಖಲಾತಿ ಪಡೆದು ಪ್ರಯೋಜನ ಪಡೆಯಬೇಕು. ಹಾಗೂ ವಿದ್ಯಾರ್ಥಿಗಳ ಸಾಧನೆಗೆ ಸಂಸ್ಥೆಯ ಎಲ್ಲಾ ವಿಭಾಗಗಳ ಅತಿಥಿ ಉಪನ್ಯಾಸಕರುಗಳ ಪಾತ್ರ ಅತಿ ಪ್ರಮುಖವಾಗಿರುತ್ತದೆ ಎಂದು ಅವರು ತಿಳಿಸಿದ್ದಾರೆ.

# ಗ್ರಾ.ಪಂ. ಅಭಿವೃದ್ಧಿ ಅಧಿಕಾರಿಗಳ ಭರವಸೆ: ಧರಣಿ ಸತ್ಯಾಗ್ರಹ ಮೊಟಕುಗೊಳಿಸಿದ ಬೀದಿಬದಿ ವ್ಯಾಪಾರಿಗಳು



ಮಲ್ಲಮ್ಮ ನುಡಿ ವಾರ್ತೆ

ಅಫಜಲಪುರ:ಜು.2:ತಾಲೂಕಿನ ದೇವಲಗಾಣಗಾಪುರದತ್ತಾತ್ರೇಯ ದೇವಸ್ಥಾನದ ಅಭಿವೃದ್ಧಿಗಾಗಿ ಮಾಸ್ಟರ್ ಪ್ಲ್ಯಾನ್ ಸಕ್ಸಸ್ ಹಿನ್ನೆಲೆ ಜೀವನೋಪಾಯಕ್ಕಾಗಿ ದೇವಸ್ಥಾನದ ಮುಂದೆ ಹೂವು ಹಣ್ಣು ಮಾರಾಟ ಮಾಡುತ್ತಿರುವ ಬೀದಿ ಬದಿ ವ್ಯಾಪಾರಿಗಳ ಜೀವನ ಬೀದಿಗೆ ಬಂದಿದೆ ಎಂದರೆ ತಪ್ಪಾಗಲಾರದು. ಒಂದು ಕಡೆ ದೇವಸ್ಥಾನದ ಅಭಿವೃದ್ಧಿಗಾಗಿ ಉತ್ತಮ ಕೆಲಸ ನಡೆದರೆ ಇನ್ನೊಂದು ಕಡೆ ಸಣ್ಣಪುಟ್ಟ ವ್ಯಾಪಾರ ಮಾಡುವ ಬಡವರಿಗೆ ನೋವುಂಟು ಮಾಡಿದೆ. ಏಕೆಂದರೆ ಏಕಾಏಕಿಯಾಗಿ ಮಾಸ್ಟರ್ ಪ್ಲ್ಯಾನ್ ಕಾಮಗಾರಿ ಪ್ರಾರಂಭಿಸಿದ ಅಧಿಕಾರಿ ವರ್ಗ ಬೀದಿಬದಿ ವ್ಯಾಪಾರಿಗಳಿಗೆ ಸೂಕ್ತ ಸ್ಥಳಾವಕಾಶ ಮಾಡಿಕೊಟ್ಟಿದ್ದರೆ ಅನುಕೂಲವಾಗಿತ್ತಿತ್ತು. ಆದರೆ ಅದ್ಯಾವುದು ಆಗದ ಹಿನ್ನೆಲೆ ಇಂದು ವ್ಯಾಪಾರಿಗಳ ಜೀವನ ನಡೆಸಲು ಕಷ್ಟವಾಗುತ್ತಿದೆ.

ಕಳೆದ ಮೂರು ದಿನಗಳಿಂದ ಗ್ರಾಮ ಪಂಚಾಯತಿ ಕಾರ್ಯಾಲಯದ ಎದುರುಗಡೆ ಧರಣಿ ಪ್ರತಿಭಟನೆ ಮುಂದುವರೆಸಿದ ದಿಗಂಬರ ಕಾಡಪ್ಪಗೋಳರವರ ವ್ಯಾಪಾರಿಗಳ ತಂಡ ನ್ಯಾಯ ಸಿಗುವವರೆಗೆ ಧರಣಿ ಮುಂದುವರೆಸುವುದಾಗಿ ನಿರ್ಣಯ ಮಾಡಿತು. ಆದರೆ ಇಮ.ದು ಸ್ಥಳಕ್ಕೆ ಆಗಮಿಸಿದ ಗಾಣಗಾಪುರ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಾದ ಅನಸೂಯಾ ಅಷ್ಟಗಿ ಅವರ ಸೂಕ್ತ ಭರವಸೆಯೊಂದಿಗೆ ಇಂದು ಪ್ರತಿಭಟನೆ ಕೈಬಿಡಲಾಯಿತು.

ನಂತರ ಮಾತನಾಡಿದ ಗ್ರಾ.ಪಂ. ಅಭಿವೃದ್ಧಿ ಅಧಿಕಾರಿಗಳು ಬೀದಿ ಬದಿ ವ್ಯಾಪಾರಿಗಳ ಒಳಿತಿಗಾಗಿ ಗ್ರಾಮ ಪಂಚಾಯತಿ ಸರ್ವ ಸದಸ್ಯರ ಸಭೆಯನ್ನು ಕರೆಯುತ್ತೇನೆ. ಸಭೆಯ ನಿರ್ಣಯದ ಮೇಲೆ ಸೂಕ್ತ ನ್ಯಾಯ ದೊರಕಿಸಿ ಕೊಡುವ ಕೆಲಸ ಮಾಡುತ್ತೇನೆ ಎಂದರು.

ನಂತರ ಮಾತನಾಡಿದ ಬೀದಿಬದಿ ವ್ಯಾಪಾರಿಗಳ ಸಂಘದ ಮುಖಂಡ ದಿಗಂಬರ ಕಾಡಪ್ಪಗೋಳ ಗಾಣಗಾಪುರ ದತ್ತಾತ್ರೇಯರ ಸನ್ನಿಧಿಯಲ್ಲಿ ಸುಮಾರು 2 ನೂರು ಕುಟುಂಬದ ಸದಸ್ಯರು ಸಣ್ಣಪುಟ್ಟ ವ್ಯಾಪಾರಿ ಮಾಡುತ್ತ ತಮ್ಮ ಕುಟುಂಬದ ಜೀವನ ಸಾಗಿಸುತ್ತಿದ್ದರು. ಆದರೆ ದಿಢೀರ ಈ ನಿರ್ಧಾರದಿಂದ ಬೀದಿಬದಿ ವ್ಯಾಪಾರಿಗಳ ಕುಟುಂಬ ಬೀದಿಗೆ ಬಿದ್ದಿವೆ. ಸತತ ಧರಣಿ ಸತ್ಯಾಗ್ರಹ ಮುಂದುರೆಸುವುದನ್ನು ಮನಗಂಡ ಪಿಡಿಓ ಅವರು ಸ್ಥಳಕ್ಕೆ ಬಂದು ನಮ್ಮ ಬೇಡಿಕೆ ಈಡೇರಿಸುವುದಾಗಿ ತಿಳಿಸಿದ್ದಾರೆ. ನಮ್ಮ ಮನವಿಗೆ ಸ್ಪಂದಿಸಿದ ಅವರಿಗೆ ಧನ್ಯವಾದಗಳನ್ನು ಸಲ್ಲಿಸುತ್ತೇನೆ ಎಂದರು. ನಂತರ ತಮ್ಮ ಮನವಿಯನ್ನು ಅಧಿಕಾರಿಗಳಿಗೆ ಹಸ್ತಾಂತರಿಸಿ ಧರಣಿ ಸತ್ಯಾಗ್ರಹ ಕೈಬಿಟ್ಟರು.

ಇದೆ ಸಂದರ್ಭದಲ್ಲಿ ವ್ಯಾಪಾರಿಗಳಾದ ಮಹಾಂತ ಮೂರನೆತ್ತಿ, ಖಾಜಾ ಸಾಹೇಬ್ ಚೌಧರಿ, ಪೀರಸಾಬ್‌ತಾಂಬೋಳಿ, ಸದ್ದಾಂ ಪಟೇಲ್, ದಿಗಂಬರ್‌ತಳವಾರ, ಸುರೇಶ ಮೀತಾ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಲಾಡವಂತಿ ಗ್ರಾಮ ಪಂಚಾಯತ್ ಗ್ರಾಮಸಭೆ



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ ತಾಲ್ಲೂಕಿನ ಲಾಡವಂತಿಗ್ರಾಮದಲ್ಲಿಮಂಗಳವಾರ ಗ್ರಾಮ ಪಂಚಾಯತ್ 15 ನೇ ಹಣಕಾಸಿನ ಮತ್ತು ತಾಲ್ಲೂಕು ಪಂಚಾಯತ್ ಹಾಗೂ ಜಿಲ್ಲಾ ಪಂಚಾಯತ್ ರಾಜ್ಯಹಣಕಾಸು ಅನುದಾನಆಯೋಗದಸಾಮಾಜಿಕ ಪರಿಶೋಧನೆ ಕುರಿತು ಗ್ರಾಮ ಸಭೆ ನಡೆಯಿತು.

ಸಭೆಯಲ್ಲಿ ಸಾಮಾಜಿಕ ಪರಿಶೋಧನೆಜಿಲ್ಲಾಕಾರ್ಯಕ್ರಮ ವ್ಯವಸ್ಥಾಪಕರಾದ ದೇವಿದಾಸ್ ಅವರು ಮಾತನಾಡಿ, ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗಖಾತ್ರಿಯೋಜನೆಯಡಿ ಕೈಗೊಂಡಿರುವ ಕಾಮಗಾರಿಗಳ ಕುರಿತು ಮಾತನಾಡಿದರು.

ಸಾಮಾಜಿಕಪರಿಶೋಧನೆತಾಲ್ಲೂಕು ಕಾರ್ಯಕ್ರಮ ವ್ಯವಸ್ಥಾಪಕರಾದ ಸಂಜೀವಕುಮಾರ ನಂದಿ ಅವರು ಮಾತನಾಡಿ,ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಕೈ ಗೊಂಡಿರುವ ಕಾಮಗಾರಿಗಳ ಬಗ್ಗೆ ಹಾಗೂ ಖರ್ಚು ವೆಚ್ಚಿನ ಬಗ್ಗೆ ಮತ್ತು ದುಡಿಯುವ ಕೈ ಗಳಿಗೆ ಕೆಲಸ ನೀಡುವುದೇ ಯೋಜನೆ ಮುಖ್ಯ ಉದ್ದೇಶವಾಗಿದೆ ಎಂದರು.

ನಂತರ ಕೂಲಿಕಾರ್ಮಿಕರು ಮಾತನಾಡಿ, ಹೊಲದಲ್ಲಿ ಉದ್ಯೋಗ ಖಾತ್ರಿ ಯಡಿ ಕೈ ಗೊಂಡಿರುವ ಬಂಡಿಂಗ್, ಶೆಡ್ಡ, ತೆರೆದ ಬಾವಿ ಸೇರಿದಂತೆ ವಿವಿಧ ಕಾಮಗಾರಿಗಳು ನಮಗೆ ತುಂಬಾ ಉಪಯುಕ್ತವಾಗಿವೆ ಎಂದು ಸಭೆಯಲ್ಲಿ ಅಭಿಪ್ರಾಯ ಹಂಚಿಕೊಂಡರು.

ಈ ಸಂದರ್ಬದಲ್ಲಿ ಗ್ರಾ.ಪಂ. ಅಧ್ಯಕ್ಷಕ್ರೀಷ್ಣಾ ತರಮುಡೆ,ಪಿಡಿಒ ರಮೇಶ ರಾಠೋಡ, ಗ್ರಾ.ಪಂ. ಕಾ.ಅಶೋಕ, ಗ್ರಾ.ಕು.ಸ.ಜಿಲ್ಲಾ ಸಂಯೋಜಕಿ ಕು.ಸಪ್ನಾದೀಪಾ, ಐಇಸಿ ಸಂಯೋಜಕ ವೀರಾರೆಡ್ಡಿ, ಟಿಎ.ಅವಿನಾಶ,ಎಸ.ಡಿ.ಎ.ಮಾಳಪ್ಪ, ಡಿಇಒ ರಾಜಕುಮಾರ ಶೀಲವಂತ ಸಾಮಾಜಿಕಪರಿಶೋಧನೆ ಸಿಬ್ಬಂದಿ ಹಾಗೂ ಗ್ರಾಮ ಪಂಚಾಯತ್ ಸಿಬ್ಬಂದಿ ಇದ್ದರು.

# ಮುಖ್ಯ ಶಿಕ್ಷಕರ ಸಂಘಕ್ಕೆ ನೂತನ ಅಧ್ಯಕ್ಷರ ನೇಮಕಾತಿ.




ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ : ಜು 2– ತಾಲೂಕಿನ ಸರ್ಕಾರಿ ಪ್ರೌಢಶಾಲಾ ಬಡ್ತಿ ಮುಖ್ಯ ಶಿಕ್ಷಕರ ಸಂಘದ ಅಧ್ಯಕ್ಷರಾದ ಚಂದ್ರಕಾಂತ್ ಕಿವಡೆ ಯವರ ನಿವೃತ್ತಿ ಯಾಗಲಿರುವ ಸಂಬಂಧ ಕ್ಷೇತ್ರ ಸಮನ್ವಯ ಅಧಿಕಾರಿಗಳಾದ ಪ್ರಭಾಕರ್ ಕಳಮಾಸೆ ಯವರ ಅಧ್ಯಕ್ಷತೆಯಲ್ಲಿ ವಯೋ ನಿವೃತ್ತಿ ಹೊಂದಲಿರುವ ಚಂದ್ರಕಾಂತ್ ಕಿವುಡೆರವರಿಗೆ ಎಲ್ಲಾ ಮುಖ್ಯಗುರುಗಳ ಸಮಕ್ಷಮದಲ್ಲಿ ಬೀಳ್ಕೊಡುಗೆ ಸಮಾರಂಭ ಏರ್ಪಾಟು ಮಾಡಿ ನೂತನ ಅಧ್ಯಕ್ಷರನ್ನು ಆಯ್ಕೆ ಮಾಡಲಾಯಿತು.ಗೌರವಾಧ್ಯಕ್ಷರಾಗಿ ಅಪ್ಪಣ್ಣ ಭಂಡಾರಿ. ಮುಖ್ಯ ಗುರುಗಳು ಸರ್ಕಾರಿ ಪ್ರೌಢಶಾಲೆ ಹಿರೇನಾಗಾವ್ ರವರಿಗೆ ಆಯ್ಕೆ ಮಾಡಲಾಗಿದೆ ಹಾಗೂ

ನೂತನ ಅಧ್ಯಕ್ಷರಾಗಿ ಚಂದ್ರಕಾಂತ್ ಬಿರಾದಾರ ಮುಖ್ಯ ಗುರುಗಳು ಸರ್ಕಾರಿ ಪ್ರೌಢಶಾಲೆ ಏಕಂಬಾ ಅವರನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು.ಉಪಾಧ್ಯಕ್ಷರಾಗಿ ರೇಖಾ ಶಂಕೆ ಮುಖ್ಯ ಗುರುಗಳು ಸರ್ಕಾರಿ ಪ್ರೌಢಶಾಲೆ ಸಸ್ತಾಪುರ್ ರವರನ್ನು ಆಯ್ಕೆ ಮಾಡಲಾಯಿತು. ಪ್ರಧಾನ ಕಾರ್ಯದರ್ಶಿಗಳಾಗಿ ರಮೇಶ ರಾಜೋಳೆ ಮುಖ್ಯ ಗುರುಗಳು ಸರ್ಕಾರಿ ಪ್ರೌಢಶಾಲೆ ಅಲಗೂಡ ಅವರನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು. ಖಜಂಚಿಯಾಗಿ ಪ್ರವೀಣ್ ಗುರ್ಜರ್ ಅವರಿಗೆ ಹಾಗೂ ಸಹ ಕಾರ್ಯದರ್ಶಿಗಳಾಗಿ ವಿಜಯಲಕ್ಷ್ಮಿ ಹುಡುಗೆ ಹಾಗೂ ಸೋಮನಾಥ್ ಬೇಲೂರೆರವರನ್ನು ಆಯ್ಕೆ ಮಾಡಲಾಗಿದ್ದು ಕಾನೂನು ಸಲಹೆಗಾರರಾಗಿಉಮಾಕಾಂತ್ ಭಂಗೆ ಸಂಘಟನಾ ಕಾರ್ಯದರ್ಶಿಗಳಾಗಿ ಅನಿತಾ ಸಾವಳಕರ್ ಹಾಗೂ ಸದಾನಂದ ಹಂಡರಗಲ್ ರವರಿಗೆ ನೇಮಿಸಲಾಯಿತು . ರಾಜ್ಯ ಪ್ರೌಢ ಶಾಲಾ ಮುಖ್ಯ ಶಿಕ್ಷಕರ ಸಂಘದ ಖಜಾಂಚಿಗಳಾದ ಸುಧಾಕರ್ ಮಹೇಂದ್ರಕರ ರವರ ಮಾರ್ಗದರ್ಶನದಲ್ಲಿ ಹಾಗೂ ಉಪಸ್ಥಿತರಿದ್ದ ಎಲ್ಲಾ ಮುಖ್ಯ ಗುರುಗಳು ಉಪಸ್ಥಿತಿಯಲ್ಲಿ ನೂತನ ಪದಾಧಿಕಾರಿಗಳನ್ನು ಒಮ್ಮತದಿಂದ ಆಯ್ಕೆಮಾಡಲಾಗಿದೆ ಎಂದು ಪ್ರಕಟಣೆ ಮೂಲಕ ತಿಳಿಸಲಾಗಿದೆ.

# ಬಸವಕಲ್ಯಾಣ ತಹಶೀಲ ಕಚೇರಿಯಲ್ಲಿ ಭ್ರಷ್ಟಾಚಾರ ಮುಕ್ತ ಮಾಡಲು ಬಿಎಸ್ಪಿ ಒತ್ತಾಯ.



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಜು 2 ಇಲ್ಲಿನ ತಹಸೀಲಕಛೇರಿಯಲ್ಲಿಭ್ರಷ್ಟಾಚಾರ ಮುಕ್ತ ಮಾಡಲು ಬಹುಜನ ಸಮಾಜ ಪಕ್ಷದ ವತಿಯಿಂದ ಸಹಾಯಕ ಆಯುಕ್ತರ ಮೂಲಕ ರಾಜ್ಯಪಾಲರಿಗೆ ಮನವಿ ಪತ್ರ ಸಲ್ಲಿಸಲಾಯಿತು. ಕಛೇರಿಯಲ್ಲಿ ಯಾವುದೇ ಕೆಲಸಗಳು ಆಗಬೇಕು ಎಂದರೆ ಹಣ ಕೊಡಬೇಕು ಅಂದರೆ ಎಲ್ಲ ಕೆಲಸಗಳು ಸರಳವಾಗಿ ಆಗುತ್ತವೆ ಒಂದು ವೇಳೆ ಹಣ ಕೊಡದಿದ್ದರೆ ಕೆಲಸಗಳು ಆಗುವುದಿಲ್ಲ ಎಂದು. ಇಲ್ಲಿನ ಕಛೇರಿಯಲ್ಲಿ ಭ್ರಷ್ಟಾಚಾರ ತಾಂಡವಾಡುತ್ತಿದೆ. ಇದರಿಂದ ಸಾರ್ವಜನಿಕರು ಹಾಗೂ ರೈತರು ಕೆಲಗಳು ಕೆಂಗಟ್ಟಿ ಹೋಗಿರುತ್ತವೆ. ದಿನನಿತ್ಯ ಅವರ ಪಾಡು ನಾಯಿ ಪಾಡಿಗಿಂತ ಕಡೆಯಾಗಿರುತ್ತದೆ.

ಇದಕ್ಕೆ ತಾಲೂಕಾ ಆಡಳಿತ ಹಾಗೂ ಶಾಸಕರ ಮತ್ತು ರಾಜಕಾರಿಗಳ ಕಾರ್ಯ ವೈಫಲ್ಯವೇ ಕಾರಣವಾಗಿರುತ್ತದೆ ಎಂದರು. ಇದೇ ರೀತಿ ಮುಂದುವರಿದರೆ ತಾಲೂಕಾ ಆಡಳಿತ ಕಛೇರಿಯಲ್ಲಿ ಉಗ್ರ ಹೋರಾಟ ಮಾಡುತ್ತೇವೆ ಎಂದು ಬಹುಜನ ಸಮಾಜ ಪಕ್ಷದ ವತಿಯಿಂದ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ ತಾಲೂಕು ಅಧ್ಯಕ್ಷರಾದ ಶಂಕರ್ ಫುಲೆ. ಪ್ರಧಾನ ಕಾರ್ಯದರ್ಶಿ ರವಿ ಉದಾತೆ.ಸಂಯೋಜಕರಾದ ದತ್ತು ಸುಂತಾಣೆ, ಮಕ್ಬುಲ್ ಸಾಬ್. ಮಹಾದೇವ ಗಾಯಕವಾಡ. ರಮೇಶ್ ರಾಠೋಡ್, ಸಚಿನ ಕಾಂಬಳೆ, ಚಂದ್ರಕಾಂತ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಪರಿಸರ ಸಂರಕ್ಷಣೆಗೆ ಮರ ಗಿಡ ಬೆಳೆಸಿ: ಎನ್ ಟಿ ಮಯೂರ



ಮಲ್ಲಮ್ಮ ನುಡಿ ವಾರ್ತೆ

ಬೀದರ್:– ವಿದ್ಯಾರ್ಥಿಗಳು ಕಡ್ಡಾಯವಾಗಿ ಪರಿಸರ ಸಂರಕ್ಷಣೆಗೆ ಮರ ಗಿಡಗಳನ್ನು ಬೆಳೆಸಿ ಸಹಕಾರ ಮಾಡಬೇಕೆಂದು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆ ವತಿಯಿಂದ ಬೀದರ್ ತಾಲೂಕಿನ ಬಗದಲ್ ವಲಯದ ಮರಕುಂದ ಗ್ರಾಮದ ಜೈ ಪ್ರಕಾಶ ಪ್ರೌಢ ಶಾಲೆಯಲ್ಲಿ ಹಮ್ಮಿಕೊಂಡಿದ್ದ ಪರಿಸರ ಸಂರಕ್ಷಣೆ ಜನ ಜಾಗೃತಿ ಕಾರ್ಯಕ್ರಮವನ್ನು ಸಸಿ ನೆಡುವ ಮೂಲಕ ತಾಲೂಕ ಯೋಜನಾಧಿಕಾರಿ ಮಯೂರ್ ಎನ್.ಟಿ.ಉದ್ಘಾಟಿಸಿ ಮಾತನಾಡುತ್ತ ಕರೆ ನೀಡಿದರು. ಪರಿಸರ ಅಸಮತೋಲನದಿಂದ ವಾಯು ಗುಣದಲ್ಲಿ ಬದಲಾವಣೆಯಾಗಿ ಹಲವಾರು ಪ್ರಕೃತಿ ವಿಕೋಪಗಳು ಸಂಭವಿಸಲಾರಂಭಿಸಿವೆ. ಪರಿಸರ ಸಂರಕ್ಷಣೆ ಮಾಡದಿದರೆ ನಮಗೆ ಉಳಿಗಾಲವಿದೆ ಎಂದರು. ಧರ್ಮಸ್ಥಳ ಸಂಸ್ಥೆಯ ಕೃಷಿ ಮೇಲಧಿಕಾರಿ ಶ್ರೀಕಾಂತ ಮಾತನಾಡಿ, ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆ ಸಮಾಜಮುಖಿ ಕಾರ್ಯಕ್ರಮಗಳು ಹಾಕಿಕೊಂಡು ಗ್ರಾಮಗಳ ಅಭಿವೃದ್ಧಿಗೆ ಹಗಲಿರಳು ಶ್ರಮಿಸುತ್ತಿದ್ದಾರೆ. ಸಂಸ್ಥೆಯ ಸಮುದಾಯ ಅಭಿವೃದ್ಧಿ ಕಾರ್ಯಕ್ರಮಗಳ ಬಗ್ಗೆ ಸ್ವವಿಸ್ತರವಾಗಿ ತಿಳಿಸಿದರು. ವಿದ್ಯಾರ್ಥಿಗಳ ಹಸ್ತದಿಂದ ಸಸಿ ನೆಡಸಲಾಯಿತುಹಾಗೂವಿದ್ಯಾರ್ಥಿಗಳ ಮನೆ ಅಂಗಳದಲ್ಲಿ ನೆಡಲು ಸಸಿ ವಿತರಿಸಲಾಯಿತು. ಸಹ ಶಿಕ್ಷಕಿ ಸುಧಾ ಕಾರ್ಯಕ್ರಮ ನಿರೂಪಿಸಿದರು. ಶಿಕ್ಷಕ ಕಾಶಿನಾಥ್ ನಿಡಗುಂದಿ ಕೊನೆಯಲ್ಲಿ ವಂದಿಸಿದರು.

# ತಿಂಗಳ ಅನುಭವ ಮಂಟಪ – 6 ಜಯದೇವಿತಾಯಿ ಅಗಾಡೆ ಅವರ ಜಯಂತಿ



ಮಲ್ಲಮ್ಮ ನುಡಿ ವಾರ್ತೆ

ಬಸವಕಲಾಣ :– ಜು 2 ಇಲ್ಲಿನ ವಿಶ್ವಬಸವಧರ್ಮ ಟ್ರಸ್ಟ್,ಅನುಭವ ಮಂಟಪ ವತಿಯಿಂದ ನಡೆದ ತಿಂಗಳ ಅನುಭವ ಮಂಟಪ–6 ಜಯದೇವಿತಾಯಿ ಲಿಗಾಡೆ ಅವರ 114 ನೆಯ ಜಯಂತಿ ಹಾಗೂ ಡಾ.ಜಯದೇವಿತಾಯಿ ಲಿಗಾಡೆ ರಾಷ್ಟ್ರೀಯ ಪುರಸ್ಕಾರ ಪ್ರದಾನ ಸಮಾರಂಭ ಕಾರ್ಯಕ್ರಮವನ್ನು ಡಾ. ಮಧುಮಾಲಾ ಲಿಗಾಡೆ ಅವರು.ಉದ್ಘಾಟಿಸಿ ಮಾತನಾಡಿ. ಜಯದೇವಿತಾಯಿ ಲಿಗಾಡೆಯವರ ಜೀವನದ ಸಾಧನೆಗಳ ಬಗ್ಗೆಗಳ ವಿಚಾರಗಳು ವ್ಯಕ್ತಪಡಿಸಿ. ಅವರ ಹೆಸರಿನಲ್ಲಿ ಅನುಭವ ಮಂಟಪದ ವತಿಯಿಂದ ರಾಷ್ಟ್ರಮಟ್ಟದ ಪ್ರಶಸ್ತಿ ಕೊಡುತಿರುವುದು ನನಗೆ ಅತ್ಯಂತ ಖುಷಿ ತಂದಿದೆ ಎಂದರು.

ಅನುಭವ ಮಂಟಪ ಟ್ರಸ್ಟಿನ ಅಧ್ಯಕ್ಷರಾದ ಪೂಜ್ಯಶ್ರೀ ನಾಡೋಜ ಡಾ. ಬಸವಲಿಂಗ ಪಟ್ಟದೇವರು ಸಾನಿಧ್ಯ ವಹಿಸಿ ಮಾತನಾಡಿ. ಜಯದೇವಿತಾಯಿ ಅವರದ್ದು ಶರಣಮಾರ್ಗ ಬದುಕು ಸಿದ್ದರಾಮನ ಕರುಣೆಯ ಕಂದರಾದ ಅವರಿಗೆ ಶರಣರ ಮೇಲೆ ತುಂಬಾ ಅಭಿಮಾನವಿತ್ತು ಶರಣರ ವಚನಗಳನ್ನು ಮೊಟ್ಟಮೊದಲಿಗೆ ಮರಾಠಿಗೆ ಅನುವಾದಿಸಿದ ಶ್ರೇಯಸ್ಸು ಲಿಗಾಡೆತಾಯಿ ಅವರಿಗೆ ಸಲ್ಲುತದೆ. ಅವರು ಮಾಡಿದ ಶರಣರ ವಚನ ಪುಸ್ತಗಳನ್ನು ಮಾರಾಠಿಅನುವಾದಹಸ್ತಪ್ರತಿಗಳನ್ನು ಅನುಭವ ಮಂಟಪದಿಂದ ಪ್ರಕಟಿಸಿ ಮಹಾರಾಷ್ಟ್ರದಲ್ಲಿ ಉಚಿತವಾಗಿ ಹಂಚಲಾಗುವುದು ಎಂದರು.

ಡಾ. ಜಯದೇವಿತಾಯಿ ಲಿಗಾಡೆ ರಾಷ್ಟ್ರೀಯ ಪುರಸ್ಕಾರ ಸ್ವೀಕರಿಸಿ ಸುವರ್ಣಾ ಚಿಮಕೊಡೆ ಮಾತನಾಡಿ ನನ್ನ ಜೀವನದಲ್ಲಿ ಎಂದಿಗೂ ಮರೆಯಲಾಗದ ದಿನವಾಗಿದೆ. ಕನ್ನಡ ಭಾಷೆ ಮತ್ತು ಬಸವಾದಿ ಶರಣರ ನೆಲೆ ಆಗಿದ್ದರಿಂದ ಕರ್ನಾಕದ ಹಾಗೂ ಕನ್ನಡ ಬಗ್ಗೆ ಜಯದೇವಿತಾಯಿ ಅವರಿಗೆ ಅಭಿಮಾನ ಹಾಗೂ ಉಸಿರಾಗಿಸೊಕೊಂಡಿದರು ಎಂದರು. ಅವರಿಗೆ ಸ್ಮನಾನ ಪತ್ರ ಜೊತೆ ನಿಡಿದ 25 ಸಾವಿರ ನಗದು ಹಣವನ್ನು ಲಿಗಾಡೆ ತಾಯಿಯವರ ಪುಸ್ತಕಗಳ ಪ್ರಟಸಿಲಿಕ್ಕೆ ನಿಡಿದರು. ಜಯದೇವಿತಾಯಿ ಲಿಗಾಡೆವರು ಬಗ್ಗೆ ಉಪನ್ಯಾಸ ನಿಡಿದ ಡಾ.ಗುರುಲಿಂಗಪ್ಪಾ ಧಬಾಲೆ ಮಾತನಾಡಿ ಒಬ್ಬ ವ್ಯಕ್ತಿ ದೊಡ್ಡವನಾಗಲು ಹುಟ್ಟಿನಿಂದಾಗಲಿವಯಸ್ಸಿನಿಂದಾಗಲಿ ಶ್ರೀಮಂತಿಕೆಯಿಂದಾಗಲಿ ಅಧಿಕಾರ ಅತಂಸ್ತಿನಿಂದಾಗಲಿ ಅಲ್ಲ.ಕಟುಂಬ ಜಾತಿ ಭಾಷೆ ಪ್ರದೇಶ ಎಂಬ ಚೌಕಟ್ಟನ್ನು ದಾಟಿ ಸಾಮಜ ಹಾಗೂ ಧಾರ್ಮಿಕ ಸಾಹಿತ್ಯ ಸಂಸ್ಕೃತಿಯ ಮುಖವಾಗಿ ನಾಡು ದೇಶ ಭಾಷೆಯ ಮುಖಿಯಾಗಿ ಕಾರ್ಯ ಮಾಡಿದಾಗ ದೊಡ್ಡವನಾಗುತ್ತಾನೆ. ಅಂಯಹ ಬದುಕು ಸಮಾಜಕ್ಕೆ ಸಂದೇಶವಾಗಿ ನಿಲ್ಲುತದೆ ಸಾರ್ವತ್ರಿಕ ಸರ್ವಕಾಲಿಕ ಮೌಲ್ಯಪಡೆದುಕೋಳ್ಳುತದೆ ಶರಣ–ರು ಸಂತರು ಅನುಭಾವಿಗಳು ಸಮಾಜಕ್ಕೆ ದೇಶಕ್ಕೆ ಸಂದೇಶ ನಿಡುವ ರಿತಿಯಲ್ಲಿ ಬದುಕಿದರು ಇಂತಹ ಶರಣರ ಸಾಲಿನಲ್ಲಿ ಡಾ. ಜಯದೇವಿತಾಯಿ ಲಿಗಾಡೆಯವರ ನಿಂತುಕೊಳ್ಳುತ್ತಾರೆ. ಅವರು ಬದುಕು ಮಾಡಿದ ರೀತಿ ಕಾರ್ಯ ಶರಣಮಯವಾಗಿದ್ದವು ಅವರ ವೇಶಭೂಷಣ ಮುಖಭಾವ ಎಲೆಲ್ಲೂ ಶರಣತತ್ವ ಕಾಣುತಿತ್ತು ಇದನೆಲ್ಲ ನೊಡಿದರೆ 12ನೇ ಶತಮಾನದ ಶರಣೆ ಓರ್ವಳು ಈ ಕಾಲವನ್ನು ತಪ್ಪಿಸಿಕೊಂಡು 20ನೇ ಶತಮಾನದಲ್ಲಿ ಹುಟ್ಟಿ ಬಂದಾಳೆನೊ ಅನಿಸುತ್ತದೆ.ಹುಟ್ಟಿನಿಂದ ಅಗರ್ಭ ಶ್ರೀಮಂತೆಯಾದ ಜಯದೇವಿತಾಯಿ ಅವರು ಆ ಶ್ರೀಮಂತಿಕೆಯನ್ನು ತ್ಯಾಗ ಮಾಡಿ ಅತ್ಯಂತ ಸರಳವಾಗಿ ಬದುಕಿದವರು 4ನೇ ತರಗತಿವರಗೆ ಮಾರಾಠಿ ಒದಿದ ಅವರು ಸ್ವಪ್ರಯತ್ನದಿಂದ ಕನ್ನಡ ಕಲಿತು ಏರಡು ಭಾಷೆಗಳಲ್ಲಿ ಕೃತಿಗಳನ್ನು ರಚಿಸಿದಾರೆ ಕರ್ನಾಟಕ ಏಕಿಕರಣದಂತಹ ಚಳುವಳಿಯಲ್ಲಿ ಭಾಗವಿಹಿಸಿ ಕನ್ನಡ ನಾಡು ನುಡಿ ಸಂಸ್ಕೃತಿಗಾಗಿ ಮಹಾರಾಷ್ಟ್ರದ ಸೋಲಾಪೂರದ ನೇಲದಿಂದ ಟೊಂಕ ಕಟ್ಟಿ ಹೋರಾಡಿದಾರೆ ಎಂದರು. ನೇತೃತ್ವಭಾಲ್ಕಿ ಹಿರೇಮಠ ಸಂಸ್ಥಾನದ ಪೂಜ್ಯಶ್ರೀ ಗುರುಬಸವ ಪಟ್ಟದೇವರು ಮಾತನಾಡಿ ಲಿಂ. ಡಾ ಚನ್ನಬಸವ ಪಟ್ಟದೇವರು ತಾವು ನಿರ್ಮಾಣ ಮಾಡಿದ ಅನುಭವ ಮಂಟಪವು ಡಾ. ಜಯದೇವಿತಾಯಿ ಲಿಗಾಡೆ ಅವರ ಹಸ್ತದಿಂದ ಉದ್ಘಾಟನೆ ಮಾಡಿರುವುದು ನಿಜಕ್ಕೂ ಶ್ಲಾಘನಿಯ ಎಂದರು. ಅನುಭವ ಮಂಟಪ ಸಂಚಾಲಕರಾದ ಪೂಜ್ಯ ಶ್ರೀ ಶಿವಾನಂದ ಸ್ವಾಮಿಗಳು ಅಧ್ಯಕ್ಷತೆ ವಹಿಸಿದ್ದರು. ಪೂಜ್ಯ ಶ್ರೀ ಸುಗುಣಾತಾಯಿ ಸಮ್ಮುಖ ವಹಿಸಿದರು. ಶರಣೆ ಸವಿತಾ ನಿರಂಜನ ದೇಶಮುಖ, ವಿಜಯಪೂರ. ಪ್ರಸ್ತಾವಿಕ. ಉಪಾಧ್ಯಕ್ಷರು,ಅನುಭವ ಮಂಟಪ ಉಪಾಧ್ಯಕ್ಷರಾದ ವೈಜನಾಥ ಕಾಮಶೆಟ್ಟಿ. ಡಾ. ಎಸ್.ಬಿ. ದುರ್ಗೆ, ಶ್ರೀಶೈಲ ಹುಡೆದ ಅಧ್ಯಕ್ಷರು,ಡಾ.ಜಯದೇವಿತಾಯಿ ಲಿಗಾಡೆ ಪ್ರತಿಷ್ಠಾನ, ಶರಣ ಗುರುನಾಥಪ್ಪಾ ಸಜ್ಜನ ಬ್ಯಾಕೊಡ, ವಿಜಯಪೂರ.ಡಾ.ಸೋಮನಾಥ ಯಾಳವಾರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.ಪ್ರಸಾದದಾಸೋಹ : ಮೂಗಿ ಪರಿವಾರದವರಿಂದ ಹಾಗೂ ಕಾಶಿಬಾಯಿ ಬಸಲಿಂಗಪ್ಪ ಸಜ್ಜನ ಬ್ಯಾಕೊಡ, ವಿಜಯಪೂರ. ಇವರಿಂದ ನೇರವೆರಿತು. ಡಾ. ಸಂಗೀತಾ ರಮೇಶ ಮಂಠಾಳೆ, ನಿರೂಪಿಸಿದರು. ಚೇತನಾ ವೀರಶೇಟ್ಟಿ ಪಾಟೀಲ ಬೀದರ. ಸ್ವಾಗತಿಸದರು. ನವಲಿಂಗ ಪಾಟೀಲ. ರಾಜಕುಮಾರ ಹೂಗಾರ, ಶರಣ ಧೂಳಪ್ಪಾ ಮುಡಬಿ ವಚನ ಗಾಯನ ನಡೆಸಿಕೊಟ್ಟರು. ಶರಣ ಅಶೋಕ ಕುಂಬಾರ ವಂದಿಸಿದರು. ಸವಿತಾ ದೇಶಮುಖ ಸಂಪಾದಿಸಿದ ಕರುಳಿನ ಕಗ್ಗ, ಪ್ರೋ.ಸಿದ್ದಣ ಲಂಗೋಟಿಯವರ ಧರ್ಮಪಿತ ವಿಶ್ವಗುರು ಬಸವಣ್ಣ, ವಿಜಯ ಕೌಟಗೆಯವರ ವೈರಾಗ್ಯನಿಧಿ ಅಕ್ಕಮಹಾದೇವಿ ಪುಸ್ತಕಗಳನ್ನು ಲೊಕಾರ್ಪಣೆಗೊಳಿಸಲಾಯಿತು.

# ಕೃಷಿ ತರಬೇತಿ ಪ್ರತ್ಯಕ್ಷತೆ ಹಾಗೂ ಮಾಹಿತಿ ಕಾರ್ಯಕ್ರಮ



ಮಲ್ಲಮ್ಮ ನುಡಿ ವಾರ್ತೆ

ಬೀದರ: ಡಾಕ್ಟರ್ ವೀರೇಂದ್ರ ಹೆಗ್ಗಡೆ ಅವರ ಹಾಗೂ ಮಾತೃಶ್ರೀ ಹೇಮಾವತಿ ಅಮ್ಮನವರ ಕೃಪಾಶೀರ್ವಾದದೊಂದಿಗೆ ಇಂದು ಇಸ್ಲಾಂಪೂರ ಕಾರ್ಯಕ್ಷೇತ್ರದಲ್ಲಿ ಕೃಷಿ ತರಬೇತಿ ಪ್ರತ್ಯಕ್ಷತೆ ಹಾಗೂ ಮಾಹಿತಿ ಕಾರ್ಯಕ್ರಮವನ್ನು ಏರ್ಪಡಿಸಿದ್ದು, ಕಾರ್ಯಕ್ರಮದಲ್ಲಿ ಮಾನ್ಯ ಬೀದರ ಹೈನು ಅಭಿವೃದ್ಧಿ ಜಿಲ್ಲಾ ನಿರ್ದೇಶಕರಾದ ಡಾಕ್ಟರ್ ಎಸ್ ಎಸ್ ಹಿರೇಮಠ ಸರ್ ಅವರು ಉದ್ಘಾಟನೆ ಮಾಡಿ, ಹೈನುಗಾರಿಕೆ ಲಾಭದಾಯಕ, ಹೈನುಗಾರಿಕೆಯಿಂದ ಆಗುವ ಪ್ರಯೋಜನ ಹಾಗೂ ವಿವಿಧ ಮೇವಿನ ಬೆಳೆಗಳ ಬಗ್ಗೆ ಮಾಹಿತಿ ಮಾರ್ಗದರ್ಶನ ನೀಡಿದರು. ಹಾಗೂ ಹೈಡ್ರೋಪ್ರೊನಿಕ್ ಘಟಕ ಮತ್ತು ಕುದುರೆ ಮೆಂತೆ ರೆಡ್ ನೇಪಿಯರ್ ಬೆಳೆಯ ಬಿತ್ತನೆಯನ್ನು ಪ್ರಾತ್ಯಕ್ಷತೆ ಮಾಡಿ ಅದರ ಸದುಪಯೋಗಪಡಿಯಲು ಮಾಹಿತಿ ಮಾರ್ಗದರ್ಶನ ನೀಡಿದರು, ಕಾರ್ಯಕ್ರಮದಲ್ಲಿ ಇಸ್ಲಾಂಪೂರ ಹಾಲು ಉತ್ಪಾದಕರ ಸಹಕಾರ ಸಂಘಕ್ಕೆ ಪೂಜ್ಯರ ಸಂಸದರ ನಿದಿಯಡಿಯಲ್ಲಿ ಹಾಲಿನ ಸ್ಟೀಲ್ ಕ್ಯಾನ್ ಹಸ್ತಾಂತರ ಮಾಡಲಾಯಿತು ಹಾಗೂ ಪ್ರಾಸ್ತಾವಿಕವಾಗಿ ತರಬೇತಿ ಹಮ್ಮಿಕೊಂಡಿರುವ ಉದ್ದೇಶ ಇದರಿಂದ ಹೈನುಗಾರಿಕೆ ಮಾಡುತ್ತಿರುವ ಸದಸ್ಯರು ಪ್ರಯೋಜನ ಪಡೆಯುವ ಬಗ್ಗೆ ಹಾಗೂ ಸುಧಾರಿತ ಮೇವಿನ ಬೆಳೆಯ ಬಗ್ಗೆ ಹೈನು ಅಭಿರುದ್ದಿ ಸಮನ್ವಯ ಅಧಿಕಾರಿಗಳು ಅರುಣ್ ಸರ್ ಅವರು ಮಾಹಿತಿ ನೀಡಿದರು, ಕಾರ್ಯಕ್ರಮದಲ್ಲಿ ಕೃಷಿಮೇಲ್ವಿಚಾರಕರು,ಸಹಾಯಕ ಪ್ರಬಂಧಕರು, ಸೇವಾಪ್ರತಿನಿಧಿ ಅವರು ಹಾಗೂ ಸ್ಥಳೀಯ ಗ್ರಾಮದ ಗಣ್ಯರು ಹಾಗೂ ಡೈರಿ ಅಧ್ಯಕ್ಷರು, ಸಂಘದ ಸದಸ್ಯರು ಕಾರ್ಯಕ್ರಮದಲ್ಲಿ ಭಾಗವಹಿಸಿದರು.

# ಅದ್ದೂರಿಯಾಗಿ ಜರುಗಿದ ನಾಗಭೂಷಣ ಅಪ್ಪಾಜೀ ಹಾಗೂ ಅವರ ಶಿಷ್ಯ ಪರಮೇಶ್ವರ ಕಾಳಮದರಗಿ ಅವರ ಜನ್ಮದಿನ ಆಚರಣೆ




ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್: ದಲಿತ ಮಾದಿಗ ಸಮನ್ವಯ ಸಮಿತಿ ಜಿಲ್ಲಾಧ್ಯಕ್ಷ, ಭಾರತಿಯ ಜನತಾ ಪಕ್ಷದ ಮಾಜಿ ತಾ.ಪಂ.ಸದಸ್ಯ ಪರಮೇಶ್ವರ ಕಾಳಮದರಗಿ ಇವರ ಗೆಳೆಯರ ಬಳಗದಿಂದ ಪಟ್ಟಣದ ಶ್ರೀ ವೀರಭದ್ರೇಶ್ವರ ಕಲ್ಯಾಣ ಮಂಟಪದಲ್ಲಿ ಮಂಗಳವಾರ ಶಿರಡಿ ಓಂ ಶ್ರೀ ನಾಗಭೂಷಣ ಅಪ್ಪಾಜೀರವರ 64ನೇ ವರ್ಷದ ಹುಟ್ಟು ಹಬ್ಬ ಹಾಗೂ ಪರಮೇಶ್ವರ ಕಾಳಮದರಗಿ ರವರ 32ನೇ ವರ್ಷದ ಹುಟ್ಟು ಹಬ್ಬವನ್ನು ಅದ್ದೂರಿಯಾಗಿ ಆಚರಿಸಲಾಯಿತು. ಪರಮೇಶ್ವರ ಕಾಲಮದರಗಿ ಜೊತೆಗೆ ದಲಿತ ಮಾದಿಗ ಸಮನ್ವಯ ಸಮಿತಿ ಜಿಲ್ಲಾಧ್ಯಕ್ಷ, ಭಾರತಿಯ ಜನತಾ ಪಕ್ಷದ ಮಾಜಿ ತಾ.ಪಂ.ಸದಸ್ಯರಾಗಿ. ಸದಸ್ಯರಾಗಿ ಅಪಾರ ಸೇವೆ ಮಾಡಿದ್ದಾರೆ. ಸರಳ ಸಜ್ಜನಿಕೇಯ ವ್ಯಕ್ತಿಯಾಗಿದ್ದು, ಜನರ ಸೇವೆಯಿಚಿದ ಜನರ ಪ್ರೀತಿಗೆ ಪಾತ್ರರಾಗಿದ್ದಾರೆ. ಶಾಸಕ ಡಾ. ಸಿದ್ದು ಪಾಟೀಲ, ಮಾಜಿ ಶಾಸಕ ಸುಭಾಷ ಕಲ್ಲೂರು, ಯುವ ಉದ್ಯಮಿ ಸಂತೋಷ ಪಾಟೀಲ, ಜಿಲ್ಲಾ ಪಂಚಾಯತ ಮಾಜಿ ಸದಸ್ಯ ಗುಂಡು ರೆಡ್ಡಿ ಕಮಲಾಪುರೆ,ಜೆಡಿಎಸ್ ನಾಯಕಿ ಮಹೇಶ್ವರಿ, ಪ್ರಮುಖರಾದ ಫರ್ನಾಂಡೀಸ್ ಹಿಪ್ಪಳಗಾಂವ್, ಬಸವರಾಜ ಆರ್ಯ,ಲಿಂಗರಾಜ ತಾಡಫಲ್, ಅರ್ಜುನ ಕನಕ, ರಾಜು ಕರಡಿಯಾಳ, ರಮೇಶ ಕಟ್ಟಿತುಗಾಂವ್, ಸ್ವಾಮಿದಾಸ ಕೆಂಪೇನೋರ್, ಸಂಗಮೇಶ ಹಡಪದ ಏಣಕುರ್,ಬಲಭೀಮ ಹುಲಿಮನಿ,ಮನೋಜ ಮಾನೆ, ಪ್ರಭು ನೇಳಗಿ, ರಾಜಕುಮಾರ ಹಳ್ಳಿಖೇಡ, ಪಪ್ಪುರಾಜ ಚತುರೆ, ಮಹೇಶ ಕಟ್ಟಿಮನಿ, ಪ್ರವೀಣ ಹೋಂಬಾಳೆ,ಅನಿಲ್ ಗಡವಂತಿ, ಸೇರಿದಂತೆ ಅನೇಕ ಮುಖಂಡರು ಹಾಗೂ ಅವರ ಅಭಿಮಾನಿಗಳು, ಹಿತೈಷಿಗಳು ಆಗಮಿಸಿ, ಶಿರಡಿ ಓಂ ಶ್ರೀ ನಾಗಭೂಷಣ ಅಪ್ಪಾಜೀ ಅವರಿಗೆ ಹಾಗೂ ಪರಮೇಶ್ವರ ಕಾಳಮದರಗಿ ಅವರಿಗೆ ಸನ್ಮಾನಿಸಿ ಹುಟ್ಟುಹಬ್ಬದ ಶುಭಕೋರಿದರು.

ಶಿರಡಿ ಓಂ ಶ್ರೀ ನಾಗಭೂಷಣ ಅಪ್ಪಾಜೀ ಅವರು ಹುಟ್ಟುಹಬ್ಬದ ಅಂಗವಾಗಿ 2 ಸಾವಿರ ಸಾಯಿ ಬಾಬಾ ಅವರ ಚಿಕ್ಕ ಮೂರ್ತಿಗಳು ವಿತರಣೆ ಮಾಡಲಾಯಿತ್ತು. ಪರಿಸರವಾದಿ ಶೈಲೇಂದ್ರ ಕಾವಡಿ ಮತ್ತು ಅವರ ಗೆಳೆಯರ ಬಳಗದ ವತಿಯಿಂದ ಸಸಿ ಕೊಟ್ಟು ಗುರು ಶಿಷ್ಯರಿಗೆ ಸನ್ಮಾನಿಸಿದರು. ಹುಟ್ಟು ಹಬ್ಬದ ಅಂಗವಾಗಿ ವಿಶೇಷ ಅನ್ನ ದಾಸೋಹ ಜರುಗಿತ್ತು. ಭಕ್ತರು ಅನ್ನದಾಸೋಹದಲ್ಲಿ ಪಾಲ್ಗೊಂಡು ಪ್ರಸಾದ ಸ್ವೀಕರಿಸಿದರು. ಸಾವಿರಾರು ಗುರುಜೀರವರ ಅಭಿಮಾನಿಗಳು, ಹಾಗೂ ಪರಮೇಶ್ವರ ಕಾಳಮದರಗಿ ಅವರ ಅಭಿಮಾನಿಗಳು, ಕಾರ್ಯಕರ್ತರು, ಸ್ನೇಹಿತರು ಪಾಲ್ಗೊಂಡಿದ್ದರು.

# ಕಲ್ಯಾಣ ಕರ್ನಾಟಕ ಸಾರಥಿ ಚಾಲಕರ ಅಭಿವೃದ್ಧಿ ಸಂಘದ ಪದಾಧಿಕಾರಿಗಳ ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:– ಕಲ್ಯಾಣ ಕರ್ನಾಟಕ ಸಾರಥಿ ಚಾಲಕರ ಅಭಿವೃದ್ಧಿ ಸಂಘದ ತಾಲುಕಾಧ್ಯಕ್ಷರಾಗಿ ಸಂಗಪ್ಪ ರೆಡ್ಡಿ, ಉಪಾಧ್ಯಕ್ಷರಾಗಿ ಬಸವರಾಜ ಮುದನ್ನಾಳಕ್ಕರ್, ಕಾರ್ಯದರ್ಶಿಯಾಗಿ ದೀಪಕ ಭಾಲ್ಕಿಕ್ಕರ್,ಸಹಕಾರ್ಯದರ್ಶಿಯಾಗಿ ರಮೇಶನಾಗರಾಳ,ಕೋಶಾಧ್ಯಕ್ಷರಾಗಿ ಚನ್ನಪ್ಪಪಾರಾ ಹಾಗೂ ಸದಸ್ಯರಾಗಿ ಉಮೇಶ ದುಕನದಾರ್, ಶೇಖ್ ಅಹ್ಮದ್, ರಜನಿಕಾಂತ ಮಳಖೇಡಕ್ಕರ್, ಉಲ್ಲಾಸ ರೆಡ್ಡಿ, ಸಿದ್ದು ಮೈನಳ್ಳಿ, ಕಾಶಿನಾಥ ಸ್ವಾಮಿ ಇವರನ್ನು ಸಂಘದ ಸಂಸ್ಥಾಪಕ ಅರವಿಂದ ಕಮಲಾಪುರ ಇವರ ಮಾರ್ಗದರ್ಶನದಂತೆ ಕಲ್ಯಾಣ ಕರ್ನಾಟಕ ಅಧ್ಯಕ್ಷ ಜಗದೀಶ ದೇಸಾಯಿ ಇವರ ನೇತೃತ್ವದಲ್ಲಿ ಆಯ್ಕೆ ಮಾಡಲಾಗಿದೆ ಎಂದು ಕಲ್ಯಾಣ ಕರ್ನಾಟಕ ಕಾರ್ಯದರ್ಶಿ ಮಂಜುನಾಥ ಬಬಲಾದ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶಾಮ ಭುತ್ತಾಳೆ ಅವರ 37ನೇ ಜನ್ಮ ದಿನ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:– ಯಾವುದೇ ಸಮಯದಲ್ಲಾಗಲಿ ಎಲ್ಲರ ಜೊತೆ–ಗೂ ಸರಳವಾಗಿ, ನಗು ನಗುತ್ತಾ ಮುಗ್ಧ ಮನಸ್ಸಿನ ಮಗುವಿನಂತೆ ನಡೆದುಕೊಳ್ಳುವಂತಹ ವ್ಯಕ್ತಿತ್ವ ಹೊಂದಿದ್ದ ಪಟ್ಟಣದ ಪ್ರಿಯಾ ಫೋಟೋ ಸ್ಟುಡಿಯೋ ಮಾಲೀಕರು, ಬಿಜೆಪಿ ಯುವ ಮುಖಂಡರಾದ ಶಾಮರಾವ ಸಿ. ಭುತ್ತಾಳೆ ಅವರ 37ನೇ ವರ್ಷದ ಜನ್ಮ ದಿನಾಚರಣೆಯನ್ನು ಪಟ್ಟಣದಲ್ಲಿ ಗೆಳೆಯರ ಬಳಗದಿಂದ ಕೇಕ್ ಕತ್ತರಿಸುವ ಮೂಲಕ ಜನ್ಮ ದಿನ ಆಚರಿಸಲಾಯಿತ್ತು. ಈ ಸಂದರ್ಭದಲ್ಲಿ ಡಾ. ಮಾರುತಿ ಸಿಂಧೆ, ಬಲಭೀಮ ಜಾಧವ್, ಅನೀಲ ಕುಮಾರ ಸಿಂಧೆ, ರಾಜಕುಮಾರ ಆರ್. ಹಡಪದ ಸೇರಿದಂತೆ ಇತರರು ಶಾಮರಾವ ಭುತ್ತಾಳೆ ಅವರಿಗೆ 37ನೇ ವರ್ಷದ ಹುಟ್ಟು ಹಬ್ಬದ ಶುಭಾಶಯಗಳು ತಿಳಿಸುತ್ತ, ದೇವರು ಅವರಿಗೆ ಸುಖ, ಶಾಂತಿ, ನೆಮ್ಮದಿ, ಆಯುಷ್ಯ, ಆರೋಗ್ಯ, ಭಾಗ್ಯ ನೀಡಿ ಆಶೀರ್ವದಿಸಲೆಂದು ಪ್ರಾರ್ಥಿಸಿದರು.

# ರಸ್ತೆ ಅಪಘಾತ: ಓರ್ವ ಸಾವು

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ: ಜಿಲ್ಲೆಯ ರಬಕವಿ–ಬನಹಟ್ಟಿ ತಾಲೂಕಿನ ಸಮೀರವಾಡಿ ಬಳಿ ನಿಪ್ಪಾಣಿ–ಮುಧೋಳ ರಾಜ್ಯ ಹೆದ್ದಾರಿಯಲ್ಲಿ ಬುಧವಾರ ಬೈಕ್ ಹಾಗೂ ಲಾರಿ ಮಧ್ಯೆ ನಡೆದ ಅಪಘಾತದಲ್ಲಿ ಬೈಕ್ ಸವಾರ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಮೃತ ವ್ಯಕ್ತಿಯನ್ನು ಬನಹಟ್ಟಿಯ ಬಸವ ನಗರದ ನಿವಾಸಿ ಸುರೇಶ ಕೊಲ್ಲಾಪೂರ(65) ಎಂದು ಗುರುತಿಸಲಾಗಿದೆ. ಗೋಕಾಕದಲ್ಲಿ ಜರುಗುತ್ತಿರುವ ಹುಲಿಗೆಮ್ಮದೇವಿ ಜಾತ್ರೆ ಮುಗಿಸಿಕೊಂಡು ಬುಧವಾರ ಸಂಜೆ ಬನಹಟ್ಟಿಗೆ ಬರುವಾಗ ಈ ಅವಘಡ ಸಂಭವಿಸಿದೆ. ಈ ಕುರಿತು ಮಹಾಲಿಂಗಪೂರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಜಾಹೀರಾತಿಗಾಗಿ ಇಂದೇ ಸಂಪರ್ಕಿಸಿ:9449732000



ಬೀದರ:ಕಾಂಗ್ರೆಸ್ ಸಹಕಾರ ವಿಭಾಗದ ರಾಜ್ಯ ಅಧ್ಯಕ್ಷ ಧನರಾಜ ತಾಳಂಪಳ್ಳಿ ಅವರು ಬೆಂಗಳೂರಿನಲ್ಲಿ ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೆವಾಲ ಅವರನ್ನು ಸನ್ಮಾನಿಸಿದರು. ತಮಗೆ ಸಹಕಾರ ವಿಭಾಗದ ರಾಜ್ಯ ಅಧ್ಯಕ್ಷ ಹೊಣೆ ನೀಡಿದ್ದಕ್ಕೆ ಕೃತಜ್ಞತೆ ಸಲ್ಲಿಸಿ, ರಾಜಕೀಯ ವಿದ್ಯಮಾನ ಹಾಗೂ ಪಕ್ಷ ಸಂಘಟನೆ ಕುರಿತು ಚರ್ಚೆ ನಡೆಸಿದರು.

# 21 ದಿನ ಗುಡಿಸಲಲ್ಲಿ ಶಿವಯೋಗ ಸಾಧನೆ, ವಚನಗಳ ಅಧ್ಯಯನ ಪ್ರಭುದೇವ ಸ್ವಾಮೀಜಿಯಿಂದ ಮೌನ ಶಿವಯೋಗ ಅನುಷ್ಠಾನ



ಮಲ್ಲಮ್ಮನುಡಿವಾರ್ತೆ ಬೀದರ. ಜು. 02: ಲಿಂಗಾಯತ ಮಹಾ ಮಠದ ಪ್ರಭುದೇವ ಸ್ವಾಮೀಜಿ ಇಲ್ಲಿಯ ಬಸವಗಿರಿಯಲ್ಲಿ 21 ದಿನಗಳ ಮೌನ ಶಿವಯೋಗ ಅನುಷ್ಠಾನ ಸೋಮವಾರ ಆರಂಭಿಸಿದರು.

ಗುರು ಪೂಜೆ, ಸಾಮೂಹಿಕ ಪ್ರಾರ್ಥನೆ, ಇಷ್ಟಲಿಂಗಯೋಗ, ವಚನಪಠಣ ಹಾಗೂ ಷಟ್‌ಸ್ಥಲ ಧ್ವಜಾರೋಹಣದೊಂದಿಗೆ ಅನುಷ್ಠಾನಕ್ಕೆ ಚಾಲನೆ ನೀಡಲಾಯಿತು.

ಅಂತರಂಗದ ವಿಕಾಸಕ್ಕೆ ಶಿವಯೋಗ ಅನುಷ್ಠಾನ ಅವಶ್ಯಕ. ಪ್ರಭುದೇವ ಸ್ವಾಮೀಜಿ ಅವರು ಈ ಹಿಂದೆ ಮೂರು ಸಲ ಅನುಷ್ಠಾನ ಕೈಗೊಂಡಿದ್ದರು. ಅಕ್ಕ ಅನ್ನಪೂರ್ಣತಾಯಿ ಅವರ ಆಶಯದಂತೆ ಇದೀಗ ನಾಲ್ಕನೇ ಬಾರಿಗೆ 24 ದಿನಗಳ ಅನುಷ್ಠಾನ ಕೈಗೊಳ್ಳುತ್ತಿದ್ದಾರೆ ಎಂದು ಸಾಹಿತಿ ರಮೇಶ ಮಠಪತಿ ಹೇಳಿದರು.

ಅನುಷ್ಠಾನ ಅವಧಿಯಲ್ಲಿ ಸ್ವಾಮೀಜಿ ಅವರು ಮೌನವಾಗಿ ಇರಲಿದ್ದಾರೆ. ನೀರು, ಹಣ್ಣು ಹಂಪಲು ಮಾತ್ರ ಸೇವಿಸಲಿದ್ದಾರೆ. ಪ್ರತಿ ದಿನ ನಸುಕಿನ ಜಾವ ಮತ್ತು ರಾತ್ರಿ ಶಿವಯೋಗ ಸಾಧನೆ, ವಚನಗಳ ಅಧ್ಯಯನ ಮಾಡಲಿದ್ದಾರೆ ಎಂದು ತಿಳಿಸಿದರು.

ಶ್ರಾವಣ ಪ್ರವಚನದ ಪೂರ್ವದಲ್ಲಿ ತಮ್ಮೊಳಗಿನ ಆಧ್ಯಾತ್ಮಿಕತೆಯನ್ನು ವಿಕಾಸಗೊಳಿಸಿಕೊಳ್ಳುವುದು ಶ್ರೀಗಳ ಅನುಷ್ಠಾನದ ಉದ್ದೇಶ. ಅನುಷ್ಠಾನದ ವೇಳೆ ಬಹಿರಂಗದ ಯಾವುದೇ ಚಟುವಟಿಕೆಗೆ ಆಸ್ಪದ ನೀಡದೆ ಸಂಪೂರ್ಣ ಆಧ್ಯಾತ್ಮ ಸಾಧನೆಯತ್ತಲೇ ಗಮನ ಹರಿಸಲಿದ್ದಾರೆ ಎಂದು ಹೇಳಿದರು.

ಪ್ರಭುದೇವ ಸ್ವಾಮೀಜಿ ಮಾತನಾಡಿ, ಜಗತ್ತನ್ನು ನೋಡುವ ಕಣ್ಣುಗಳು ತನ್ನನ್ನು ತಾನು ನೋಡಲಾರವು. ಏನು ನೋಡಿದರೂ ತನ್ನನ್ನು ತಾನು ನೋಡಿಕೊಳ್ಳದಿರುವುದು ಶರಣರ ದೃಷ್ಟಿಯಲ್ಲಿ ಕುರುಡುತನ. ಹೊರಗಿನ ಎಲ್ಲವನ್ನು ಕೇಳುವ ನಾವು ಎಂದಾದರೂ ನಮ್ಮ ಹೃದಯ ಬಡಿತ, ಉಸಿರಾಟದ ಶಬ್ದ ಕೇಳಲು ಪ್ರಯತ್ನಿಸಿದ್ದೇವೆಯೇ? ಇಲ್ಲ ಎಂದು ಹೇಳಿದರು.

ಒಂದು ಮರ ಎತ್ತರವಾಗಿ ಬೆಳೆಯಬೇಕೆಂದರೆ ಬೇರುಗಳು ಸಹ ಅಷ್ಟೇ ಆಳಕ್ಕಿಳಿಯಬೇಕಾಗುತ್ತದೆ. ಬಹಿರಂಗದಲ್ಲಿ ವಿಸ್ತಾರವಾಗಬೇಕಾದರೆ ಅಂತರಂಗದ ವಿಕಾಸವೂ ಬಹಳ ಮುಖ್ಯ. ಅದಕ್ಕಾಗಿಯೇ ಮೌನ, ಅಧ್ಯಯನ, ಶಿವಯೋಗ ಸಾಧನೆಗಳು ಮುಖ್ಯವಾಗುತ್ತವೆ ಎಂದು ತಿಳಿಸಿದರು.

ನಮ್ಮ ಗುರುಗಳು ಪ್ರತಿ ವರ್ಷ ಶ್ರಾವಣ ಮಾಸದಲ್ಲಿ ಪ್ರವಚನದೊಂದಿಗೆ ಮೌನ ಅನುಷ್ಠಾನ ಕೈಗೊಳ್ಳುತ್ತಿದ್ದರು. ಗುರುಗಳ ಅನುಷ್ಠಾನದ ಮಾದರಿ ಅನುಸರಿಸಿ ಇಪ್ಪತ್ತೊಂದು ದಿನ ಬಸವಗಿರಿಯ ಸುಂದರ ಪರಿಸರದಲ್ಲಿ ನಿರ್ಮಿಸಲಾದ ಗುಡಿಸಲಿನಲ್ಲಿ ಅನುಷ್ಠಾನ ಕೈಗೊಳ್ಳುತ್ತಿರುವೆ ಎಂದು ಹೇಳಿದರು.

ಗುರುವಚನ ಪರುಷಕಟ್ಟೆ, ಅಕ್ಕನ ಐಕ್ಯ ಮಂಟಪದಲ್ಲಿ ಸಾಮೂಹಿಕ ವಚನಪಠಣಗೈದು ಮೌನಕ್ಕೆ ಜಾರಿ ಅನುಷ್ಠಾನದ ಗುಡಿಸಲು ಪ್ರವೇಶಿಸಿದರು.

ಪರುಷಕಟ್ಟೆಯ ಚನ್ನಬಸವಣ್ಣ ಪ್ರಾರ್ಥನೆಗೈದರು. ನೀಲಮ್ಮನ ಬಳಗದ ಸಹೋದರಿಯರು ಗುರು ಪೂಜೆ ಮಾಡಿದರು. ಶಿವಕುಮಾರ ಪಾಖಾಲ್ ದಂಪತಿ ಶ್ರೀಗಳನ್ನು ಗೌರವಿಸಿದರು. ಮಾಣಿಕಪ್ಪ ಗೋರನಾಳೆ ಸ್ವಾಗತಿಸಿದರು. ಸಿ.ಎಸ್. ಗಣಾಚಾರಿ ನಿರೂಪಿಸಿದರು.

ನೆರೆದಿದ್ದ ಶರಣ–ಶರಣೆಯರು ಬಸವ ಜಯ ಘೋಷಗಳೊಂದಿಗೆ ಶ್ರೀಗಳನ್ನು ಅನುಷ್ಠಾನಕ್ಕೆ ಬೀಳ್ಕೊಟ್ಟರು.

# ಸಾಮಾನ್ಯ ಜ್ಞಾನ ವೃದ್ಧಿಗೆ ಪುಸ್ತಕ ಓದಿ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜು. 02 : ವಿದ್ಯಾರ್ಥಿಗಳು ಪರೀಕ್ಷೆಗಷ್ಟೇ ಸೀಮಿತರಾಗಬಾರದು. ಸಾಮಾನ್ಯ ಜ್ಞಾನ ವೃದ್ಧಿಗೆ ಪುಸ್ತಕಗಳನ್ನು ಓದಬೇಕು ಎಂದು ಚಿದಂಬರ ಶಿಕ್ಷಣ ಸಂಸ್ಥೆಯ ಆಡಳಿತಾಧಿಕಾರಿ ಡಾ. ಹಾವಗಿರಾವ್ ಮೈಲಾರೆ ಹೇಳಿದರು.

ಇಲ್ಲಿಯ ಕರ್ನಾಟಕ ರಾಜ್ಯ ಅಕ್ಕ ಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ ಪ್ರಾದೇಶಿಕ ಕೇಂದ್ರದಲ್ಲಿ ಎಂ.ಎಂ, ಎಂ.ಎಸ್ಸಿ, ಎಂ.ಕಾಂ. ವಿದ್ಯಾರ್ಥಿಗಳಿಗೆ ಬುಧವಾರ ಏರ್ಪಡಿಸಿದ್ದ ಯುಜಿಸಿ–ನೆಟ್, ಕೆ–ಸೆಟ್ ಹಾಗೂ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳ ಸಿದ್ಧತೆ ಕುರಿತ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಪೂರ್ವ ತಯಾರಿಯಿಂದ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಯಶಸ್ಸು ಗಳಿಸಬಹುದು ಎಂದು ತಿಳಿಸಿದರು. ನೌಬಾದನ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಧ್ಯಾಪಕ ಡಾ. ಸಂಗಶೆಟ್ಟಿ ಶೆಟಕಾರ್ ಮಾತನಾಡಿ, ಸಾಧನೆಗೆ ಪರಿಶ್ರಮವೇ ಅಸ್ತ್ರ. ಸತತ ಪ್ರಯತ್ನ ಗುರಿ ತಲುಪಿಸುತ್ತದೆ ಎಂದು ಹೇಳಿದರು. ಜೀವನದಲ್ಲಿ ದೊಡ್ಡ ಗುರಿ ಇಟ್ಟುಕೊಂಡು, ಅದರ ಸಾಕಾರಕ್ಕೆ ನಿರಂತರ ಪರಿಶ್ರಮ ಪಡಬೇಕು ಎಂದು ತಿಳಿಸಿದರು. ಜೀವನದಲ್ಲಿ ಸೋಲು–ಗೆಲುವು ಸ್ವಾಭಾವಿಕ. ಸೋಲಿನಿಂದ ಹತಾಶರಾಗದೆ ಗೆಲುವಿನತ್ತ ಮುನ್ನಡೆಯಬೇಕು ಎಂದು ಅಧ್ಯಕ್ಷತೆ ವಹಿಸಿದ್ದ ಪ್ರಾದೇಶಿಕ ಕೇಂದ್ರದ ನಿರ್ದೇಶಕ ಪ್ರೊ. ಆರ್.ವಿ. ಗಂಗಶೆಟ್ಟಿ ಹೇಳಿದರು.

ಜೀವನದಲ್ಲಿ ಶಿಸ್ತು, ಸಮಯ ಪ್ರಜ್ಞೆ ಬಹಳ ಮಹತ್ವವಾದದ್ದು. ಅಮೂಲ್ಯವಾದ ಸಮಯ ವ್ಯರ್ಥ ಮಾಡಿಕೊಳ್ಳದೆ, ಸದುಪಯೋಗ ಪಡೆಸಿಕೊಳ್ಳಬೇಕು ಎಂದು ತಿಳಿಸಿದರು. ಉಪನ್ಯಾಸಕರಾದ ಈಶ್ವರ ರೆಡ್ಡಿ, ಡಾ. ಸಂಗಪ್ಪ ತೌಡಿ, ಡಾ. ನಾಗೇಂದ್ರಪ್ಪ ಎಂ, ರವಿ, ಡಾ. ಅನ್ನಪೂರ್ಣ, ಪ್ರೇಮಲತಾ, ರೇಣುಕಾ, ಪ್ರಿಯಾಂಕಾ, ಅರ್ಚನಾ, ಸಿಬ್ಬಂದಿ ಶಂಕರ, ಮಲ್ಲಿಕಾರ್ಜುನ, ಮಹೇಶ್, ಲಕ್ಷ್ಮಿ ಮತ್ತಿತರರು ಇದ್ದರು.

ಉಪನ್ಯಾಸಕಿ ಶ್ರೀಲತಾ ನಿರೂಪಿಸಿದರು. ನಾಗಪ್ಪ ಜಾನಕನೋರ ಸ್ವಾಗತಿಸಿದರು. ಡಾ. ಪಂಡಿತ ಗಂಗಶೆಟ್ಟಿ ವಂದಿಸಿದರು.

# ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ಭ್ರಷ್ಟಾಚಾರದ ಆರೋಪ

## ಎಂಟು ದಿನಗಳ ಒಳಗಾಗಿ ತನಿಖೆ ಮಾಡದಿದ್ದರೆ ಡಿಸಿ ಕಚೇರಿ ಎದುರು ಹೋರಾಟ: ಸಾಯಿ ಸಿಂಧೆ



ಬೀದರ. ಜು. 02 : ಬೀದರ ಜಿಲ್ಲೆಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ಭ್ರಷ್ಟಾಚಾರ ನಡೆದಿದ್ದು, ಇದಕ್ಕೆ ಕುಮ್ಮಕ್ಕು ನೀಡುತ್ತಿರುವ ಜಿಲ್ಲಾ ಹಿಂದುಳಿದ ವರ್ಗಗಳ ಪ್ರಭಾರಿ ಕಲ್ಯಾಣಾಧಿಕಾರಿಗಳನ್ನು ಕೂಡಲೇ ಅಮಾನತುಗೊಳಿಸಬೇಕೆಂದು ಕರ್ನಾಟಕ ಪ್ರಜಾಶಕ್ತಿ ಸಮಿತಿ ಜಿಲ್ಲಾಧ್ಯಕ್ಷ ಸಾಯಿ ಸಿಂಧೆ ಗಂಭೀರ ಆರೋಪ ಮಾಡಿದ್ದಾರೆ.

ಈ ಕುರಿತು ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಬುಧವಾರ ಕರೆದ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು 2024–25 ಮತ್ತು 2025–26ನೇ ಸಾಲಿಗೆ ಮೆಟ್ರಿಕ್‌ಪೂರ್ವ ಬಾಲಕರ ವಸತಿ ನಿಲಯಕ್ಕೆ ಆಹಾರ ಸರಬರಾಜು ಮಾಡುವ ಟೆಂಡರ್ ಬೆಂಗಳೂರಿನ ಮಂಜುನಾಥ ಡಿಆರ್ ಎಂಬುವವರಿಗೆ ಸಿಕ್ಕಿದೆ. ಆದರೆ ಜಿಲ್ಲೆಯಲ್ಲಿ ಗಿರೀಶ ತಾಂಬೋಳೆ ಎನ್ನುವವರು ಕಾನೂನುಬಾಹಿರವಾಗಿ ಕಳಪೆ ಮಟ್ಟದ ಆಹಾರ ಪದಾರ್ಥಗಳನ್ನು ಸರಬರಾಜು ಮಾಡುತ್ತಿದ್ದಾರೆ. ಇದರ ಹಿಂದೆ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕುಮ್ಮಕ್ಕಿದೆ ಎಂದು ತಿಳಿಸಿದರು.

ಬಾಲಕರಿಗೆ ವಸತಿ ನಿಲಯದಲ್ಲಿ ವರ್ಷಕ್ಕೆ ಎರಡು ಜೊತೆ ಸಮವಸ್ತ್ರ ವಿತರಣೆ ಮಾಡದೆ ಬೋಗಸ್ ಬಿಲ್ ಮಾಡಿದ್ದಾರೆ. ವಸತಿ ನಿಲಯದ ಬಾಲಕರಿಗೆ ವರ್ಷಕ್ಕೆ ಐದು ಬಾರಿ ಕ್ಷೌರ ಮಾಡಲು ರೂ. 60 ರಂತೆ ಸರ್ಕಾರ ಅನುದಾನ ನೀಡುತ್ತದೆ. ಆದರೆ 2024–25ನೇ ಸಾಲಿನಲ್ಲಿ ಮಕ್ಕಳಿಗೆ ಕ್ಷೌರ ಮಾಡಿಸದೆ ಬೋಗಸ್ ಬಿಲ್ ಮಾಡಲಾಗಿದೆ ಎಂದು ಹೇಳಿದರು.

ಮಕ್ಕಳ ಬಯೋಮೆಟ್ರಿಕ್ ಹಾಜರಾತಿ ಆಧಾರದ ಮೇಲೆ ವಸತಿ ನಿಲಯದ ಆಹಾರ ವೆಚ್ಚದ ಬಿಲ್ ಮಾಡುವ ಕುರಿತು ಸರ್ಕಾರದ ಆದೇಶವಿದ್ದರೂ 2022 ರಿಂದ 2025ರ ವರೆಗೆ ಸರ್ಕಾರದ ನಿಯಮಗಳನ್ನು ಗಾಳಿಗೆ ತೂರಿ ಮ್ಯಾನುವೆಲ್ ಹಾಜರಾತಿ ಮುಖಾಂತರ ಮಕ್ಕಳ ಹಾಜರಾತಿ ಹೆಚ್ಚು ತೋರಿಸಿ ಬೋಗಸ್ ಬಿಲ್ ಮಾಡುತ್ತಿರುವುದು ಕಂಡುಬಂದಿದೆ. ಜಿಲ್ಲೆಯ ಕೆಲವು ವಸತಿ ನಿಲಯಗಳಲ್ಲಿ ಖಾಯಂ ಅಡುಗೆಯವರು ನೇಮಕವಾಗಿ ಕೆಲಸ ಮಾಡದೆ ಮನೆಯಲ್ಲಿಯೇ ಕುಳಿತುಕೊಂಡು ಮೇಲಾಧಿಕಾರಿಗಳಿಗೆ ಲಂಚಕೊಟ್ಟು ವೇತನ ಪಡೆಯುತ್ತಿದ್ದಾರೆ. ಹೀಗಾಗಿ ವಸತಿ ನಿಲಯ ಮೇಲ್ವಿಚಾರಕ ಮತ್ತು ನಿಲಯ ಪಾಲಕರನ್ನು ಅಮಾನತುಗೊಳಿಸಬೇಕು. ಇವರಿಗೆ ಕುಮ್ಮಕ್ಕು ನೀಡುತ್ತಿರುವ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಸಂಗೀತಾ ಎಸ್. ಬಿರಾದಾರ ಅವರನ್ನು ಅಮಾನತುಗೊಳಿಸಬೇಕು. ಕಳಪೆ ಆಹಾರ ವಿತರಣೆ ಮಾಡುತ್ತಿರುವ ಟೆಂಡರ್ ದಾರರ ಸಂಸ್ಥೆಯನ್ನು ಕಪ್ಪುಪಟ್ಟಿಗೆ ಸೇರಿಸಿ 8 ದಿನಗಳ ಒಳಗಾಗಿ ಜಿಲ್ಲಾ ಮಟ್ಟದ ತನಿಖೆ ಮಾಡಿಸಬೇಕು. ಇಲ್ಲದಿದ್ದರೆ ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಹೋರಾಟ ಮಾಡಲಾಗುವುದು ಎಂದು ಸಾಯಿ ಸಿಂಧೆ ತಿಳಿಸಿದ್ದಾರೆ.

ಪ್ರಮುಖರಾದ ಮಹೇಂದ್ರ ಹೊಸಮನಿ, ವಿಶಾಲ ದೊಡ್ಡಿ, ಅನೀಲ ಮಡ್ಡೆ, ಸಂಗಮೇಶ ಭಾವಿದೊಡ್ಡಿ, ಸಂತೋಷ, ವಿನೋದ ಶಿಂಧೆ, ಬಸವರಾಜ ಭಾವಿದೊಡ್ಡಿ, ಸಂದೀಪ ಕಾಂಟೆ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಬಸವ ಸಂಸ್ಕೃತಿ ಅಭಿಯಾನ: ನಾಳೆ ವಿಶೇಷ ಸಭೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜು. 02 : ಬಸವ ಸಂಸ್ಕೃತಿ ಅಭಿಯಾನದ ಪ್ರಯುಕ್ತ ನಗರದ ಗಾಂಧಿಗಂಜನ ಬಸವೇಶ್ವರ ದೇವಸ್ಥಾನದಲ್ಲಿ ಜುಲೈ 4 ರಂದು ಸಂಜೆ 5ಕ್ಕೆ ಪೂರ್ವ ಸಿದ್ಧತಾ ವಿಶೇಷ ಸಭೆ ಕರೆಯಲಾಗಿದೆ.

ಲಿಂಗಾಯತ ಮಠಾಧಿಪತಿಗಳ ಒಕ್ಕೂಟದ ಅಧ್ಯಕ್ಷ ಡಾ. ಬಸವಲಿಂಗ ಪಟ್ಟದ್ದೇವರು ಸಾನಿಧ್ಯ ವಹಿಸಲಿದ್ದಾರೆ. ಜಿಲ್ಲೆಯ ಪೂಜ್ಯರು ಪಾಲ್ಗೊಳ್ಳಲಿದ್ದಾರೆ.

ಬಸವಣ್ಣನವರನ್ನು ರಾಜ್ಯ ಸರ್ಕಾರ ಕರ್ನಾಟಕದ ಸಾಂಸ್ಕೃತಿಕ ನಾಯಕರನ್ನಾಗಿ ಘೋಷಿಸಿದ ಹಿನ್ನೆಲೆಯಲ್ಲಿ ಲಿಂಗಾಯತ ಮಠಾಧಿಪತಿಗಳ ಒಕ್ಕೂಟದ ನೇತೃತ್ವ, ಜಾಗತಿಕ ಲಿಂಗಾಯತ ಮಹಾಸಭಾ ಹಾಗೂ ಬಸವ ಪರ ಸಂಘಟನೆಗಳ ಸಹಭಾಗಿತ್ವದಲ್ಲಿ ಸೆ. 1 ರಿಂದ 30 ರ ವರೆಗೆ ಪ್ರತಿ ಜಿಲ್ಲೆಯಲ್ಲಿ ಒಂದೊಂದು ದಿನ ಬಸವ ಸಂಸ್ಕೃತಿ ಅಭಿಯಾನ ನಡೆಸಲು ನಿರ್ಧರಿಸಿದ್ದು, ಬೀದರ್ ಜಿಲ್ಲೆಯಲ್ಲಿ ಸೆ. 3 ರಂದು ಅಭಿಯಾನ ಜರುಗಲಿದೆ ಎಂದು ಜಾಗತಿಕ ಲಿಂಗಾಯತ ಮಹಾಸಭಾದ ಜಿಲ್ಲಾ ಘಟಕದ ಅಧ್ಯಕ್ಷ ಬಸವರಾಜ ಧನ್ನೂರ ತಿಳಿಸಿದ್ದಾರೆ. ಸಭೆಯಲ್ಲಿ ಅಭಿಯಾನದ ಯಶಸ್ವಿಗೆ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಚರ್ಚೆ ನಡೆಯಲಿದೆ ಎಂದು ಹೇಳಿದ್ದಾರೆ.

ಎಲ್ಲ ಬಸವಪರ ಸಂಘಟನೆಗಳ ಪದಾಧಿಕಾರಿಗಳು, ಲಿಂಗಾಯತ ಒಳಪಂಗಡಗಳ ಸಂಘಟನೆಗಳ ಅಧ್ಯಕ್ಷರು, ಪದಾಧಿಕಾರಿಗಳು, ಕನ್ನಡ ಸಾಹಿತ್ಯ ಪರಿಷತ್, ಶರಣ ಸಾಹಿತ್ಯ ಪರಿಷತ್, ವಚನ ಸಾಹಿತ್ಯ ಪರಿಷತ್, ಜಾನಪದ ಸಾಹಿತ್ಯ ಪರಿಷತ್, ಜಾನಪದ ಕಲಾ ಒಕ್ಕೂಟ ಸೇರಿದಂತೆ ಎಲ್ಲ ಸಂಘ ಸಂಸ್ಥೆಗಳ ಪದಾಧಿಕಾರಿಗಳು, ಸಮಾಜದ ಗಣ್ಯರು ಹಾಗೂ ಬಸವಾನುಯಾಯಿಗಳು ಸಭೆಯಲ್ಲಿ ಪಾಲ್ಗೊಂಡು, ಅಭಿಯಾನದ ಯಶಸ್ವಿಗೆ ತಮ್ಮ ಸಲಹೆ ನೀಡಬೇಕು ಎಂದು ಮನವಿ ಮಾಡಿದ್ದಾರೆ.

# ನೂತನ ಬಿಇಒ ಮದರ್ ಖಾನ್ ಪಠಾಣಗೆ ಸನ್ಮಾನ



ಬೀದರ. ಜು. 02 : ನೂತನ ಬೀದರ್ ಕ್ಷೇತ್ರ ಶಿಕ್ಷಣಾಧಿಕಾರಿ ಮದರ್ ಖಾನ್ ಅಲಿಖಾನ್ ಪಠಾಣ್ ಅವರನ್ನು ಕಲ್ಯಾಣ ಕರ್ನಾಟಕ ಪ್ರೌಢಶಾಲಾ ಶಿಕ್ಷಕರ ಸಂಘದ ಜಿಲ್ಲಾ ಘಟಕದಿಂದ ನಗರದಲ್ಲಿ ಬುಧವಾರ ಸನ್ಮಾನಿಸಲಾಯಿತು.

ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಪಾಂಡುರಂಗ ಬೆಲ್ದಾರ್ ಅವರು ಶಾಲು ಹೊದಿಸಿ, ಹೂಮಾಲೆ ಹಾಕಿ ಸತ್ಕರಿಸಿದರು. ಪಠಾಣ್ ಅವರು ಬೀದರ್ ತಾಲ್ಲೂಕಿನ ಶೈಕ್ಷಣಿಕ ಪ್ರಗತಿಗೆ ಶ್ರಮಿಸಲಿದ್ದಾರೆ. ಶಿಕ್ಷಕರ ಸಮಸ್ಯೆಗಳಿಗೆ ಸ್ಪಂದಿಸಲಿದ್ದಾರೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು.

ಸಂಘದ ಜಿಲ್ಲಾ ಘಟಕದ ಉಪಾಧ್ಯಕ್ಷ ಸೂರ್ಯಕಾಂತ ಸಿಂಗೆ, ತಾಲ್ಲೂಕು ಘಟಕದ ಅಧ್ಯಕ್ಷ ವೈಜಿನಾಥ ಸಾಳೆ, ಕಾರ್ಯದರ್ಶಿ ಪ್ರಲ್ಹಾದ್, ಪ್ರಮುಖರಾದ ರವಿಕುಮಾರ ಕುಮನೂರ್, ವಸಂತ ಆಡೆ, ಜೈಸಿಂಗ್ ಠಾಕೂರ್, ಶಕೀಲ್ ಅಹಮ್ಮದ್ ಜಾಫ್ರಿ, ಅರವಿಂದ ಭಾವಿಕಟ್ಟಿ, ಶಿವಕುಮಾರ ಸದಾಫುಲೆ, ಶೇಕ್ ಅಹಮ್ಮದ್, ಅಂಜಲಿ ದೇವದಾಸರಾವ್ ಮತ್ತಿತರರು ಇದ್ದರು.

# ಆಧುನಿಕ ಕಾಲದಲ್ಲಿ ಮಹಿಳೆಯರ ಸ್ಥಾನಮಾನ



ಬೀದರ:ಜು.2: ನಗರದ ಹೈ.ಕ.ಶಿ. ಸಂಸ್ಥೆಯ ಬಿ.ವಿ. ಭೂಮರಡ್ಡಿ ಕಲಾ, ವಿಜ್ಞಾನ ಹಾಗೂ ವಾಣಿಜ್ಯ ಪದವಿ ಮಹಾವಿದ್ಯಾಲಯದಲ್ಲಿ ಎನ್.ಎಸ್.ಎಸ್. ವಿಶೇಷ ವಾರ್ಷಿಕ ಶಿಬಿರದ ದ್ವಿತೀಯ ದಿನದ ಅಂಗವಾಗಿ ಮುಖ್ಯ ಅತಿಥಿಗಳಾಗಿ ಆಗಮಿಸಿದ ಸರ್ಕಾರಿ ಮಹಿಳಾ ಪದವಿ ಮಹಾವಿದ್ಯಾಲಯದ ಇಂಗ್ಲೀಷ ವಿಭಾಗದ ಸಹಪ್ರಾಧ್ಯಾಪಕರಾದ ಡಾ. ವಿದ್ಯಾ ಪಾಟೀಲರವರು ಶಿಬಿರಾರ್ಥಿಗಳನ್ನು ಉದ್ದೇಶಿಸಿ ಮಾತನಾಡುತ್ತಾ ವೇದಗಳ ಕಾಲದಲ್ಲಿ ಮಹಿಳೆಯರು ಬಹಳ ಶೋಚನಿಯ ಪರಿಸ್ಥಿತಿಯಲ್ಲಿದ್ದರು ಮನುಹೇಳುವಂತೆ ಸ್ತ್ರೀಯರಿಗೆ ಸ್ವತಂತ್ರ್ಯವಿಲ್ಲ ಅವರು ಯಾವುದೇ ಶಿಕ್ಷಣ ಪಡೆಯದಂತೆ ಕೇವಲ ನಾಲ್ಕು ಗೋಡೆಗಳ ಮಧ್ಯ ಅಡುಗೆ ಕೆಲಸಕ್ಕೆ ಮಾತ್ರ ಸೀಮಿತವಾಗಿದ್ದರು ಇಂತಹ ಸಂದಿಗ್ಧ ಪರಿಸ್ಥಿತಿಯಲ್ಲಿ ವೇದಗಳ ಕಾಲದಲ್ಲಿ ಶಿಕ್ಷಣ ಪಡೆದ ಖ್ಯಾತ ಮಹಿಳಾ ಪಂಡಿತರೆಂದರೆ ಅಪಲಾ, ವಿಶ್ವವರಾ ಹೀಗೆ ಮುಂತಾದ ಮಹಿಳೆಯರು ಶಿಕ್ಷಣ ಪಡೆದು ತಾವು ಸಹ ಸಮಾಜಕ್ಕೆ ಶಿಕ್ಷಣವಂತರಾಗಲು ಪ್ರೋತ್ಸಾಹಿಸಿದರು. ಆಗಿನ ಕಾಲದ ಕರ್ನಾಟಕದ ಧೀರ ಮಹಿಳೆರೆಂದರೆ ಕಿತ್ತೂರು ರಾಣಿ ಚೆನ್ನಮ್ಮ, ಒನಕೆ ಓಬವ್ವ, ಕೆಳದಿ ಚೆನ್ನಮ್ಮಾ, ಝಾನ್ಸಿರಾಣಿ ಲಕ್ಷ್ಮೀಬಾಯಿ ಇಂತಹ ವೀರ ಮಹಿಳೆಯರು ಸ್ವಾತಂತ್ರ್ಯಕ್ಕಾಗಿ ಬ್ರಿಟಷರ ನಿದ್ದೆಗೆಡಿಸಿದಂತಹವರು. ಇಂದು ಭೂಮಿಯಿಂದ ಆಕಾಶದಲ್ಲಿ ಯುದ್ಧವಿಮಾನವನ್ನು ನಡೆಸುವ ಛಲವನ್ನು ಹೊಂದಿದ್ದಾರೆ ಇವರ ಆದರ್ಶ ಇಟ್ಟು–ಕೊಂಡು ನೀವು ಸಹ ದೇಶಕ್ಕೆ ಮಾದರಿಯಾಗಬೇಕೆಂದು ಶಿಬಿರಾರ್ಥಿಗಳಿಗೆ ಪ್ರೋತ್ಸಾಹಿಸಿದರು

ಮಹಾವಿದ್ಯಾಲಯದ ಉಪ ಪ್ರಾಂಶುಪಾಲರಾದ ಶ್ರೀ ಅನೀಲಕುಮಾರ ಅಣದೂರೆಯವರು ಮಾತನಾಡುತ್ತಾ ಇಂದಿನ ಜಗತ್ತು ಕೇವಲ ಪುರುಷರಿಂದಷ್ಟೆ ಅಲ್ಲ ಯಾವ ಪುರುಷನ ಹಿಂದೆ ಮಹಿಳೆಯ ಶಕ್ತಿ ಇರುತ್ತದೆಯೋ ಅಂತಹ ವ್ಯಕ್ತಿ ಯಾವುದೇ ತೊಂದರೆಗಳಿಲ್ಲದೇ ಎಲ್ಲಾಕ್ಷೇತ್ರಗಳಲ್ಲಿ ಮುಂದೆ ಬರಲು ಸಾಧ್ಯವೆಂದು ನುಡಿದರು ಹಾಗೂ ಎನ್.ಎಸ್.ಎಸ್. ಗೀತೆ ಹಾಡುವುದರ ಮುಖಾಂತರ ಶಿಬಿರಾರ್ಥಿಗಳಿಗೆ ಹುರಿದುಂಬಿಸಿದರು.

ಕಾರ್ಯಕ್ರಮದ ಘನ ಅಧ್ಯಕ್ಷತೆಯನ್ನು ವಹಿಸಿದ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ. ಪಿ. ವಿಠ್ಠಲ ರಡ್ಡಿಯವರು ಮಾತನಾಡುತ್ತಾ ಒಬ್ಬ ಮಹಿಳೆ ಶಿಕ್ಷಣ ಪಡೆದರೆ ಇಡೀ ಕುಟುಂಬ ಶಿಕ್ಷಣ ಪಡೆದಂತೆ, 'ಯತ್ರನಾರ್ಯಸ್ತು ಪೂಜ್ಯಂತೆ ತತ್ರ ದೇವತಾ:' ಅಂದರೆ ಎಲ್ಲಿ ನಾರಿಯರ ಪೂಜೆ ನಡೆಯುತ್ತದೆಯೋ ಅಲ್ಲಿ ದೇವತೆಗಳು ವಾಸಮಾಡುತ್ತಾರೆ. ಮನೆಯೇ ಮೊದಲ ಪಾಠಶಾಲೆ ತಾಯಿಯೇ ಮೊದಲ ಗುರು, 'ನಾರಿ ದೇಶ ಕೀ ಶಾನ' ಇಂದಿನ ಮಾನ್ಯ ಪ್ರಧಾನ ಮಂತ್ರಿಗಳ 'ಬೇಟಿ ಬಚಾವೊ, ಬೇಟಿ ಪಢಾವೊ' ಅಭಿಯಾನ ಸೂಕ್ತವಾಗಿದೆ. ಸ್ತ್ರೀಯರಲ್ಲಿ ಲಕ್ಷ್ಮಿ, ಸರಸ್ವತಿಯವರನ್ನು, ಮಾತೆ ಸ್ವರೂಪ ನಮ್ಮ ಭಾರತದಲ್ಲಿ ಮಾತ್ರ ಕಾಣುತ್ತೇವೆ. ಇಡೀ ವಿಶ್ವವೇ ಭಾರತಕ್ಕೆ ಪೂಜನೀಯ ಭಾವದಿಂದ ನಮಿಸುತ್ತದೆ ಇಂದಿನ ಅಣ್ವಸ್ತ್ರ ಪ್ರಪಂಚದಲ್ಲಿ ಶಾಂತಿ ಮಂತ್ರ ಹೇಳಿದ್ದು ಕೇವಲ ಭಾರತ ದೇಶ ಎಂದು ಮಾರ್ಮಿಕವಾಗಿ ನುಡಿದರು.

ಈ ಕಾರ್ಯಕ್ರಮದಲ್ಲಿ ಶಿಬಿರಾರ್ಥಿಗಳಿಂದ ಮಹಿಳೆಯ ಸ್ಥಿತಿ–ಗತಿ ಕುರಿತು ಅಣಕು ಪ್ರದರ್ಶನ ಮಾಡಲಾಯಿತು.

ಕಾರ್ಯಕ್ರಮದ ವೇದಿಕೆಯ ಮೇಲೆ ಗೌರವ ಉಪಸ್ಥಿತಿಯನ್ನು ಗಣಯಂತ್ರ ವಿಭಾಗ ಶ್ರೀಮತಿ ಸುಜಾತಾ ಹಿಪ್ಪರಗಿ ಹಾಗೂ ಶ್ರೀಮತಿ ಗೋದಾವರಿ ಬಿರಾದಾರ ಮತ್ತು ಎನ್.ಎಸ್.ಎಸ್. 'ಅ' ಘಟಕದ ಸಂಯೋಜನಾಧಿಕಾರಿಗಳಾದ ಡಾ. ದೀಪಾ ರಾಗ, ಹಾಗೂ 'ಬ' ಘಟಕ ಸಂಯೋಜನಾಧಿಕಾರಿಗಳಾದ ಶ್ರೀ ಬಸವರಾಜ ಬಿರಾದಾರ ಉಪಸ್ಥಿತರಿದ್ದರು. ಕಾರ್ಯಕ್ರಮ ಮೊದಲಿಗೆ ಸ್ವಾಗತವನ್ನು ಶ್ರೀಮತಿ ವಾಣಿಶ್ರೀ ನಡೆಸಿಕೊಟ್ಟರೆ, ಕಾರ್ಯಕ್ರಮದ ನಿರೂಪಣೆಯನ್ನು ರಾಜ್ಯಶಾಸ್ತ್ರ ವಿಭಾಗದ ಉಪನ್ಯಾಸಕರಾದ ಶ್ರೀ ಸಂದೀಪ ವನ್ನಾಳೆ ಮಾಡಿದರೆ ಕಾರ್ಯಕ್ರಮವನ್ನು ಹಿಂದಿ ವಿಭಾಗದ ಶ್ರೀ ನೂರ ಪಾಶಾ ವಂದಿಸಿದರು, ಕಾರ್ಯಕ್ರಮದಲ್ಲಿ ಎನ್.ಎಸ್.ಎಸ್. ಶಿಬಿರಾರ್ಥಿಗಳು, ಪ್ರಾಧ್ಯಾಪಕರು, ಬೋಧ–ಕೇತರ ಸಿಬ್ಬಂದಿ ವರ್ಗದವರು ಹಾಜರಿದ್ದರು.

# ವಿಠ್ಠಲನೆಡೆಗೆ ಸಾಗರೋಪಾದಿಯಲ್ಲಿ ಪಂಢರಪುರಕ್ಕೆ ಹೊರಟಿದೆ ಅಗಣಿತ ಭಕ್ತ ವೃಂದ.....!



"ಪಂಢರಪುರವೆಂಬ ದೊಡ್ಡ ನಗರ....ಅಲ್ಲಿವಿಠೋಬನೆಂಬದೊಡ್ಡ ಸಾಹುಕಾರ...ವಿಠೋಬನಿರುವುದು ನದೀ ತೀರ... ಅಲ್ಲಿ ಪಂಢರಿ ಭಜನೆ ವ್ಯಾಪಾರ....!" ಪುರಂದರ ದಾಸರ ಈ ಕೀರ್ತನೆಯಲ್ಲಿ ಭಕ್ತರ ಕೈವಶವಾಗಿರುವ ಪಂಢರಪುರ ಪಾಂಡುರಂಗನ ಮಹಿಮೆ ಅಡಗಿದೆ. "ಕನಕದಾಸೆ ಇವಗಿಲ್ಲಂತೆ.... ಹಣದ ಆಸೆ ಬೇಕಿಲ್ಲವಂತೆ... ನಾದಬ್ರಹ್ಮನೆಂಬೋನಂತೇ.... ಭಕುತರ ಕರೆಗೆ ಒದಗೋನಂತೆ... ಇಟ್ಟಿಗೆ ಮೇಲೆ ನಿಂತ ನಮ್ಮ ವಿಠ್ಠಲ ತಾನು... ಪುಟ್ಟ ಪಾದ ಊರಿ ನಿಂತ ದಿಟ್ಟ ತಾನು.... ವಿಠ್ಠಲ ವಿಠ್ಠಲ ಪಾಂಡುರಂಗ ಜಯ ಹರಿ ವಿಠ್ಠಲ ಪಾಂಡುರಂಗ....!!" ಹರಿದಾಸ ಕೀರ್ತನೆಗಳಲ್ಲಿ ಬರುವ ಈ ಸಾಲುಗಳೇ ಸಾಕು. ಭಕ್ತರ ಪರಾಧೀನನಾದ ಶ್ರೀ ಹರಿ ವಿಠ್ಠಲ ಪಾಂಡುರಂಗ ಕೋಟ್ಯಾಂತರ ಮನಸ್ಸುಗಳನ್ನು ಹೇಗೆ ತನ್ನತ್ತ ಸೆಳೆದಿದ್ದಾನೆ ಊಹಿಸಲು.

ಅಂದಹಾಗೆ....ಪ್ರತಿವರ್ಷ ಆಷಾಢ ಮಾಸ ಆರಂಭವಾಯಿತೆಂದರೆ ಸಾಕು ದಕ್ಷಿಣ ಭಾರತದ ನಾಲ್ಕಾರು ರಾಜ್ಯಗಳಲ್ಲಿ ಅಷ್ಟೇ ಏಕೆ ಜಗತ್ತಿನ ಮೂಲೆ ಮೂಲೆಯಿಂದ ವಿಠ್ಠಲನ ಭಕ್ತರಿಗೆ ಎಲ್ಲಿಲ್ಲದ ಪುಳಕ ಮತ್ತು ಸಂಭ್ರಮ ಪುಟಿದೇಳುತ್ತದೆ. ಭಾವ ಭಾವದಲಿ... ಜೀವ ಜೀವದಲಿ



ಜೀವಸೆಲೆ ಹರಿದಾಡುತ್ತದೆ. ರಸನೆಯಲ್ಲಿ ವಿಠ್ಠಲನ ನಾಮಸ್ಮರಣೆ ಅನುರಣಿಸುತ್ತಿರುತ್ತದೆ. ಆಷಾಢ ಮಾಸದ ಗಾಳಿಯಂತೆ ವಿಠ್ಠಲನ ನಾಮಸ್ಮರಣೆ ಭಕ್ತರ ಧಮನಿ ಧಮನಿಯಲ್ಲಿ ಹರಿದಾಡುತ್ತದೆ. ಹೃದಯ ಹೃದಯಗಳಲ್ಲಿ ಕ್ಷಣ ಕ್ಷಣವೂ 'ವಿಠ್ಠಲ' ನೆಂಬ ವೀಣೆ ಮೀಟುತ್ತಿರುತ್ತದೆ. ಉಸಿರು ಉಸಿರಿನಲ್ಲೂ 'ವಿಠ್ಠಲ' ನ ಘೋಷಣೆ ಮೊಳಗುತ್ತಿರುತ್ತದೆ. ಈ ಬಾರಿಯೂ ವಿಶ್ವಾವಸು ನಾಮ ಸಂವತ್ಸರದ ಜೂನ್ ತಿಂಗಳು 26 ರಿಂದ ಜಾಗತಿಕ ಮಟ್ಟದ ಭಕ್ತರು ಎಲ್ಲೆಡೆಯಿಂದ ಮಹಾರಾಷ್ಟ್ರದ ಪುಣೆ ಜಿಲ್ಲೆಯ ದೇಹು ಮತ್ತು ಆಳಂದಿಯಲ್ಲಿ ಸಂದಣಿಸಿದ್ದು 'ವಾರಿ' ಯ ಪರಂಪರೆಯಲ್ಲಿ ಪಾರಮಾರ್ಥದ ಪಾರಮ್ಯತೆಗೆ ತಮ್ಮನ್ನು ಸಮರ್ಪಿಸಿಕೊಂಡಿದ್ದಾರೆ. ಪಾದಯಾತ್ರೆ ಪಂಢರಪುರದತ್ತ ಭವ್ಯ ಮತ್ತು ದಿವ್ಯತೆಯ ಸಾಕ್ಷಿಯಾಗಿ ಸಾಗುತ್ತಿದೆ.

**ವೈಕುಂಠ ತೋರಿದ್ದ ವಿಠ್ಠಲ:**

ಹದಿನಾಲ್ಕು ಲೋಕಗಳನ್ನು ಆಳುವ ದೊರೆ 'ವಿಠ್ಠಲ'ನೆಂದು ಹರಿದಾಸರು ನಂಬಿದ್ದಾರೆ. ನಮಗೆ ಮರ್ತ್ಯಲೋಕ ಬಿಟ್ಟು ಇನ್ನು ಉಳಿದ ಲೋಕಗಳ ಪರಿಚಯವಿಲ್ಲ. ಹರಿದಾಸರು 'ವಿಠ್ಠಲ'ನ ನೆನೆದು ಭಾವುಕರಾಗಿ ತಮ್ಮ ನೆಚ್ಚಿನ ದೈವವನ್ನು ಸಾಕ್ಷಾತ್ಕರಿಸಿಕೊಂಡಿದ್ದಾರೆ. ಅಗತಣಿತ ಭಕ್ತರಿಗೆ ಅಗಣಿತೋತಮನಾದ 'ವಿಠ್ಠಲ'ನು ತನ್ನ ಇರುವಿಕೆಯನ್ನು ಪ್ರಕಟಿಸಿದ್ದಾನೆ. ಅತ್ಯಂತ ದೀನನಾಗಿ ಪ್ರಾರ್ಥಿಸಿದ್ದ ಪುರಂದರ ದಾಸರು, ಕನಕದಾಸರು, ಅನ್ನಮಾಚಾರ್ಯರು, ಜಗನ್ನಾಥದಾಸರು, ವಿಜಯದಾಸರು, ಗೋಪಾಲ ದಾಸರು, ಶ್ರೀ ರಾಘವೇಂದ್ರ ಸ್ವಾಮಿಗಳು ಹೀಗೆ ಅನೇಕ ಹರಿದಾಸರು ಭಗವಂತನನ್ನು ತಮ್ಮ ನಾಮಸ್ಮರಣೆಯ ಮೂಲಕ ಸಾಕ್ಷಾತ್ಕರಿಸಿಕೊಂಡಿದ್ದಾರೆ. ಅದೇ ರೀತಿ ಮಹಾರಾಷ್ಟ್ರದ ಸಂತ ಜ್ಞಾನೇಶ್ವರ ಮತ್ತು ಸಂತ ತುಕಾರಾಮರೂ ಕೂಡ ವಿಠ್ಠಲನನ್ನು ಸಾಕ್ಷಾತ್ಕರಿಸಿಕೊಂಡಿರುವ ತಾಣಗಳು ಜಗತ್ತಿನ ಗಮನ ಸೆಳೆದಿವೆ. ಸಂತ ತುಕಾರಾಮ ಸಾಮಾನ್ಯ ಭಕ್ತನಾಗಿದ್ದರೂ ಅಸಾಮಾನ್ಯ ಭಕ್ತಿಯಿಂದ ವಿಠ್ಠಲನನ್ನು ಒಲಿಸಿಕೊಂಡಿದ್ದವರು. ಭಕ್ತನಿದ್ದಲ್ಲಿಗೇ ಗರುಡ ವಾಹನದಲ್ಲಿ ಬಂದಿಳಿದ ವಿಷ್ಣು ತನ್ನ ವೈಕುಂಠವನ್ನು



ಪರಿಚಯಿಸಿ ಮತ್ತೆ ತುಕಾರಮನಿದ್ದಲ್ಲಿಗೆ ತಂದು ಬಿಡುವಷ್ಟು ಭಕ್ತರಾಧೀನ 'ಪಾಂಡುರಂಗ' ನೆಂಬ ಐತಿಹ್ಯ ಇಂದಿಗೂ ಇಂದ್ರಾಣಿ ನದಿ ತೀರದಲ್ಲಿ ಹರಿಯುತ್ತಿದೆ.

**200ಕಿ.ಮೀ.ಉದ್ದದ ಪಾದಯಾತ್ರೆ:**

ಸಂತ ಜ್ಞಾನೇಶ್ವರರು ತಮ್ಮ ಬಾಲ್ಯದಲ್ಲಿಯೇ ಭಾಗವತಕ್ಕೆ ತಾತ್ಪರ್ಯ ಬರೆದ ಖ್ಯಾತಿ ಇದೆ. ಈ ಕಾರಣಕ್ಕಾಗಿ ಭಗವಂತ ತನ್ನ ಭಕ್ತರಿಗೆ ಯಾವಾಗ ಬೇಕಾದರೂ, ಎಲ್ಲಿ ಬೇಕಾದರೂ ಬಂದು ಹರಸುತ್ತಾನೆ, ಮೈದಡವಿ ಸಾಯುಜ್ಯ ನೀಡುತ್ತಾನೆ ಎನ್ನುವ ನಂಬಿಕೆ ಹರಿದಾಸ ಪರಂಪರೆಯಲ್ಲಿದೆ. ಈ ಕಾರಣಕ್ಕಾಗಿ ದೇಹು ಮತ್ತು ಆಳಂದಿ ಉಭಯ ಕ್ಷೇತ್ರಗಳು 'ವಿಠ್ಠಲ' ನ ಭಕ್ತರಿಗೆ ವೈಕುಂಠ ಸದೃಶವಾಗಿವೆ. ಇದಕ್ಕೆ ಸಾಕ್ಷಿ ಎನ್ನುವಂತೆ ಇಂದ್ರಾಣಿ ನದಿ ಸುಪ್ತವಾಹಿನಿಯಾಗಿ 'ವಿಠ್ಠಲನ ಗಾಯನ' ದಲ್ಲಿ ಸಾಗುತ್ತಿದ್ದಾಳೆ. ಭಕ್ತರೂ ಸಹಿತ ಆಷಾಢ ಮಾಸದಲ್ಲಿ ಸಾಗರೋಪಾದಿಯಲ್ಲಿ ಜಮಾವಣೆಗೊಂಡು ಅಲ್ಲಿಂದ ದಿಂಡಿಯ ಮೂಲಕ ಪಂಢರಪುರ ಯಾತ್ರೆ ಹೊರಡುತ್ತಾರೆ. ಸುಮಾರು 200 ಕಿ.ಮೀ. ಉದ್ದದ ಪಾದಯಾತ್ರೆ ನಡೆಸುವ ಭಕ್ತರಿಗೆ ಮಹಾರಾಷ್ಟ್ರ ಸರ್ಕಾರವೇ ದೈನ್ಯತೆಯಿಂದ ಭಕ್ತರಿಗೆ ಎಲ್ಲ ರೀತಿಯ ವ್ಯವಸ್ಥೆ ಮಾಡಿರುತ್ತದೆ. ಹಿಂದು, ಮುಸ್ಲಿಂ, ಕ್ರಿಶ್ಚಿಯನ್, ಜೈನ, ಬೌದ್ಧರೆಂಬ ಭೇದ ಇಲ್ಲದೇ ಅನೇಕ ಸಿರಿವಂತ ಭಕ್ತರು ವಾರಿಯಲ್ಲಿ ಪಾಲ್ಗೊಳ್ಳುವ ಎಲ್ಲ ಭಕ್ತರಿಗೆ ದೈನಂದಿನ ಅವಶ್ಯಕತೆಗಳನ್ನು ಒದಗಿಸಿ ಕೃತಾರ್ಥರಾಗುತ್ತಿದ್ದಾರೆ. ಇದು ಜಗತ್ತಿನ ಅತ್ಯಂತ ಶ್ರೇಷ್ಠ ಯಾತ್ರೆ ಎಂದು ಹೇಳಲಾಗುತ್ತಿದೆ.

**ಭಕ್ತಿಯೊಂದೇ ಇಲ್ಲಿ ಶಕ್ತಿ:**

ಇಂದು ಯಾವುದೇ ಕಾರ್ಯಕ್ರಮ ಮಾಡಲು ಸಾಕಷ್ಟು ಪೂರ್ವದಲ್ಲಿ ಯೋಜನೆಗಳು ರೂಪಿಸಿರುತ್ತೇವೆ. ಜನರನ್ನು ಸೇರಿಸಲು ಏನೇಲ್ಲಾ ಮಾಡುತ್ತೇವೆ. ಆದರೂ ನಮ್ಮ ನಿರೀಕ್ಷೆಗೆ ತಕ್ಕಂತೆ ಜನಸಂದಣಿ ಇರುವುದಿಲ್ಲವೆಂದು ಪೇಚಾಡುತ್ತೇವೆ. ಆದರೆ, ದೇಹು-ಆಳಂದಿ ಯಾತ್ರೆಗೆ ಯಾವುದೇ ಮುನ್ಸೂಚನೆ ಇರುವುದಿಲ್ಲ. ಯಾರೂ ಯಾರಿಗೂ ಕರೆಯುವುದಿಲಲ. ಯಾವುದೇ ಸಂಘಟನೆ ಈ ಯಾತ್ರೆಯನ್ನು ಸಂಘಟಿಸುವುದಿಲ್ಲ. ಭಕ್ತರೇ ಈ ಸಮಯದಲ್ಲಿ ಬಂದು ಸೇರುತ್ತಾರೆ. ಇಲ್ಲಿ ಕೇವಲ ಭಕ್ತಿಯೊಂದೇ ಮಾರ್ಗ. ಜಗತ್ತಿನ ಮೂಲೆ ಮೂಲೆಯಿಂದ ಜನರು ಆಷಾಢ



ಆರಂಭವಾಗುತ್ತಿದ್ದಂತೆ ದೇಹು-ಆಳಂದಿಯ ಇಂದ್ರಾಣಿ ನದಿ ತೀರದಲ್ಲಿ ಜಮಾಯಿಸುತ್ತಾರೆ. ಜಗತ್ತಿನ ಅತ್ಯಂತ ಬೃಹತ್ ಪ್ರಮಾಣದಲ್ಲಿ ಹೀಗೆ ಸೇರುವ ತಾಣ ಇದೊಂದೇ. ಈ ಯಾತ್ರೆಯಲ್ಲಿ ಮಿಲಿಯನ್ ಗಟ್ಟಲೆ ಜನರು ಸೇರುತ್ತಾರೆ. ಇಲ್ಲಿ ಯಾವುದೇ ಜಾತಿ, ಭೇದ ಇಲ್ಲ. ವಯಸ್ಸಿನ



ನಿರ್ಬಂಧ ಇಲ್ಲ. ಯಾರು ಬೇಕಾದರೂ ಯಾತ್ರೆಯಲ್ಲಿ ಪಾಲ್ಗೊಳ್ಳಬಹುದು.

**ಏನಿದು ವಾರಿಯ ಇತಿಹಾಸ?:**

ಆಳಂದಿಯು ಮಹಾರಾಷ್ಟ್ರದ ಪುಣೆ ಜಿಲ್ಲೆಯಲ್ಲಿರುವ ಪಟ್ಟಣ. ಇದು ಕ್ರಿ.ಶ.12ನೇ ಶತಮಾನದಿಂದಲೇ ಧಾರ್ಮಿಕ ಕ್ಷೇತ್ರವಾಗಿತ್ತು. ಮರಾಠಿ ಸಂತ ಜ್ಞಾನೇಶ್ವರರ ಸಮಾಧಿ ಸ್ಥಳವಾಗಿ ಪ್ರಸಿದ್ಧವಾಗಿದೆ. 1296ರಲ್ಲಿ ಸಂತ ಜ್ಞಾನೇಶ್ವರರು ಆಗ ಇದ್ದ ಸಿದ್ಧೇಶವರ ದೇವಸ್ಥಾನ ಆವರಣದಲ್ಲಿ ಸಮಾಧಿ ಆದಮೇಲೆ ಪ್ರಾಮುಖ್ಯತೆ ಪಡೆಯಿತು. ಸುಮಾರು 1580-1600ರಲ್ಲಿ ಸಮಾಧಿಯ ಮೇಲೆ ಅಂಬೇಡ್ಕರ್ ದೇಶಪಾಂಡೆ ಒಂದು ದೇವಾಲಯವನ್ನು ಕಟ್ಟಿದರು. ನಂತರ ಬಂದ ಅದ್ವರ್ಯುಗಳು ಜ್ಞಾನೇಶ್ವರರ ಪಾದುಕೆಯನ್ನು ಪಲ್ಲಕ್ಕಿ ಉತ್ಸವದಲ್ಲಿ ಪಂಢರಪುರಕ್ಕೆ ಕೊಂಡೊಯ್ಯುವ ಸಂಪ್ರದಾಯವನ್ನು ಆರಂಭಿಸಿದರು. ಇದನ್ನು ಪಂಢರಪುರ ವಾರಿ ಎಂದು ಕರೆಯುತ್ತಾರೆ. 19ನೇ ಶತಮಾನದ ಕೊನೆಯಲ್ಲಿ ವರ್ಷಕ್ಕೆ ಸುಮಾರು 50 ಸಾವಿರದಷ್ಟು ಯಾತ್ರಿಕರು ಆಳಂದಿಗೆ ಬರುತ್ತಿದ್ದರು. ಅಂದಿನಿಂದ ಈ ಸಂಖ್ಯೆ ವರ್ಷದಿಂದ ವರ್ಷಕ್ಕೆ ದ್ವಿಗುಣಗೊಳ್ಳುತ್ತಲಿದೆ. ಕೋಟ್ಯಾಂತರ ಸಂಖ್ಯೆಯಲ್ಲಿ



ಭಕ್ತರು 'ವಾರಿ ಯಾತ್ರೆ'ಯಲ್ಲಿ ಪಾಲ್ಗೊಳ್ಳುತ್ತಾರೆ.

**ತೀರ್ಥ ಕ್ಷೇತ್ರವಾಗಿ ಪರಿವರ್ತನೆ:**

ವಿಠ್ಠಲ ಭಕ್ತರಾದ ಸಂತ ಜ್ಞಾನೇಶ್ವರರ ಸಮಾಧಿ ದೇಹುವಿನಲ್ಲಿದೆ. ಈ ಸಮಾಧಿಯ ಹಿಂದೆ ವಿಠ್ಠಲ ಮತ್ತು ರುಕ್ಮಿಣಿಯರ ವಿಗ್ರಹಗಳಿವೆ. ಆಳಂದಿಯು ಸಂತ ಜ್ಞಾನೇಶ್ವರರ ಸಮಾಧಿ ಸ್ಥಳವಾಗಿದ್ದು, ಭಾವುಕ ಜನರಿಗೆ ತೀರ್ಥ ಕ್ಷೇತ್ರವಾಗಿದೆ. ಜ್ಞಾನೇಶ್ವರರ ಭಕ್ತರು ತಮ್ಮ ಗುರುಗಳು ಇನ್ನೂ ಬದುಕಿರುವುದಾಗಿ ನಂಬಿದ್ದಾರೆ. ಜ್ಞಾನೇಶ್ವರರ ಸಮಾಧಿಯ ಮೇಲೆ ದೇವಾಲಯ ನಿರ್ಮಿಸಿದ್ದು ಯಾತ್ರಾರ್ಥಿಗಳು, ಮುಖ್ಯವಾಗಿ ವಾರಕರಿ ಪಂಥಕ್ಕೆ ಸೇರಿದವರು ತೀರ್ಥಯಾತ್ರೆಗೆ ಬರುತ್ತಾರೆ. ಪ್ರತಿ ತಿಂಗಳ ಕೃಷ್ಣ ಪಕ್ಷದ ಏಕಾದಶಿಯಂದು ಸುಮಾರು 60-70 ಸಾವಿರ ಭಕ್ತರು ಆಳಂದಿಗೆ ಬರುತ್ತಾರೆ. ಈ ಸಂಖ್ಯೆ ಇದೀಗ ಲಕ್ಷ ಮೀರುತ್ತಿದೆ.

**ಪಂಢರಪುರ ವಾರಿ:**

ಪ್ರತಿ ವರ್ಷ ಪಂಢರಪುರ ವಾರಿ ಎಂಬ 21 ದಿನಗಳ ಪಲ್ಲಕ್ಕಿ ಉತ್ಸವದಲ್ಲಿ ಸಂತ ಜ್ಞಾನೇಶ್ವರರ ಪಾದುಕೆಗಳನ್ನು ಆಳಂದಿಯಿಂದ ಪಂಢರಪುರಕ್ಕೆ ಕೊಂಡೊಯ್ಯಲಾಗುತ್ತದೆ. ಈ ಬಾರಿ ಇದು ಪಂಢರಪುರಕ್ಕೆ ಆಷಾಢ ಏಕಾದಶಿಯಾದ ಜುಲೈ 6 ರಂದು ಬಂದು ತಲುಪುತ್ತದೆ. 200 ಕಿ.ಮಿ. ಉದ್ದ ಸಾಗುವ ಪಲ್ಲಕ್ಕಿ ಉತ್ಸವವನ್ನು ನೋಡಲು ಕೋಟ್ಯಾಂತರ ವಾರಕರಿ ಭಕ್ತರು ಸೇರುತ್ತಾರೆ. ಮಕ್ಕಳು, ಮಹಿಳೆಯರು, ವೃದ್ಧರು ಆದಿಯಾಗಿ ಎಲ್ಲ ಕ್ಷೇತ್ರಗಳ ಜನರೂ ಈ ವಾರಿಯಲ್ಲಿ ಪಾಲ್ಗೊಳ್ಳುವುದು ವಾಡಿಕೆ. ಸಾಗರೋಪಾದಿಯಲ್ಲಿ ಹರಿದು ಬರುವ ಜನರಿಗೆ ಉಳ್ಳವರು ಎಲ್ಲ ರೀತಿಯ ಕೊಡುಗೆಗಳನ್ನು ನೀಡುತ್ತಾರೆ. ಕುಡಿಯುವ ನೀರಿನಿಂದ ಹಿಡಿದು ಅನ್ನ, ವಸ್ತ್ರ ಎಲ್ಲವನ್ನೂ ಭಕ್ತರಿಗೆ ಧಾರೆ ಎರೆಯುತ್ತಾರೆ. ದಣಿದ ಭಕ್ತರಿಗೆ ಉಚಿತ ವೈದ್ಯಕೀಯ ಸೇವೆ ಇರುತ್ತದೆ. ಭಕ್ತರು ಆಳಂದಿಗೆ ಭೇಟಿ ನೀಡಿದಾಗ ಊರಿನ ಸುತ್ತ ಪ್ರದಕ್ಷಿಣೆ ಹಾಕುತ್ತಾರೆ. ಆಳಂದಿ ವ್ಯಾಪ್ತಿಯಲ್ಲಿರುವ ಧಾರ್ಮಿಕ ಮಹತ್ವವುಳ್ಳ ಕ್ಷೇತ್ರಗಳನ್ನು ದರ್ಶಿಸುತ್ತಾರೆ. ಜ್ಞಾನೇಶ್ವರ ಸಮಾಧಿ ಸ್ಮಾರಕ - ಸ್ಮಾರಕದ ಆವರಣದಲ್ಲಿ ಸಮಾಧಿ, ಶ್ರೀ ಸಿದ್ದೇಶ್ವರ ದೇವಾಲಯ ಮತ್ತು ಅಜಾನ್ ವೃಕ್ಷವಿದೆ. ಇಂದ್ರಾಯಣಿ ನದಿ ದಡದಲ್ಲಿರುವ ಘಾಟಿಗಳು. ಇಂದ್ರಾಯಣಿ ನದಿ ದಡದ ಹತ್ತಿರ, ಸಮಾಧಿ ಮಂದಿರದ ದಕ್ಷಿಣದಲ್ಲಿರುವ ರಾಮ ಮಂದಿರವು ಆಳಂದಿಯ ದೊಡ್ಡ ದೇವಸ್ಥಾನಗಳಲ್ಲಿ ಒಂದಾಗಿದೆ. ಲಕ್ಷ್ಮಿ ನಾರಾಯಣ ಮಂದಿರ, ರಾಮ ಮಂದಿರದ ಹತ್ತಿರ, ವಿಠ್ಠಲ-ರುಕ್ಮಿಣಿ, ನರಸಿಂಹ ಸರಸ್ವತಿ ಮಠ, ಶ್ರೀ ಗಜಾನನ ಮಹಾರಾಜ ದೇವಸ್ಥಾನ, ಜ್ಞಾನೇಶ್ವರ ಸಮಾಧಿ ಸ್ಮಾರಕದ ದಕ್ಷಿಣದಲ್ಲಿವೆ. ಭಕ್ತರು ಈ ತಾಣಗಳನ್ನು ದರ್ಶಿಸುತ್ತಾರೆ.

**ಯುನೆಸ್ಕೋ ಪಟ್ಟಿಯಲ್ಲಿ ಸೇರ್ಪಡೆ:**

ವಿಶ್ವ ವಿಖ್ಯಾತ ಪಂಢರಪುರ ವಾರಿಯು ಭಾರತದ ಪರಂಪರೆ ಮತ್ತು ಸಾಂಸ್ಕೃತಿಕ ಹಿರಿಮೆ-ಗರಿಮೆಯನ್ನು ಹೊಂದಿದೆ. ಈ 'ವಾರಿ' ಯಲ್ಲಿ ಪಾಲ್ಗೊಳ್ಳುವ ಪ್ರತಿಯೊಬ್ಬ ಭಕ್ತರನ್ನೂ 'ಮಾವುಲಿ' ಎಂದೇ ಸಂಬೋಧಿಸಲಾಗುತ್ತಿದೆ. 'ಮಾವುಲಿ' ಎಂದರೆ 'ವಿಠ್ಠಲ' ಎಂದರ್ಥ. ಪಾದಯಾತ್ರೆಯ ಸಂದರ್ಭದಲ್ಲಿ ಕುದುರೆ 'ರಿಂಗಣ್' ನಡೆಯುತ್ತದೆ. 'ರಿಂಗಣ್' ನೋಡುವುದೇ ಒಂದು ಚಂದನೆಯ ಪ್ರಕ್ರಿಯೆ. ಇಲ್ಲಿ ಭಕ್ತರು ಚಕ್ರಾಕಾರವಾಗಿ ಸೇರುತ್ತಾರೆ. ರಿಂಗಣ್ ನಲ್ಲಿ ಮೂರು ಸುತ್ತು ಸುತ್ತುವ ಕುದುರೆ ಹೆಜ್ಜೆಗಳ ಮಣ್ಣನ್ನು ಭಕ್ತರು ಹೆಕ್ಕಿ, ಅದನ್ನು ಸಂಗ್ರಹಿಸಿ ಮನೆಯಲ್ಲಿಟ್ಟುಕೊಳ್ಳುತ್ತಾರೆ. ಯಶಸ್ಸು ಮತ್ತು ಕೀರ್ತಿಗಾಗಿ ರಿಂಗಣ್ ಮಣ್ಣು ಶ್ರೇಷ್ಠ. ಮನೆಯಲ್ಲಿ ಯಾವುದೇ ದುಷ್ಟ ಶಕ್ತಿಯ ಪ್ರಲಾಪ ಇರುವುದಿಲ್ಲ. ಶಾಂತಿ ಮತ್ತು ಸಮೃದ್ಧಿಯ ಜೊತೆಗೆ ಸಾತ್ವಿಕ ಗುಣಗಳು ಕುಟುಂಬ ಸದಸ್ಯರಲ್ಲಿ ಮೂಡುತ್ತವೆ ಎನ್ನುವುದು ಭಕ್ತರ ನಂಬಿಕೆ. ಇಲ್ಲಿನ ಯಾತ್ರೆ ಜಗತ್ತಿನ ಯಾವ ಭಾಗದಲ್ಲೂ ಕಾಣಲು ಸಾಧ್ಯವಿಲ್ಲ. ಹೀಗಾಗಿ ಇದು ಯುನೆಸ್ಕೋ ಪರಂಪರಾ ಪಟ್ಟಿಯಲ್ಲಿ ಸೇರ್ಪಡೆಯಾಗಿದೆ.

**ಲೇಖಕರು: ಎಂ.ವಿ.ಜೋಷಿ**

# ಜು.5ರಂದು ಗಿರಿನಾಡಿಗೆ ನಿಖಿಲ್ ಕುಮಾರಸ್ವಾಮಿ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ನಗರದ ಹೊರ ವಲಯದ ಯರಗೋಳ ರಸ್ತೆ ಬಳಿಯ ಸಪ್ತಪದಿ ಕಲ್ಯಾಣ ಮಂಟಪದಲ್ಲಿ ಜು.5ರಂದು ನಡೆಯಲಿರುವ ಜನರೊಂದಿಗೆ ಜನತಾದಳ ಕಾರ್ಯಕ್ರಮ ದಲ್ಲಿ ಭಾಗವಹಿಸಲು ಜೆಡಿಎಸ್ ಯುವ ನಾಯಕ ನಿಖಿಲ್ ಕುಮಾರಸ್ವಾಮಿ ಆಗಮಿಸಲಿದ್ದಾರೆ ಎಂದು ಜೆಡಿಎಸ್ ಜಿಲ್ಲಾ ಅಧ್ಯಕ್ಷ ಸುಭಾಷ್ ಚಂದ್ರ ಕಟಕಟಿ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿದ ಅವರು, ಅಂದು ಬೆಳಗ್ಗೆ 10 ಗಂಟೆಗೆ ಸಪ್ತಪದಿ ಕಲ್ಯಾಣ ಮಂಟಪದಲ್ಲಿ ಸದಸ್ಯತ್ವ ಅಭಿಯಾನ ಕಾರ್ಯಕ್ರಮಕ್ಕೆ ಚಾಲನೆ ನೀಡಲಿದ್ದಾರೆ. ರಾಜ್ಯದ 110 ವಿಧಾನ ಸಭಾ ಕ್ಷೇತ್ರಗಳಲ್ಲಿ 58 ದಿನಗಳವರೆಗೆ ನಡೆಯಲಿದ್ದು, ಕಾರ್ಯಕ್ರಮ ನಂತರ ಶಹಾಪೂರದಲ್ಲಿ ನಡೆಯಲಿರುವ ಕಾರ್ಯಕ್ರಮಕ್ಕೆ ತೆರಳಲಿದ್ದಾರೆ ಎಂದರು.

ಈ ಕಾರ್ಯಕ್ರಮದಲ್ಲಿ ಶಾಸಕ ಶರಣಗೌಡ ಕಂದಕೂರ, ಮಾಜಿ ಸಚಿವರಾದ ಡಾ.ಎ.ಬಿ.ಮಾಲಕರಡ್ಡಿ, ಮಾಜಿ ಶಾಸಕರಾದ ಗುರು ಪಾಟೀಲ ಶಿರವಾಳ, ಜೆಡಿಎಸ್ ಜಿಲ್ಲಾ ಮುಖಂಡರು, ಪದಾಧಿಕಾರಿಗಳು ಭಾಗವಹಿಸಲಿದ್ದು ಎಲ್ಲಾ ಕಾರ್ಯಕರ್ತರು ಕಾರ್ಯಕ್ರಮ ದಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಅವರು ಕೋರಿದ್ದಾರೆ.

# ವ್ಯಕ್ತಿ ಕಾಣೆ ಪತ್ತೆಗೆ ನೇತಾಜಿ ಪೊಲೀಸರ ಮನವಿ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜುಲೈ 02: ಇಲ್ಲಿನ ನೇತಾಜಿ ನಗರ ಪೊಲೀಸ್ ಠಾಣಾ ವ್ಯಾಪ್ತಿಯ ನಿವಾಸಿ ಆಂಜನೇಯ ತಂ ಆದೆಪ್ಪ (26) ಎಂಬ ವ್ಯಕ್ತಿಯು ದಿನಾಂಕ 01-11-0224ರಂದು ಮಧ್ಯಾಹ್ನ 2 ಗಂಟೆಗೆ ಮನೆಯಿಂದ ಮರಳಿ ಕೆಲಸಕ್ಕೆ ಗುಲ್ಬರ್ಗಾಕ್ಕೆ ಹೋಗುತ್ತೇನೆ ಅಂತಾ ಹೇಳಿ ಹೋದವರು ಮರಳಿ ಮನೆಗೆ ಬಾರದೆ ಕಾಣೆಯಾಗಿದ್ದು, ಈ ಕುರಿತು ನೇತಾಜಿ ನಗರ ಪೊಲೀಸ್ ಠಾಣೆಯಲ್ಲಿ ಗುನ್ನೆ ನಂ: 28/2025 ಕಲಂ ರಡಿ ಪ್ರಕರಣ ದಾಖಲಾಗಿದೆ.

# ಯಲಬುರ್ಗಾ ಪೊಲೀಸ್ ಠಾಣೆ: ಕಾಣೆಯಾದವರ ಪತ್ತೆಗೆ ಸಹಕರಿಸಲು ಮನವಿ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಯಲಬುರ್ಗಾ ಪಟ್ಟಣ ಹಾಗೂ ಯಲಬುರ್ಗಾ ತಾಲ್ಲೂಕಿನ ವಿವಿಧ ಗ್ರಾಮಗಳಿಂದ ಕಾಣೆಯಾದ ವ್ಯಕ್ತಿಗಳ ಕುರಿತು ಯಲಬುರ್ಗಾ ಪೊಲೀಸ್ ಠಾಣೆಯಲ್ಲಿ ಮೂರು ಪ್ರತ್ಯೇಕ ಪ್ರಕರಣಗಳು ದಾಖಲಾಗಿವೆ.

ಪ್ರಕರಣ-1: ಗುನ್ನೆ ನಂ: 71/2024

ಯಲಬುರ್ಗಾ ತಾಲ್ಲೂಕಿನ ಬಂಡಿ ಗ್ರಾಮದ ನಿವಾಸಿ ಕಲ್ಲಪ್ಪ ಬಸಪ್ಪ ತೊಂಡಿಹಾಳ ಎಂಬ 47 ವರ್ಷದ ವ್ಯಕ್ತಿಯು 2023 ರ ಅಕ್ಟೋಬರ್ 18 ರಿಂದ ಕಾಣೆಯಾಗಿದ್ದು, ಈವರೆಗೂ ಪತ್ತೆಯಾಗಿರುವುದಿಲ್ಲ. ವ್ಯಕ್ತಿಯು 5 ಅಡಿ ಎತ್ತರ, ಸದೃಢ ಮೈಕಟ್ಟು, ಸಾದಾಗೆಂಪು ಮೈಬಣ್ಣ, ದುಂಡು ಮುಖ ಹೊಂದಿದ್ದು, ಕನ್ನಡ ಭಾಷೆ ಮಾತನಾಡುತ್ತಾರೆ. ಕಾಣೆಯಾದಾಗ ಶರ್ಟ್ ಮತ್ತು ಪ್ಯಾಂಟ್ ಧರಿಸಿದ್ದರು.

ಪ್ರಕರಣ-2: ಗುನ್ನೆ ನಂ: 70/2025

ಯಲಬುರ್ಗಾ ತಾಲ್ಲೂಕಿನ ಮಲಕಸಮುದ್ರ ಗ್ರಾಮದ ಕಲ್ಲಪ್ಪ ಭೀಮಪ್ಪ ಕಲ್ಲೂರು ಎಂಬ 56 ವರ್ಷದ ವ್ಯಕ್ತಿಯು 2023 ರ ಮೇ 15 ರಿಂದ ಕಾಣೆಯಾಗಿದ್ದು, ಈವರೆಗೂ ಪತ್ತೆಯಾಗಿರುವುದಿಲ್ಲ. ವ್ಯಕ್ತಿಯು 5 ಅಡಿ ಎತ್ತರ, ಸದೃಢ ಮೈಕಟ್ಟು, ಸಾದಾಗೆಂಪು ಮೈಬಣ್ಣ, ದುಂಡು ಮುಖ ಹೊಂದಿದ್ದು, ಕನ್ನಡ ಭಾಷೆ ಮಾತನಾಡುತ್ತಾರೆ. ಕಾಣೆಯಾದಾಗ ಅಂಗಿ ಮತ್ತು ಲುಂಗಿ ಧರಿಸಿದ್ದರು.

ಪ್ರಕರಣ-3: ಗುನ್ನೆ ನಂ: 90/2025

ಯಲಬುರ್ಗಾ ತಾಲ್ಲೂಕಿನ ಮಲಕಸಮುದ್ರ ಗ್ರಾಮದ ದ್ಯಾಮಣ್ಣ ಲಕ್ಕಪ್ಪ ಗುರಿಕಾರ ಎಂಬ 55 ವರ್ಷದ ವ್ಯಕ್ತಿಯು 2020 ರ ಫೆಬ್ರವರಿ 21 ರಿಂದ ಕಾಣೆಯಾಗಿದ್ದು, ಈವರೆಗೂ ಪತ್ತೆಯಾಗಿರುವುದಿಲ್ಲ. ವ್ಯಕ್ತಿಯು 5 ಅಡಿ ಎತ್ತರ, ಸದೃಢ ಮೈಕಟ್ಟು, ಸಾದಾಕೆಂಪು ಮೈ ಬಣ್ಣ, ದುಂಡು ಮುಖ ಹೊಂದಿದ್ದು, ಕನ್ನಡ ಭಾಷೆ ಮಾತನಾಡುತ್ತಾರೆ. ಕಾಣೆಯಾದಾಗ ಅಂಗಿ, ದೋತರ ಧರಿಸಿದ್ದರು. ಮೇಲ್ಕಂಡ ಚಹರೆಯ ವ್ಯಕ್ತಿಗಳ ಕುರಿತು ಯಾರಿಗಾದರೂ ಮಾಹಿತಿ ಇದ್ದಲ್ಲಿ ಅಥವಾ ದೊರೆತಲ್ಲಿ ಯಲಬುರ್ಗಾ ಪೊಲೀಸ್ ಠಾಣೆ ಪಿಎಸ್ಐ ದೂ.ಸಂ: 08534-220133, 9480803749, ಕೊಪ್ಪಳ ಕಂಟ್ರೋಲ್ ರೂಂ: 08539-220222 ಸಂಪರ್ಕಿಸಿ ಮಾಹಿತಿ ನೀಡಬೇಕು. ಕಾಣೆಯಾದ ವ್ಯಕ್ತಿಗಳ ಬಗ್ಗೆ ಮಾಹಿತಿ ನೀಡಿದಲ್ಲಿ ನಗದು ಬಹುಮಾನ ನೀಡಲಾಗುವುದು ಎಂದು ಯಲಬುರ್ಗಾ ಪೊಲೀಸ್ ಠಾಣೆ ಪಿಎಸ್ಐ ಪ್ರಕಟಣೆಯಲ್ಲಿ ಕೋರಿದ್ದಾರೆ.

# ಬೆಳೆ ವಿಮೆ ಜಿಲ್ಲೆಯ ಎಲ್ಲಾ ರೈತರಿಗೆ ಮಾಡಲು ತಿಳಿಸಿ- ಜಿಲ್ಲಾಧಿಕಾರಿ ಸುರೇಶ ಬಿ. ಇಟ್ನಾಳ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕೊಪ್ಪಳ ಜಿಲ್ಲೆಯಲ್ಲಿ ಈ ಸಲ ಮಳೆ ಆಶಾದಾಯವಾಗಿ ಕಂಡು ಬರುತ್ತಿಲ್ಲ ಹಾಗಾಗಿ ಜಿಲ್ಲೆಯ ಎಲ್ಲಾ ರೈತರಿಗೆ ಬೆಳೆ ವಿಮೆ ಮಾಡಲು ತಿಳಿಸಬೇಕೆಂದು ಜಿಲ್ಲಾಧಿಕಾರಿ ಸುರೇಶ ಬಿ. ಇಟ್ನಾಳ ಅವರು ಕೃಷಿ ಇಲಾಖೆಯ ಜಂಟಿ ನಿರ್ದೇಶಕರಿಗೆ ಸೂಚನೆ ನೀಡಿದರು.

ಅವರು ಸೋಮವಾರ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಕರೆದ ಕೃಷಿ ಹಾಗೂ ಕೃಷಿ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಕರೆದ ಸಭೆಯಲ್ಲಿ ಅಧ್ಯಕ್ಷತೆವಹಿಸಿ ಮಾತನಾಡಿದರು.

ಇಲ್ಲಿಯವರೆಗೆ ಸರಿಯಾಗಿ ಜಿಲ್ಲೆಯಲ್ಲಿ ಮಳೆಯಾಗಿಲ್ಲ ಮುಂದೆಯು ಹೀಗೆ ಆದರೆ ರೈತರಿಗೆ ಕಷ್ಟವಾಗುತ್ತದೆ. ರೈತರು ಬೆಳೆ ವಿಮೆ ಈ ವರ್ಷ ಹೆಚ್ಚಿನ ಸಂಖ್ಯೆಯಲ್ಲಿ ಮಾಡಿಸಬೇಕು. ಕಳೆದ ವರ್ಷ ಎಷ್ಟು ಮಾಡಿದ್ದಾರೆ ಈ ಕುರಿತು ಅವರಿಗೆ ಸರಿಯಾಗಿ ಮಾಹಿತಿ ನೀಡಿ ಎಂದು ಕೃಷಿ ಇಲಾಖೆಯ ಅಧಿಕಾರಿಗಳಿಗೆ ಹೇಳಿದರು.

ಜಿಲ್ಲೆಯಲ್ಲಿ ಕ್ರಾಫ್ ಕಟಿಂಗ್ ಎಕ್ಸಪೇರಿಮಿಂಟ ಹೇಗೆ ನಡೆಯುತ್ತಿದೆ ಕಳೆದ ಸಲ ಏನಾದರೂ ಸಮಸ್ಯೆಗಳಾಗಿದ್ದರೆ ಅವುಗಳು ಈ ಸಲ ಮರುಕಳಿಸದಂತೆ ನೋಡಿಕೊಳ್ಳಬೇಕು. ತಮಗೆವಹಿಸಿದ ಕೆಲಸವನ್ನು ಜವಾಬ್ದಾರಿಯಿಂದ ಮಾಡಬೇಕು ಯಾವುದೇ ನೆಪ ಹೇಳುವಹಾಗಿಲ್ಲ ಎಂದರು.

ಸಾಮಾಜಿಕ ಅರಣ್ಯ ವಿಭಾಗದಿಂದ ಬರುವ ವರ್ಷ ಜಿಲ್ಲೆಯಲ್ಲಿ ಒಂದು ಲಕ್ಷ ಗಿಡಗಳನ್ನು ಹಚ್ಚಬೇಕು. ರಸ್ತೆಯ ಎಲ್ಲಾ ಕಡೆಗಳಲ್ಲಿ ಹಚ್ಚುವುದರ ಜೊತೆಗೆ ಸಮಾಜ ಕಲ್ಯಾಣ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ವಸತಿ ನಿಲಯಗಳ ಕಾಂಪೌಂಡ್ ಒಳಗಡೆ ಆಯಾ ಇಲಾಖೆಯಿಂದ ಅವರಿಗೆ ಎಷ್ಟು ಗಿಡಗಳನ್ನು ಬೇಕು ಎಂಬ ಮಾಹಿತಿ ಪಡೆದು ಅವರಿಗೆ ಗಿಡಗಳನ್ನು ನೀಡಲು ಉಪ ಅರಣ್ಯ ಸಂರಕ್ಷಣಾಧಿಕಾರಿ ಹುಸೇನ ಪೆಂಡಾರಿಗೆ ಸೂಚನೆ ನೀಡಿದರು.

ಕೃಷಿ ಸಂಬಂಧಿಸಿದ ಇಲಾಖೆಗಳು ಹಾಕಿಕೊಂಡ ಐದು ವರ್ಷಗಳ ಮಾಹಿತಿಯನ್ನು ಪಡೆದ ಜಿಲ್ಲಾಧಿಕಾರಿಗಳು. ಪೊಟೇಶನಲ್ ಜಿಐ ಟ್ಯಾಗ್ ಯಾವ ಉತ್ಪನ್ನ ನಮ್ಮ ಜಿಲ್ಲೆಯಲ್ಲಿದೆ. ಶ್ರೀ ಗಂಧ ಬೆಳೆಸುವವರಿಗೆ ಜಿಲ್ಲೆಯಲ್ಲಿ ಪ್ರೊಮೋಟ ಮಾಡಿ. ಯಾವುದೇ ಬೀಜ ಮತ್ತು ರಸಗೊಬ್ಬರಗಳ ಸಮಸ್ಯೆಗಳಾಗದಂತೆ ಕೃಷಿ ಇಲಾಖೆಯ ಅಧಿಕಾರಿಗಳು ನೋಡಿಕೊಳ್ಳಬೇಕು ಎಂದರು.

ಪಶು ಸಂಗೋಪನೆ. ಹೈನುಗಾರಿಕೆ. ಮೀನು ಗಾರಿಕೆ. ಕೋಳಿ ಸಾಕಾಣಿಕೆ. ರೇಷ್ಮೆ. ರೈಸ್ ಟೆಕ್ನಾಲಜಿ ಪಾರ್ಕ್ ಸೇರಿದಂತೆ ಇತರೆ ಕೃಷಿ ಸಂಬಂಧಿಸಿದ ಇಲಾಖೆಯ ವಿಷಯಗಳ ಕುರಿತು ಜಿಲ್ಲಾಧಿಕಾರಿಗಳು ಸಭೆಯಲ್ಲಿ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳೊಂದಿಗೆ ಚರ್ಚಿಸಿದರು.

ಸಭೆಯ ನಂತರ ಜಿಲ್ಲಾಧಿಕಾರಿಗಳು ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ ಬಿಮಾ ಯೋಜನೆ ಕರಪತ್ರಗಳನ್ನು ಬಿಡುಗಡೆಗೊಳಿಸಿದರು.

ಈ ಸಭೆಯಲ್ಲಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ. ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ. ಕೃಷಿ ಇಲಾಖೆಯ ಜಂಟಿ ನಿರ್ದೇಶಕರಾದ ರುದ್ರೇಶಪ್ಪ ಟಿ. ತೋಟಗಾರಿಕೆ ಇಲಾಖೆಯ ಉಪನಿರ್ದೇಶಕ ಕೃಷ್ಣ ಉಕ್ಕುಂದ. ಉಪ ಅರಣ್ಯ ಸಂರಕ್ಷಣಾಧಿಕಾರಿ ಹುಸೇನ್ ಪೆಂಡಾರಿ ಸೇರಿದಂತೆ ಕೃಷಿ ಹಾಗೂ ಇತರೆ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಪ್ರವಾಸಿ ಮಿತ್ರ ಸಿಬ್ಬಂದಿಗಳಿಗೆ ಸಮವಸ್ತ್ರ ವಿತರಣೆ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕೊಪ್ಪಳ ಜಿಲ್ಲೆಯ ಪ್ರವಾಸಿ ತಾಣಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಒಟ್ಟು 20 ಪ್ರವಾಸಿ ಮಿತ್ರ ಸಿಬ್ಬಂದಿಗಳಿಗೆ ಜಿಲ್ಲಾಧಿಕಾರಿಗಳಾದ ಸುರೇಶ ಬಿ.ಇಟ್ನಾಳ ಅವರು ಜೂನ್ 30 ರಂದು ಜಿಲ್ಲಾಡಳಿತ ಭವನದಲ್ಲಿ ಸಮವಸ್ತ್ರದ ಕಿಟ್ ವಿತರಿಸಿದರು.

ಸಮವಸ್ತ್ರ ಕಿಟ್‌ನಲ್ಲಿ 02 ಜೊತೆ ಖಾಕಿ ಸಮವಸ್ತ್ರ, ಒಂದು ಜೊತೆ ಶೂ, ಒಂದು ಬ್ಲಾಕ್ ಬೆಲ್ಟ್, ಪ್ರವಾಸಿ ಮಿತ್ರ ಬಕಲ್, ಒಂದು ಕ್ಯಾಪ್, ಒಂದು ಜಾಕೆಟ್, ಸೈಡ್ ಮತ್ತು ಶೋಲ್ಡರ್ ಬ್ಯಾಡ್ಜ್ ಮತ್ತು ನೇಮ್‌ಬೋರ್ಡ್‌ಗಳನ್ನು ಒಳಗೊಂಡಿದೆ. ತುಮಕೂರು ಜಿಲ್ಲೆಯ ಗುಬ್ಬಿ ತಾಲ್ಲೂಕಿನ ಕಲ್ಲೂರಿನ ಹತ್ತಿ ಕೈಮಗ್ಗ ನೇಕಾರರ ಸಂಘ ನಿಯಮಿತ(ರಿ) ದಿಂದ ಸಮವಸ್ತ್ರಗಳನ್ನು ಸಿದ್ದಪಡಿಸಲಾಗಿದೆ.

ಈ ಸಂದರ್ಭ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ರಾಮ್ ಎಲ್.ಅರಸಿದ್ದಿ ಹಾಗೂ ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕರಾದ ನಾಗರಾಜ ಸೇರಿದಂತೆ ಪ್ರವಾಸಿ ಮಿತ್ರ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ವಚನ ಸಾಹಿತ್ಯ ಸಂರಕ್ಷಣೆಗೆ ತಮ್ಮ ಜೀವನವನ್ನೇ ಮುಡಿಪಾಗಿಟ್ಟವರು ಡಾ.ಫ.ಗು.ಹಳಕಟ್ಟಿ–ಕೆ.ಇ.ಚಿದಾನಂದಪ್ಪ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.02–ಾ.ಫಕೀರಪ್ಪ ಗುರುಬಸಪ್ಪಹಳಕಟ್ಟಿಯವರುವಚನ ಸಾಹಿತ್ಯ ಸಂರಕ್ಷಣೆಯಲ್ಲಿ ತಮ್ಮ ಜೀವನವನ್ನೇಮುಡಿಪಾಗಿಟ್ಟಿದ್ದರು ಎಂದುಜಿಲ್ಲಾಗ್ಯಾರಂಟಿಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ ಅವರು ಹೇಳಿದರು.



ಜಿಲ್ಲಾಡಳಿತ,ಜಿಲ್ಲಾಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ಡಾ. ರಾಜ್‌ಕುಮಾರ್ ರಸ್ತೆಯ ಸಾಂಸ್ಕೃತಿಕ ಸಮುಚ್ಚಯದ ಹೊಂಗಿರಣದಲ್ಲಿ ಬುಧವಾರ ಡಾ.ಫ.ಗು.ಹಳಕಟ್ಟಿಯವರಜನ್ಮದಿನದ ಅಂಗವಾಗಿಆಯೋಜಿಸಿದ್ದ 'ವಚನ ಸಾಹಿತ್ಯಸಂರಕ್ಷಣಾ ದಿನಾಚರಣೆ' ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಶರಣರಜೀವನ ಮೌಲ್ಯಗಳನ್ನು ಕಾಲಾತೀತವಾದ ಕಾಲಗರ್ಭದಲ್ಲಿ, ಹುದುಗಿ ಹೋಗಿದ್ದ ವಚನ ಸಾಹಿತ್ಯವನ್ನುಶೋಧಿಸಿ,ಅನ್ವೇಷಿಸಿ ಸಂಗ್ರಹಿಸಿ, ಸಂಪಾದಿಸಿ ಪ್ರಕಟಿಸಿ ಸಂಶೋಧನಾ ಕ್ಷೇತ್ರಕ್ಕೆ ಡಾ.ಫ. ಗು.ಹಳಕಟ್ಟಿ ಅವರು ದೊಡ್ಡ ಕೊಡುಗೆ ನೀಡಿದ್ದಾರೆ ಎಂದು ತಿಳಿಸಿದರು.

ಒಂದು ವೇಳೆ ಶರಣ ಸಾಹಿತ್ಯದ ಕಡೆಗೆ ಲಕ್ಷ್ಮೀ ಹರಿಸದೇ ಇದ್ದರೆ ಇಂದು ನಮಗೆ ಹಲವಾರು ಶರಣರ,ವಚನಕಾರರ ವಚನಗಳು ದೊರಕುತ್ತಿರಲಿಲ್ಲ. ಕತ್ತಲ ಕಾಲ ಗರ್ಭದಲ್ಲಿದ್ದ ವಚನಗಳನ್ನು ಒಬ್ಬ ಸಾಮಾನ್ಯವಕೀಲರಾಗಿದ್ದುಕೊಂಡು ಶರಣರ ತತ್ವಾದರ್ಶಗಳು ಅವರೊಳಗಿದ್ದ ವೈಚಾರಿಕ ಮಾನವ ಪ್ರಜ್ಞೆಯನ್ನು ಎತ್ತಿ ತೋರಿಸಿದ ಕೀರ್ತಿ ಡಾ.ಫ.ಗು. ಹಳಕಟ್ಟಿ ಅವರಿಗೆ ಸಲ್ಲುತ್ತದೆ ಎಂದರು.

ರಾವ್ ಬಹುದ್ದೂರ್ ವೈ.ಮಹಾಬಲೇಶ್ವರಪ್ಪ ಇಂಜಿನಿಯರಿಂಗ್ ಕಾಲೇಜಿನ ಪ್ರಾಧ್ಯಾಪಕ ಡಾ.ಎ.ತಿಮ್ಮನಗೌಡ ಅವರು ವಿಶೇಷ ಉಪನ್ಯಾಸದಲ್ಲಿ ಮಾತನಾಡಿ, ಡಾ.ಫ.ಗು. ಹಳಕಟ್ಟಿಯವರದು ವೈವಿಧ್ಯಮಯ ವ್ಯಕ್ತಿತ್ವ. ಶಿಕ್ಷಣ, ಸಾಹಿತ್ಯ ಮತ್ತು ಸಹಕಾರ ಕ್ಷೇತ್ರಗಳಿಂದ ಬಾಳು ಬಂಗಾರ ಎಂದು ತಿಳಿದವರು. ಕನ್ನಡ ಮತ್ತು ಕರ್ನಾಟಕ ಅವರ ಜೀವನದ ಉಸಿರಾಗಿತ್ತು ಎಂದು ಹೇಳಿದರು.

1880 ಜುಲೈ 2 ರಂದು ಜನಿಸಿದ ಡಾ.ಫ.ಗು.ಹಳಕಟ್ಟಿ ಅವರು ಧಾರವಾಡದ ಗುರುಬಸಪ್ಪ ಹಳಕಟ್ಟಿಯವರ ಪುತ್ರನಾಗಿ ತಂದೆಯ ಸಮಾಜ ಸೇವಾಸಕ್ತ ಶರಣ ಗುಣಗಳನ್ನು ಬಳುವಳಿಯಾಗಿ ಪಡೆದುಕೊಂಡು ಮದ್ರಾಸ್‌ನಲ್ಲಿ ಉನ್ನತ ಶಿಕ್ಷಣ ಪಡೆದು ವಿಜಯಪುರದಲ್ಲಿ ವಕೀಲಿ ವೃತ್ತಿ ಆರಂಭಿಸಿದರು ಎಂದು ಹೇಳಿದರು.

ಡಾ.ಫ.ಗು.ಹಳಕಟ್ಟಿಯವರು ಮನೆ, ಮಠ, ಜಗುಲಿಗಳಲ್ಲಿ ಪೂಜಿಸುತ್ತಿದ್ದ ತಾಡೋಲೆಗಳನ್ನು ಹುಡುಕಿ ತಂದು, ವಚನಗಳನ್ನು ಮುದ್ರಿಸಿದವರು. ಹಳಕಟ್ಟಿಯವರು ಸ್ವತಃ ಮೊಳೆಗಳನ್ನು ಜೋಡಿಸಿ, ಅಚ್ಚು ಹಾಕಿ, ಪೆಡಲ್ ತುಳಿದು, ಮುದ್ರಿಸಿ ಪ್ರಕಟಿಸಿದ ಸಾಹಿತ್ಯದಿಂದ 250 ವಚನಕಾರರ ವಚನಗಳನ್ನು, ಸಾಹಿತ್ಯವನ್ನು ಹೊರತಂದರು. ಆ ಮುಂಚೆ ಕೇವಲ 50 ವಚನಕಾರರ ವಚನಗಳು ಬೆಳಕು ಕಂಡಿದ್ದವು. ಇದು ವಚನ ಸಾಹಿತ್ಯಕ್ಕೆ ಅವರು ನೀಡಿದ ಅಮೋಘ ಕೊಡುಗೆ. ಹಾಗಾಗಿ ಅವರನ್ನು 'ವಚನ ಪಿತಾಮಹ' ಎಂದು ಕರೆಯಲಾಗುತ್ತದೆ ಎಂದು ತಿಳಿಸಿದರು.

ಡಾ.ಫ.ಗು.ಹಳಕಟ್ಟಿ ಅವರ ಸಾಹಿತ್ಯ ಸೇವೆ ಮೆಚ್ಚಿ 1926ರಲ್ಲಿ ಬಳ್ಳಾರಿಯಲ್ಲಿ ನಡೆದ 12ನೇ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಅಧ್ಯಕ್ಷರಾಗಿ ಆಯ್ಕೆಯಾಗಿದ್ದರು ಎಂದು ಈ ಸಂದರ್ಭದಲ್ಲಿ ಮೆಲುಕು ಹಾಕಿದರು.

ಕಾರ್ಯಕ್ರಮದಲ್ಲಿ ಬಳ್ಳಾರಿಯ ದೊಡ್ಡಯ್ಯ ವಿ.ಕಲ್ಲೂರು ಅವರ ತಂಡದವರು ವಚನ ಸಂಗೀತ ಪ್ರಸ್ತುತಪಡಿಸಿದರು.

ಈ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕನಿರ್ದೇಶಕಬಿ.ನಾಗರಾಜ, ಉಪತಹಶೀಲ್ದಾರ ಮಹಮ್ಮದ್ ಸಾಧಿಕ್ ಭಾಷಾ, ಜಿಲ್ಲಾ ದೈಹಿಕ ಶಿಕ್ಷಕ ಕೊಟ್ರೇಶ್, ನಿವೃತ್ತ ಪಿಎಸ್‌ಐ ಹುಸೇನ್ ಸೇರಿದಂತೆ ವಿವಿಧ ಶಾಲಾ–ಕಾಲೇಜು ವಿದ್ಯಾರ್ಥಿಗಳು ಹಾಗೂ ಇತರರು ಉಪಸ್ಥಿತರಿದ್ದರು.

# 'ರಾಷ್ಟ್ರಕ್ಕಾಗಿ ಮಧ್ಯಸ್ಥಿಕೆ' – ವಿಶೇಷ ಅಭಿಯಾನ: ನ್ಯಾ.ಕೆ.ಜಿ.ಶಾಂತಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.02–ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಬೆಂಗಳೂರು ಮತ್ತು ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ಮಧ್ಯಸ್ಥಿಕೆ ಸಂಧಾನ ಯೋಜನಾ ಸಮಿತಿ ವತಿಯಿಂದ 'ರಾಷ್ಟ್ರಕ್ಕಾಗಿ ಮಧ್ಯಸ್ಥಿಕೆ ಅಭಿಯಾನ' ವು ಜುಲೈ 01, 2025 ರಿಂದ ಅಕ್ಟೋಬರ್ 07, 2025ರವರೆಗೆ ನಿಗದಿಪಡಿಸಲಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಕೆ.ಜಿ.ಶಾಂತಿ ಅವರು ತಿಳಿಸಿದ್ದಾರೆ.

'ರಾಷ್ಟ್ರಕ್ಕಾಗಿ ಮಧ್ಯಸ್ಥಿಕೆ' ಅಭಿಯಾನವು ದೇಶದ ಎಲ್ಲಾ ತಾಲ್ಲೂಕು ನ್ಯಾಯಾಲಯಗಳು, ಜಿಲ್ಲಾ ನ್ಯಾಯಾಲಯಗಳು ಮತ್ತು ಹೈಕೋರ್ಟ್‌ಗಳಲ್ಲಿ ಬಾಕಿ ಇರುವ ಪ್ರಕರಣಗಳನ್ನು ಮಧ್ಯಸ್ಥಿಕೆಯ ಮೂಲಕ ಇತ್ಯರ್ಥಪಡಿಸಲು ಇದು 90 ದಿನಗಳ ತೀವ್ರವಾದ ಅಭಿಯಾನವಾಗಿದೆ.

ಸುಪ್ರೀಂ ಕೋರ್ಟ್‌ನ ಮಧ್ಯಸ್ಥಿಕೆ ಮತ್ತು ಸಂಧಾನ ಯೋಜನಾ ಸಮಿತಿಯ ಸಹಯೋಗದೊಂದಿಗೆ ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರವು ಭಾರತದ ಮುಖ್ಯ ನ್ಯಾಯಮೂರ್ತಿ ಮತ್ತು ಭಾರತದ ಸುಪ್ರೀಂಕೋರ್ಟ್‌ನ ನ್ಯಾಯಾಧೀಶರು ಮತ್ತು ಎನ್‌ಎಎಲ್‌ಎಸ್‌ಎ ಕಾರ್ಯನಿರ್ವಾಹಕ ಅಧ್ಯಕ್ಷರು ಮತ್ತು ಎಂಸಿಪಿಸಿ ಅಧ್ಯಕ್ಷರು ಆದ ನ್ಯಾಯಮೂರ್ತಿ ಸೂರ್ಯಕಾಂತ್ ಅವರ ಮಾರ್ಗದರ್ಶನದಲ್ಲಿ ರಾಷ್ಟ್ರಕ್ಕಾಗಿ ವಿಶೇಷ ಮಧ್ಯಸ್ಥಿಕೆ ಅಭಿಯಾನ ರೂಪಿಸಿದೆ.

ಹಾಗಾಗಿ ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ 'ರಾಷ್ಟ್ರಕ್ಕಾಗಿ ಮಧ್ಯಸ್ಥಿಕೆ' ಅಭಿಯಾನದಂತೆ ಜುಲೈ 1, 2025 ರಿಂದ ಅಕ್ಟೋಬರ್ 7, 2025 ರವರೆಗೆ ಮಧ್ಯಸ್ಥಿಕೆ ಮೂಲಕ ರಾಜಿಯಾಗಬಹುದಾದ ಕ್ರಿಮಿನಲ್ ಮತ್ತು ಸಿವಿಲ್ ಪ್ರಕರಣಗಳನ್ನು ಮಧ್ಯಸ್ಥಿಕೆ ಮೂಲಕ ಇತ್ಯರ್ಥಪಡಿಸಲಿದ್ದು, ಈ ಅಭಿಯಾನಕ್ಕೆ ಎರಡೂ ಜಿಲ್ಲೆಯ ವಕೀಲರು ಮತ್ತು ಕಕ್ಷಿದಾರರು ಸಹ ಸಹಕಾರ ನೀಡಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಜಯನಗರ ಶ್ರೀ ಕೃಷ್ಣದೇವರಾಯ ವಿವಿಯಲ್ಲಿ ಎರಡು ಪ್ರಕರಣಗಳ ತನಿಖೆ ಆರಂಭ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.02–ಳ್ಳಾರಿಯ ವಿಜಯನಗರಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದಲ್ಲಿ ಕಾನೂನು ಬಾಹಿರವಾಗಿ ನಡೆದ ಎರಡು ಪ್ರಕರಣಗಳ ಕುರಿತು ತನಿಖೆಗೆ ನೇಮಿಸಿದ ಬೆಳಗಾವಿ ಜಿಲ್ಲಾ ಸತ್ರ ನ್ಯಾಯಾಲಯದ ನಿವೃತ್ತ ಜಿಲ್ಲಾ ನ್ಯಾಯಾಧೀಶರಾದ ಡಿ.ಎಸ್.ಶಿಂಧೆ ಅವರ ನೇತೃತ್ವದಲ್ಲಿ ತನಿಖೆ ಆರಂಭಗೊಂಡಿದೆ ಎಂದು ವಿವಿಯ ಕುಲಪತಿ ಪ್ರೊ. ಎಂ.ಮುನಿರಾಜು ಅವರು ತಿಳಿಸಿದ್ದಾರೆ. ಘಟಿಕೋತ್ಸವ ಪ್ರಮಾಣ ಪತ್ರಗಳ ಕಾನೂನು ಬಾಹಿರ ವಿತರಣೆ ಪ್ರಕರಣ ಕುರಿತಂತೆ ಈಗಾಗಲೇ ಮಂಗಳವಾರ ಮತ್ತು ಬುಧವಾರದಂದು ಕೆಲ ದಾಖಲಾತಿಗಳ ಪರಿಶೀಲನೆ ಕೈಗೊಳ್ಳಲಾಗಿದೆ. ಮುಂದಿನ ವಿಚಾರಣೆ ಜು.09 ರಂದು ನಿಗದಿಪಡಿಸಲಾಗಿದ್ದು, ಪ್ರಕರಣ–ಕ್ಕೆ ಸಂಬಂಧಿಸಿದ ವಿದ್ಯಾರ್ಥಿ ಸಾಕ್ಷಿದಾರರ ಹಾಗೂ ಪರೀಕ್ಷಾ ವಿಭಾಗದ ಸಿಬ್ಬಂದಿಗಳ ವಿಚಾರಣೆ ಕೈಗೊಳ್ಳಲಾಗುತ್ತದೆ ಎಂದು ಹೇಳಿದ್ದಾರೆ.

ಮತ್ತೊಂದು ಪ್ರಕರಣವಾದ ಡಾ.ಅನಂತ್ ಎಲ್ ಝುಂಡೇಕರ್ ಅವರ ಪ್ರಕರಣದ ವಿಚಾರಣೆಯನ್ನು ಸಹ ಕೈಗೆತ್ತಿಕೊಳ್ಳಲಾಗಿದ್ದು, ತನಿಖೆ ಪ್ರಗತಿಯಲ್ಲಿದೆ.

ಎರಡು ಪ್ರಕರಣಗಳ ಕುರಿತಂತೆ ಯಾವುದೇ ಆಂತರಿಕ ಹಾಗೂ ಬಾಹ್ಯ ಒತ್ತಡಗಳಿಗೆ ಒಳಗಾಗದೇ ನಿಷ್ಪಕ್ಷಪಾತವಾಗಿ ತನಿಖೆ ಕೈಗೊಳ್ಳುವಂತೆ ನಿವೃತ್ತ ನ್ಯಾಯಾಧೀಶರಿಗೆ ಬೆಂಬಲ ನೀಡಲಾಗುತ್ತಿದ್ದು, ಮುಂದಿನ ದಿನಗಳಲ್ಲಿ ಪ್ರಕರಣಗಳ ಕುರಿತು ಮಾಹಿತಿ ನೀಡಲಾಗುವುದು ಎಂದು ಎಂದು ವಿಶ್ವವಿದ್ಯಾಲಯದ ಕುಲಪತಿಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಬಕೊವಿ ಜಿಲ್ಲಾ ಹಾಲು ಉತ್ಪಾದಕರ ಸಂಘದ ಆಡಳಿತ ಮಂಡಳಿಯ ನಿರ್ದೇಶಕರ ಚುನಾವಣೆಗೆ ಒಟ್ಟು 52 ಉಮೇದುವಾರಿಕೆ ಸಲ್ಲಿಕೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.02–ರಾಯಚೂರು, ಬಳ್ಳಾರಿ, ಕೊಪ್ಪಳ ಮತ್ತು ವಿಜಯನಗರ ಜಿಲ್ಲೆಗಳ ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟದ ಆಡಳಿತ ಮಂಡಳಿ ನಿರ್ದೇಶಕರ ಚುನಾವಣೆಗೆ ಒಟ್ಟು 52 ನಾಮಪತ್ರ ಸಲ್ಲಿಕೆಯಾಗಿವೆ.

ರಾಯಚೂರು–15, ಬಳ್ಳಾರಿ ಜಿಲ್ಲೆ–15, ಕೊಪ್ಪಳ–22 ಸೇರಿ ಒಟ್ಟು 52 ನಾಮಪತ್ರ ಸಲ್ಲಿಕೆಯಾಗಿವೆ.

ಜುಲೈ 02 ನಾಮಪತ್ರ ಸಲ್ಲಿಸಲು ಕೊನೆಯ ದಿನವಾಗಿತ್ತು. ಜುಲೈ 03 ರಂದು ನಾಮಪತ್ರಗಳ ಪರಿಶೀಲನೆ ನಡೆಯಲಿದೆ. ಅದೇ ದಿನ ಕ್ರಮಬದ್ಧ ನಾಮಪತ್ರಗಳ ಘೋಷಣೆ ಮಾಡಲಾಗುತ್ತದೆ.

ನಾಮಪತ್ರಗಳನ್ನು ಹಿಂಪಡೆಯಲು ಜುಲೈ 04 ಕೊನೆಯ ದಿನವಾಗಿದೆ. ಜುಲೈ 10 ರಂದು ಮತದಾನ ನಡೆಯಲಿದೆ. ಅದೇ ದಿನ ಫಲಿತಾಂಶ ಪ್ರಕಟವಾಗಲಿದೆ ಎಂದು ರಾಯಚೂರು, ಬಳ್ಳಾರಿ, ಕೊಪ್ಪಳ ಮತ್ತು ವಿಜಯನಗರ ಜಿಲ್ಲೆಗಳ ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟದ ಚುನಾವಣಾಧಿಕಾರಿಯೂ ಆದ ಸಹಾಯಕ ಆಯುಕ್ತ ಪಿ.ಪ್ರಮೋದ್ ಅವರು ತಿಳಿಸಿದ್ದಾರೆ.



ಹುಮನಾಬಾದ:ಪಟ್ಟಣದ ಶ್ರೀ ವೀರಭದ್ರೇಶ್ವರ ಕಲ್ಯಾಣ ಮಂಟಪದಲ್ಲಿ ಮಂಗಳವಾರ ಶಿರಡಿ ಓಂ ಶ್ರೀ ನಾಗಭೂಷಣ ಅಪ್ಪಾಜೀರವರ 64ನೇ ವರ್ಷದ ಹುಟ್ಟು ಹಬ್ಬ ಹಾಗೂ ಪರಮೇಶ್ವರ ಕಾಳಮದರಗಿ ರವರ 32ನೇ ವರ್ಷದ ಹುಟ್ಟು ಹಬ್ಬವನ್ನು ಆದ್ದೂರಿಯಾಗಿ ಜರುಗಿತ್ತು. ಈ ಸಂದರ್ಭದಲ್ಲಿ ಸಮಾಜ ಸೇವಕ, ಸಾಮಾಜಿಕ ಹೋರಾಟಗಾರರು ಹಾಗೂ ಕರ್ನಾಟಕ ರಕ್ಷಣಾ ವೇದಿಕೆ ರಾಜ್ಯ ಕಾರ್ಯದರ್ಶಿ ಕರ್ನಾಟಕ ಕಂಡ ಮಿಥುನ್ ಜೂನಿಯರ್ ಡಿ ಕೆ ರವರು ಗುರುಗಳಿಗೆ ಸನ್ಮಾನಿಸಿದರು. ತದ ನಂತರ ಗುರುಗಳಿಂದ ಆಶೀರ್ವಾದ ಪಡೆದರು. (ಮಲ್ಲಮ್ಮ ನುಡಿ ಚಿತ್ರ).

# ಯೋಜನಾಧಿಕಾರಿ ಹುದ್ದೆಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.02–ಜಿಲ್ಲಾ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ದೇವದಾಸಿ ಪುನರ್ವಸತಿ ಯೋಜನಾ ಕಚೇರಿಯಲ್ಲಿ ಪ್ರಸ್ತಕ ಸಾಲಿಗೆ ಖಾಲಿ ಇರುವ ಯೋಜನಾಧಿಕಾರಿಗಳ ಹುದ್ದೆಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಯೋಜನಾಧಿಕಾರಿಗಳ ಒಂದು ಹುದ್ದೆಗೆ ಎಂ.ಎ., ಎಂ.ಎಸ್.ಡಬ್ಲ್ಯೂ., ಎಂ.ಎ ಇನ್ ಸೋಶಿಯಾಲಜಿ, ಎಂ.ಎಸ್ಸಿ ಇನ್ ಸೈಕಾಲಾಜಿ ಪದವಿ ಹೊಂದಿರಬೇಕು. ಕಡ್ಡಾಯವಾಗಿ ಕಂಪ್ಯೂಟರ್ ಜ್ಞಾನ ಹೊಂದಿರಬೇಕು. 65 ವರ್ಷದೊಳಗಿರುವ ನಿವೃತ್ತ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಿಗೆ ಆದ್ಯತೆ ನೀಡಲಾಗುವುದು.

ಆಸಕ್ತರು ಕಚೇರಿಯಲ್ಲಿ ಅರ್ಜಿ ಪಡೆದು ನಿಗದಿತ ವಿದ್ಯಾರ್ಹತೆಯ ದಾಖಲೆ ಹಾಗೂ ಅನುಭವದ ಮೂಲ ಪ್ರಮಾಣ ಪತ್ರಗಳೊಂದಿಗೆ ಜುಲೈ 12 ರೊಳಗಾಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರ ಕಚೇರಿಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ನಗರದ ಎಸ್.ಪಿ.ಸರ್ಕಲ್ ಹತ್ತಿರದ ಮಹಿಳಾ ಪೋಲಿಸ್ ಠಾಣೆ ಪಕ್ಕದಲ್ಲಿನ ಸ್ತ್ರೀ ಸೇವಾನಿಕೇತನ ಆವರಣದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರ ಕಚೇರಿಗೆ ಭೇಟಿ ನೀಡಬಹುದು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ರಾಮಕೃಷ್ಣ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಚನ ಸಾಹಿತ್ಯ ಕ್ಷೇತ್ರಕ್ಕೆ ಫ.ಗು.ಹಳಕಟ್ಟಿ ಅವರ ಕೊಡುಗೆ ದೊಡ್ಡದು: ತಹಶೀಲ್ದಾರ್ ಸುರೇಶ ವರ್ಮ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜುಲೈ 02–ಡಾ.ಫ.ಗು.ಹಳಕಟ್ಟಿ ಅವರು ವಚನಗಳ ಹಸ್ತ ಪ್ರತಿಗಳನ್ನು ಸಂಗ್ರಹಿಸಿ, ಪ್ರಕಟಿಸಿ, ಶರಣ ಸಾಹಿತ್ಯ ಕ್ಷೇತ್ರದಲ್ಲಿ ಬಹುದೊಡ್ಡ ಕೊಡುಗೆಯನ್ನು ನೀಡಿದ್ದಾ–ರೆ ಎಂದು ರಾಯಚೂರು ತಹಶೀಲ್ದಾರ್ ಸುರೇಶ ವರ್ಮ ಅವರು ಹೇಳಿದರು.

ಜು.02ರ ಬುಧವಾರ ದಂದು ನಗರದ ಪಂಡಿತ್ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಡಾ.ಫ.ಗು.ಹಳಕಟ್ಟಿಯವರ ಜನ್ಮದಿನದ ಅಂಗವಾಗಿ ವಚನ ಸಾಹಿತ್ಯ ಸಂರಕ್ಷಣಾ ದಿನಾಚರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಸರಳ, ಸಜ್ಜನಿಕೆ, ಕ್ರಿಯಾಶೀಲತೆ, ವಿಶೇಷ ಆಸಕ್ತಿ, ಪರಿಶ್ರಮ ಮತ್ತು ಕನ್ನಡ ನಾಡು, ನುಡಿ, ಹಾಗೂ ಸಾಹಿತ್ಯದ ಬಗ್ಗೆ ಅವರಿಗೆ ವಿಶೇಷ ಕಾಳಜಿ, ಪ್ರೀತಿ ಇದ್ದದ್ದನ್ನು ಗಮನಿಸಬಹುದು. ಅವರಲ್ಲಿಯ ಶಿಸ್ತು, ಶ್ರದ್ಧೆ, ಮಾಡುವ ಕೆಲಸದಲ್ಲಿನ ನಿಷ್ಠೆಯಿಂದಾಗಿ ವಚನ ಸಾಹಿತ್ಯ ಸಂಗ್ರಹಕ್ಕೆ ಅವರು ಮಾಡಿದ ಸಾಹಸ ಪೂರ್ಣ ಕಾರ್ಯ ಶ್ಲಾಘನೀಯ ಹಾಗೂ ಸ್ಮರಣೀಯವಾಗಿದೆ ಎಂದರು. ಹಸ್ತಪ್ರತಿಗಳು ಪ್ರಕಟಣೆಗೆಂದೇ ಶಿವಾನುಭವ ಪತ್ರಿಕೆಯನ್ನು 1926ರಲ್ಲಿ ಪ್ರಾರಂಭಿಸಿದರು. ಈ ಮಾಸ ಪತ್ರಿಕೆ 35 ವರ್ಷಗಳ ಕಾಲ ನಿರಂತರ ನಡೆಸಿದರು. 1927ರಲ್ಲಿ ನವಕರ್ನಾಟಕ ವಾರ ಪತ್ರಿಕೆ ಆರಂಭಿಸಿದರು. ಈ ಎರಡು ಪತ್ರಿಕೆ ಸಂಪಾದಕ, ಮುದ್ರಿಕೆ ಫ.ಗು.ಹಳಕಟ್ಟಿಯವರೇ ಆಗಿದ್ದಾರೆ ಎಂದು ಹೇಳಿದರು.

ಉಪನ್ಯಾಸಕರಾಗಿ ಹಿರಿಯ ಸಾಹಿತಿ ಡಾ.ಚನ್ನಬಸವ ಹಿರೇಮಠ ಅವರು ಮಾತನಾಡಿ, ಫ.ಗು. ಹಳಕಟ್ಟಿ ಅವರು ಶರಣರ ವಚನ ಸಾಹಿತ್ಯವನ್ನು ಸಂಗ್ರಹಿಸಿ, ಸಂಪಾದಿಸಿ ಪ್ರಕಟಿಸಿ ಸಂಶೋಧನಾ ಕ್ಷೇತ್ರಕ್ಕೆ ದೊಡ್ಡ ಕೊಡುಗೆ ನೀಡಿದ್ದಾರೆ.

1923 ರಲ್ಲಿ ಹಲವಾರು ವಚನ ಸಾಹಿತ್ಯದ ಹಸ್ತ ಪುಟಗಳನ್ನು ಪ್ರಕಟಿಸುವ ಉದ್ದೇಶದಿಂದ ಪ್ರಕಟಕರ ಜೊತೆ ಮಾತನಾಡಿ, ಅವುಗಳ ಪ್ರಕಟಣೆ ಮಾಡಿ ರಕ್ಷಣೆ ಮಾಡಿದರು. ವಚನ ಸಾಹಿತ್ಯದ ರಕ್ಷಣೆಗಾಗಿ ತಮ್ಮ ಸ್ವಂತ ಮನೆಯನ್ನೇ ಮಾರಿದ ಧೀಮಂತರಾಗಿದ್ದಾರೆ. ಹಲವಾರು ವಚನಕಾರರ ಸಾಹಿತ್ಯದ ಪ್ರಚಾರವನ್ನು ಮಾಡಿದರು. ಇಂದಿನ ಪೀಳಿಗೆಗೆ ವಚನ ಸಾಹಿತ್ಯದ ಜ್ಞಾನವು ಅತ್ಯವಶ್ಯಕ ಎಂದು ತಿಳಿಸಿದರು. ಇಂಗ್ಲೀಷ್ ಶಿಕ್ಷಣದ ವ್ಯಾಮೋಹದಿಂದ ಇಂದಿನ ಮಕ್ಕಳು ಕನ್ನಡ ಸಾಹಿತ್ಯ ಓದಲು ಹಿಂಜರಿಯುತ್ತಿದ್ದು, ವಿದ್ಯಾರ್ಥಿಗಳು ಕನ್ನಡ ಸಾಹಿತ್ಯವನ್ನು ಹೆಚ್ಚಾಗಿ ಓದಿ ಕನ್ನಡ ಸಾಹಿತ್ಯವನ್ನು ಬೆಳೆಸಿ, ಫ.ಗು.ಹಳಕಟ್ಟಿ ಅವರ ಜೀವನದ ಆದರ್ಶಗಳನ್ನು ಪ್ರತಿಯೊಬ್ಬರು ಪಾಲಿಸಬೇಕೆಂದರು.

ಫ.ಗು.ಹಳಕಟ್ಟಿ ಅವರು ವಚನ ಸಾಹಿತ್ಯ ಮತ್ತು ಪತ್ರಿಕೋದ್ಯಮದ ಜೊತೆಗೆ ಸಂಘಟನೆ, ಬ್ಯಾಂಕಿಂ–ಗ್, ಕೃಷಿ, ನೇಕಾರಿಕೆ, ಸಹಕಾರಿ ಹೀಗೆ ಎಲ್ಲದರಲ್ಲಿಯೂ ತಮ್ಮನ್ನು ತೊಡಗಿಸಿಕೊಂಡರು. 1910ರಲ್ಲಿ ಬಿಜಾಪುರ ಜಿಲ್ಲಾ ಲಿಂಗಾಯತ ವಿದ್ಯಾವರ್ಧಕ ಸಂಘ (ಬಿ.ಎಲ್.ಡಿ.ಇ.). 1912ರಲ್ಲಿ ಶ್ರೀಸಿದ್ದೇಶ್ವರ ಅರ್ಬನ್ ಕೋ.. ಆಪರೇಟಿವ್ ಬ್ಯಾಂಕು, ಗ್ರಾಮೀಣ ಅಭಿವೃದ್ಧಿ ಸಂಘ, ಒಕ್ಕಲುತನ ಸಹಕಾರಿ ಸಂಘ, ನೇಕಾರರ ಸಂಘ, ಹತ್ತಿ ಮಾರಾಟಗಾರರು ಸಂಘ, ಸಹಕಾರ ಸಂಘಗಳನ್ನು ಸ್ಥಾಪಿಸಿ ಇವುಗಳ ಬೆಳವಣಿಗೆಗೆ ದುಡಿದರು. ಅಲ್ಲದೆ ಧಾರವಾಡ ಕರ್ನಾಟಕ ವಿಶ್ವವಿದ್ಯಾಲಯದ ಸ್ಥಾಪನೆಯಲ್ಲಿಯೂ ಇವರು ವಹಿಸಿದ ಪಾತ್ರ ಮಹತ್ವದ್ದಾಗಿದೆ ಎಂದರು. ಹಳಕಟ್ಟಿ ಅವರು

ವಚನ ಸಾಹಿತ್ಯದ ಕಡೆಗೆ ಲಕ್ಷ್ಯ ಹರಿಸದೇ ಇದ್ದರೆ ಇಂದು ನಮಗೆ ಶಿವಶರಣರ ವಚನಗಳು ದೊರಕುತ್ತಿರಲಿಲ್ಲ. ಕತ್ತಲ ಕಾಲ ಗರ್ಭದಲ್ಲಿದ್ದ ವಚನಗಳನ್ನು ಒಬ್ಬ ಸಾಮಾನ್ಯ ವಕೀಲರಾಗಿದ್ದುಕೊಂಡು ಶರಣರ ತತ್ವಾದರ್ಶಗಳು ಅವರೊಳಗಿದ್ದ ವೈಚಾರಿಕ ಮಾನವ ಪ್ರಜ್ಞೆಯನ್ನು ಎತ್ತಿ ತೋರಿಸಿದ ಕೀರ್ತಿಗೆ ಭಾಜನರಾಗಿದ್ದಾರೆ ಎಂದು ಹಿರೇಮಠ ಅವರು ತಿಳಿಸಿದರು.

ಇದೇ ಸಂದರ್ಭದಲ್ಲಿ ಹಿರಿಯ ಸಾಹಿತಿಗಳಾದ ವೀರಹನುಮಾನ್, ಬಸೀರ್‌ಅಹ್ಮದ್ ಹೊಸಮನಿ, ಯುವ ಸಾಹಿತಿಗಳಾದ ಈರಣ್ಣ ಬೆಂಗಾಲಿ, ವೇಣು ಜಾಲಿಬೆಂಚಿ, ಮಲ್ಲೇಶ, ಎಂ.ಬಿ.ನರಸಿಂಹಲು ಸೇರಿದಂತೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಿಬ್ಬಂದಿ ಇಸ್ಮಾಯಿಲ್, ವಿನೋದ ಸೇರಿದಂತೆ ವಿವಿಧ ಶಾಲಾ–ಕಾಲೇಜ್ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಇದ್ದರು.

# ಜುಲೈ ಮಾಹೆಗೆ ಪಡಿತರ ಧಾನ್ಯ ವಿತರಣೆ: ಜಿಲ್ಲಾಧಿಕಾರಿ ನಿತೀಶ್ ಕೆ.

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜುಲೈ 02 – ಇಲ್ಲಿಯ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯಿಂದ ಜುಲೈ 2025 ರ ಮಾಹೆಗೆ ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯಡಿ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಅನ್ನಭಾಗ್ಯ ಯೋಜನೆಯಡಿಯಲ್ಲಿ ಉಚಿತವಾಗಿ ಪಡಿತರ ಚೀಟಿಯ ಫಲಾನುಭವಿಗೆ ಪಡಿತರ ಧಾನ್ಯಗಳನ್ನು ವಿತರಿಸಲಾಗುತ್ತಿದೆ ಎಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ತಿಳಿಸಿದ್ದಾರೆ.

ಕೇಂದ್ರ ವ್ಯಾಪ್ತಿಯ ಪ್ರತಿ ಅಂತ್ಯೋದಯ (ಎಎವೈ) ಪಡಿತರ ಚೀಟಿಗೆ 21 ಕೆ.ಜಿ ಜೋಳ ಮತ್ತು 14 ಕೆ.ಜಿ ಸಾರವರ್ಧಿತ ಅಕ್ಕಿ ಹಾಗೂ ಕೇಂದ್ರ ವ್ಯಾಪ್ತಿಯ ಪಿ.ಹೆಚ್.ಹೆಚ್ (ಬಿಪಿಎಲ್) ಪಡಿತರ ಚೀಟಿಯಲ್ಲಿನ ಪ್ರತಿ ಫಲಾನುಭವಿಗೆ 03 ಕೆ.ಜಿ ಜೋಳ ಮತ್ತು 02 ಕೆ.ಜಿ ಸಾರವರ್ಧಿತ ಅಕ್ಕಿ ಇದರ ಜೊತೆಗೆ ರಾಜ್ಯ ಸರ್ಕಾರದ ಅನ್ನಭಾಗ್ಯ ಯೋಜನೆಯಡಿಯಲ್ಲಿ ರಾಜ್ಯ ಸರ್ಕಾರದ ಮಾರ್ಗಸೂಚಿಯಂತೆ ಏಕ–ಸದಸ್ಯ, ದ್ವಿ–ಸದಸ್ಯ ಮತ್ತು ತ್ರಿ–ಸದಸ್ಯ ಎಎವೈ ಪಡಿತರ ಚೀಟಿಗಳನ್ನು ಹೊರತುಪಡಿಸಿ ನಾಲ್ಕು ಮತ್ತು ನಾಲ್ಕಕಿಂತ ಹೆಚ್ಚಿನ ಸದಸ್ಯರುಳ್ಳ ಕೇಂದ್ರ ಹಾಗೂ ರಾಜ್ಯ ವ್ಯಾಪ್ತಿಯ ಅಂತ್ಯೋದಯ (ಎಎವೈ) ಮತ್ತು ಪಿ.ಹೆಚ್.ಹೆಚ್ (ಬಿಪಿಎಲ್) ಪಡಿತರ ಚೀಟಿಯ ಪ್ರತಿ ಫಲಾನುಭವಿಗೆ ಹೆಚ್ಚುವರಿಯಾಗಿ 05 ಕೆ.ಜಿ ಅಕ್ಕಿಯನ್ನು ಉಚಿತವಾಗಿ ವಿತರಿಸಲಾಗುವುದು.

ಒಂದು ರಾಷ್ಟ್ರ ಒಂದು ಪಡಿತರ ಚೀಟಿ (ಅಂತರ್ ರಾಜ್ಯ/ ಅಂತರ್ ಜಿಲ್ಲೆ) ಪೋರ್ಟೆಬಿಲಿಟಿ ಜಾರಿಯಲ್ಲಿರುವುದರಿಂದ ಯಾವುದೇ ರಾಜ್ಯದ ಪಡಿತರ ಚೀಟಿದಾರರು ಯಾವುದೇ ವರ್ಗದ ಪಡಿತರ ಚೀಟಿದಾರರು ಯಾವುದೇ ನ್ಯಾಯಬೆಲೆ ಅಂಗಡಿಯಲ್ಲಿ ಪಡಿತರವನ್ನು ಪಡೆಯಲು ಅವಕಾಶ ಕಲ್ಪಿಸಲಾಗಿದೆ. ಯಾವುದೇ ನ್ಯಾಯಬೆಲೆ ಅಂಗಡಿಕಾರರು ಕಡಿಮೆ ಪ್ರಮಾಣದ ಪಡಿತರವನ್ನು ವಿತರಣೆ ಮಾಡಿದ್ದಲ್ಲಿ, ಹಣ ಕೇಳಿದ್ದಲ್ಲಿ ಮತ್ತು ಇತರೆ ದೂರುಗಳಿಗೆ ನಿಶುಲ್ಕ ದೂರವಾಣಿ ಸಂಖ್ಯೆ 1967ಗೆ ಹಾಗೂ ತಾಲ್ಲೂಕಿನಲ್ಲಿರುವ ತಹಶೀಲ್ದಾರರ ಕಚೇರಿಗೆ ಅಥವಾ ಜಿಲ್ಲೆಯ ಉಪನಿರ್ದೇಶಕರ ಕಚೇರಿಗೆ ದೂರನ್ನು ಸಲ್ಲಿಸಬಹುದಾಗಿದೆ.

ಈ ಯೋಜನೆಯಡಿ ವಿತರಿಸಲಾದ ಆಹಾರ ಧಾನ್ಯಗಳನ್ನು ಹಣಕ್ಕಾಗಿ ಪಡಿತರ ಚೀಟಿದಾರರು ಮಾರಾಟ ಮಾಡುವುದಾಗಲಿ ಅಥವಾ ಸಂಗ್ರಹಣೆ ಮಾಡುವುದು ಕಂಡುಬಂದಲ್ಲಿ ಅಂತಹ ಪಡಿತರ ಚೀಟಿದಾರರಿಗೆ ವಿತರಿಸಲಾದ ಆಹಾರ ಧಾನ್ಯಗಳಿಗೆ ಮುಕ್ತ ಮಾರುಕಟ್ಟೆ ದರಕ್ಕೆ ದಂಡ ವಿಧಿಸಲಾಗುವುದು ಮತ್ತು ಈ ಪಡಿತರ ಚೀಟಿಯನ್ನು ಆರು ತಿಂಗಳ ಅವಧಿಗೆ ಅಮಾನತ್ತುಗೊಳಿಸಲಾವುದೆಂದು ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಡಿ.ಇಡಿ ತರಬೇತಿಗಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.02–ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ವತಿಯಿಂದ ಮೈಸೂರಿನ ಅಂಧ ಹಾಗೂ ಶ್ರವಣದೋಷವುಳ್ಳ ಮಕ್ಕಳ ಶಿಕ್ಷಕರ ತರಬೇತಿ ಕೇಂದ್ರದಲ್ಲಿ ಅಂಧ ಹಾಗೂ ಶ್ರವಣದೋಷವುಳ್ಳ ಮಕ್ಕಳಿಗೆ ಶಿಕ್ಷಕರಾಗಲು 2 ವರ್ಷದ ವಿಶೇಷ ಡಿ.ಇಡಿ ತರಬೇತಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಗೋವಿಂದಪ್ಪ ಅವರು ತಿಳಿಸಿದ್ದಾರೆ.

ಆಸಕ್ತರು ದ್ವಿತೀಯ ಪಿ.ಯು.ಸಿ ಉತ್ತೀರ್ಣರಾಗಿರಬೇಕು. ಅಂಧ ಮತ್ತು ಶ್ರವಣ ದೋಷವುಳ್ಳ ಮಕ್ಕಳ ಶಿಕ್ಷಣ ಕ್ಷೇತ್ರದಲ್ಲಿ ರಾಷ್ಟ್ರೀಯ ಪುನರ್ವಸತಿ ಮಂಡಳಿಯ ಪಠ್ಯಕ್ರಮ ಹಾಗೂ ಮಾರ್ಗಸೂಚಿಯಂತೆ ಡಿಪ್ಲೋಮೋ ಇನ್ ಸ್ಪೇಷಲ್ ಎಜುಕೇಷನ್, ಡಿಪ್ಲೋಮೋ ಇನ್ ಸ್ಪೇಷಲ್ ಎಜುಕೇಷನ್ ತರಬೇತಿಯನ್ನು ಕನ್ನಡ ಮಾಧ್ಯಮದಲ್ಲಿ ನೀಡಲಾಗುತ್ತದೆ.

ಅರ್ಜಿ ಸಲ್ಲಿಸಲು ಜುಲೈ 12 ಕೊನೆಯ ದಿನ. ಹೆಚ್ಚಿನ ಮಾಹಿತಿಗಾಗಿ ದೂ.0821–2491600, ಮೊ.9113561620, 9686762378, 7829115275, 9743503262, 9611773697, 6362962400 ಅಥವಾ ಜಿಲ್ಲಾ ಅಂಗವಿಕಲರ ಕಲ್ಯಾಣಧಿಕಾರಿ ಕಛೇರಿಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಶ್ರೀಕೃವಿವಿ ಪ್ರಭಾರ ಕುಲಸಚಿವರಾಗಿ ಡಾ.ಜಿ.ಪಿ ದಿನೇಶ್ ನೇಮಕ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.02–ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ಪ್ರಭಾರ ಕುಲಸಚಿವರಾಗಿ ನಿರ್ವಹಣಾಶಾಸ್ತ್ರ ವಿಭಾಗದ ಪ್ರಾಧ್ಯಾಪಕ ಡಾ.ಜಿ.ಪಿ.ದಿನೇಶ್ ಅವರನ್ನು ನೇಮಕ ಮಾಡಲಾಗಿದ್ದು, ಬುಧವಾರ ಅಧಿಕಾರ ವಹಿಸಿಕೊಂಡರು.

ನಿಕಟಪೂರ್ವ ಕುಲಸಚಿವರಾಗಿದ್ದ ರುದ್ರೇಶ್.ಎಸ್.ಎನ್ ಅವರ ವರ್ಗಾವಣೆಯಿಂದ ತೆರವಾದ ಸ್ಥಾನಕ್ಕೆ ಪ್ರೊ.ಜಿ.ಪಿ.ದಿನೇಶ್ ಅವರನ್ನು ಹಂಗಾಮಿ ಕುಲಸಚಿವರಾಗಿ ಆದೇಶಿಸಿ ವಿವಿಯ ಕುಲಪತಿ ಪ್ರೊ.ಎಂ.ಮುನಿರಾಜು ಅವರು ಕಚೇರಿ ಪತ್ರ ಹೊರಡಿಸಿದ್ದಾರೆ.

# ವಚನ ಸಾಹಿತ್ಯಕ್ಕೆ ಮರುಜೀವ ಕೊಟ್ಟವರು ಹಳಕಟ್ಟಿ : ಡಿಸಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.2–ಅಳಿವಿನ ಅಂಚಿನಲ್ಲಿದ್ದ ಶರಣರ ವಚನ ಸಾಹಿತ್ಯವನ್ನು ಸಂಗ್ರಹಿಸಿ, ಸಂರಕ್ಷಿಸಿ ಮರು ಮುದ್ರಣಗೊಳಿಸಿ ಅವುಗಳಿಗೆ ಮರುಜೀವ ಕೊಟ್ಟವರು ಡಾ.ಫ.ಗು.ಹಳಕಟ್ಟಿಯವರು ಎಂದು ಜಿಲ್ಲಾಧಿಕಾರಿ ಸಂಗಪ್ಪ ಎಂ. ಹೇಳಿದರು.

ನಗರದ ಬಾಲಕಿಯರ ಸರಕಾರಿ ಪದವಿ ಪೂರ್ವ ಕಾಲೇಜು ಪ್ರೌಢಶಾಲಾ ವಿಭಾಗದ ಸಭಾಭವನದಲ್ಲಿ ಬುಧವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಂಡ ಡಾ.ಫ.ಗು.ಹಳಕಟ್ಟಿ ಜನ್ಮದಿನದ ಅಂಗವಾಗಿ ವಚನ ಸಾಹಿತ್ಯ ಸಂರಕ್ಷಣಾ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ವಚನ ಸಾಹಿತ್ಯ ಕ್ಷೇತ್ರದಲ್ಲಿ ಕೇವಲ 50 ಜನ ಇದ್ದರು. 250 ವಚನಕಾರರನ್ನು ಗುರುತಿಸಿ ಅವರೆಲ್ಲರ ವಚನಗಳನ್ನು ಸಂಗ್ರಹಿಸುವ ಕಾರ್ಯ ಮಾಡಿದ್ದಾರೆ ಎಂದರು. ವಿಜಯಪುರದಲ್ಲಿ ನೆಲೆ ಊರಿದ ಹಳಕಟ್ಟಿಯವರು ನಶಿಸಿ ಹೋಗುತ್ತಿರುವ ವಚನ ಸಾಹಿತ್ಯಗಳಿಗೆ ಮರುಜೀವ ತುಂಬುವ ನಿಟ್ಟಿನಲ್ಲಿ ತಮ್ಮ ಆಸ್ತಿಯನ್ನು ಮಾರಿ ಸ್ವಂತ ಮುದ್ರಣಾಲಯವನ್ನು ಪ್ರಾರಂಭಿಸಿದರು. ಪ್ರಥಮ ಕನ್ನಡ ಶಾಲೆ ಹಾಗೂ ಮಹಿಳೆಯರಿಗಾಗಿಯೇ ಪ್ರತ್ಯೇಕ ಶಾಲೆಯನ್ನು ಪ್ರಾರಂಭಿಸಲು ಕಾರಣೀಭೂತರಾದವರು. ಅಲ್ಲದೇ ಬಿ.ಎಲ್.ಡಿ ಶಿಕ್ಷಣ ಸಂಸ್ಥೆ, ಸಿದ್ದೇಶ್ವರ ಸಹಕಾರಿ ಬ್ಯಾಂಕ್ ಸ್ಥಾಪಿಸಿದವರಾಗಿದ್ದಾರೆ. ಅಂದಿನ ಕಾಲದಲ್ಲಿ ಬೂತನಾಳ ಕೆರೆ ಸಹ ನಿರ್ಮಾಣ ಮಾಡಿದವರು ಹಳಕಟ್ಟಿಯವರು ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ನಗರಸಭೆ ಅಧ್ಯಕ್ಷೆ ಸವಿತಾ ಲೆಂಕನ್ನವರ ಮಾತನಾಡಿ, ಹಳಕಟ್ಟಿಯವರು ಕೇವಲ ವಚನ ಸಾಹಿತ್ಯಗಳನ್ನು ಸಂಗ್ರಹಿಸುವ ಕಾರ್ಯವಲ್ಲದೇ ರಾಜಕೀಯ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿದವರಾಗಿದ್ದಾರೆ. ಬಡತನದ ಜೀವನದಲ್ಲಿಯೇ 10 ಸಾವಿರ ವಚನಗಳನ್ನು ಮರು ಮುದ್ರಣ ಮಾಡಿದ ಕೀರ್ತಿ ಅವರದ್ದಾಗಿದೆ. ಮಕ್ಕಳು ಮೊಬೈಲ್‌ಗಳ ದಾಸರಾಗದೇ ಹಳಕಟ್ಟಿಯವರು ಸಂಗ್ರಹಿಸಿದ ವಚನ ಸಾಹಿತ್ಯದ ಪುಸ್ತಕಗಳನ್ನು ಓದುವ ಮೂಲಕ ದೇಶದ ಭವಿಷ್ಯ ರೂಪಿಸುವಂತವರಾಗಬೇಕು ಎಂದು ತಿಳಿಸಿದರು. ಸಮುದಾಯದ ಮುಖಂಡರಾದ ಡಾ.ಎಂ.ಎಸ್. ದಡ್ಡೇನವರ ಮಾತನಾಡಿ, ಫ.ಗು. ಹಳಕಟ್ಟಿಯವರು ಮುದ್ರಣ ರಂಗ, ಪತ್ರಿಕಾರಂಗ, ಸಹಕಾರಿ ರಂಗ ಹಾಗೂ ಸಾಹಿತ್ಯ ರಂಗಗಳಲ್ಲದೇ ಶಿಕ್ಷಣ ಮತ್ತು ಸಾಮಾಜಿಕ ಕ್ಷೇತ್ರಗಳಲ್ಲಿ ಕೊಡುಗೆ ನೀಡಿದ್ದರ ಫಲವಾಗಿ ಇಂದು ವಿಜಯಪುರ ಬಿ.ಎಲ್.ಡಿ ಹಾಗೂ ಭೂತನಾಳ ಕೆರೆ, ಸಿದ್ದೇಶ್ವರ ಬ್ಯಾಂಕ್ ಬೃಹದಾಕಾರವಾಗಿ ಬೆಳೆದು ನಿಂತಿವೆ ಎಂದರು. ಇನ್ನೋರ್ವ ಮುಖಂಡ ಶ್ರೀನಿವಾಸ ಬಳ್ಳಾರಿ ಹಳಕಟ್ಟಿಯವರ ಆದರ್ಶ ಮೌಲ್ಯಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

ಉಪನ್ಯಾಸ ನೀಡಿದ ಕರ್ನಾಟಕ ಸಾಹಿತ್ಯ ಅಕಾಡೆಮಿಯ ಸದಸ್ಯ ಮಹಾದೇವ ಬಸರಕೋಡ, ವಚನ ಸಾಹಿತ್ಯವನ್ನು ಹೊರ ತೆಗೆದು ಪ್ರಚಲಿತಗೊಳಿಸುವಲ್ಲಿ ಅಪರೂಪದ ಕಾಯಕ ಮಾಡಿದವರ ಹಳಕಟ್ಟಿಯವರು. ವಚನ ಸಾಹಿತ್ಯ ರಕ್ಷಿಸುವ ಕಾರ್ಯ ಮಾಡದೇ ಇದ್ದಲ್ಲಿ ಇಂದು ನಾವು ಯಾವ ವಚನಗಳನ್ನು ಕಾಣುತ್ತಿರಲಿಲ್ಲ. ವಚನದ ಸಾಹಿತ್ಯ ಬೇರೆ ಬೇರೆ ರಾಷ್ಟ್ರಗಳಲ್ಲಿ ಪ್ರಸಿದ್ಧಿಗೊಂಡಿದ್ದನ್ನು ನೋಡಿದಾಗ ಇದಕ್ಕೆ ಪ್ರೇರಣೆಯಾದ ವ್ಯಕ್ತಿ ಹಳಕಟ್ಟಿ ಎಂದರು.

ಡಾ.ಫ.ಗು.ಹಳಕಟ್ಟಿ ಅವರ ಕುರಿತಾದ ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಬಹುಮಾನ ವಿತರಣೆ ಮಾಡಲಾಯಿತು. ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಚ್.ಜಿ.ಮಿರ್ಜಿ, ತಹಶೀಲ್ದಾರ ಅಮರೇಶ ಪಮ್ಮಾರ, ಬಾಲಕಿಯರ ಸರಕಾರಿ ಪ.ಪೂ ಕಾಲೇಜಿನ ಪ್ರಾಚಾರ್ಯ ಪ್ರಕಾಶ ಜೋಗೂರ, ಉಪ ಪ್ರಾಚಾರ್ಯೆ ಗಿರಿಜಾ ನಡುವಿನಮನಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕರ್ಣಕುಮಾರ ಜೈನಾಪೂರ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಗ್ರಾಮ ಆಡಳಿತಾಧಿಕಾರಿಗಳಿಗೆ ಲ್ಯಾಪಟಾಪ್



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.2–ಬಾಗಲಕೋಟೆ ತಾಲೂಕಾ ವ್ಯಾಪ್ತಿಯಲ್ಲಿ 9 ಜನ ಗ್ರಾಮ ಆಡಳಿತಾಧಿಕಾರಿಗಳಿಗೆ ಬಾಗಲಕೋಟೆ ಶಾಸಕ ಎಚ್.ವಾಯ್. ಮೇಟಿ ಲ್ಯಾಪಟಾಪ್ ವಿತರಿಸಿದರು. ಬುಧವಾರ ನವನಗರದ ಶಾಸಕರ ಕಚೇರಿಯಲ್ಲಿ ಹಮ್ಮಿಕೊಂಡ ವಿತರಣಾ ಕಾರ್ಯಕ್ರಮದಲ್ಲಿ ಲ್ಯಾಪಟಾಪ್‌ಗಳನ್ನು ವಿತರಿಸಿ ಮಾತನಾಡಿದ ಅವರು, ಲ್ಯಾಪಟಾಪ್ ಬಳಕೆಯಿಂದ ಇ–ಕಚೇರಿ ಅಪ್ಲಿಕೇಷನ್‌ಗಳನ್ನು ಸುಲಭವಾಗಿ ನಿರ್ವಹಿಸಲು ಸಹಕಾರಿಯಾಗಲಿದೆ. ಜೊತೆಗೆ ಕೆಲಸಗಳು ವೇಗವಾಗಿ ಮತ್ತು ಪರಿಣಾಮಕಾರಿಯಾಗಿ ಮಾಡಲು ಸಾಧ್ಯವಾಗುತ್ತದೆ. ಈ ನಿಟ್ಟಿನಲ್ಲಿ ಲ್ಯಾಪಟಾಪ್ ಪಡೆದುಕೊಂಡ ಗ್ರಾಮ ಆಡಳಿತಾಧಿಕಾರಿಗಳು ಸರಿಯಾಗಿ ಬಳಕೆ ಮಾಡಿಕೊಳ್ಳಬೇಕು ಎಂದು ಹೇಳಿದರು.

ಸೀತಿಮನಿ ವಲಯದ ಬಿಲ್‌ಕೆರೂರ, ರಾಂಪೂರ, ಸುತಗುಂಡಾರ, ಹಿರೇಗುಳಬಾಳ ಹಾಗೂ ಬಾಗಲಕೋಟೆ ವಲಯದ ಬಾಗಲಕೋಟೆ, ಶಿರೂರ, ಬೇವಿನಮಟ್ಟಿ, ಹಳ್ಳೂರ ಹಾಗೂ ಬೆನಕಟ್ಟಿ ಗ್ರಾಮ ಆಡಳಿತಾಧಿಕಾರಿಗಳಿಗೆ ಲ್ಯಾಪಟಾಪ್‌ಗಳನ್ನು ವಿತರಣೆ ಮಾಡಲಾಯಿತು.

ಕಾರ್ಯಕ್ರಮದಲ್ಲಿ ತಾಲೂಕಾ ಗ್ಯಾರಂಟಿ ಯೋಜನೆಗಳ ಪ್ರಾಧಿಕಾರದ ಅಧ್ಯಕ್ಷ ಎಸ್.ಎನ್. ರಾಂಪೂರ, ಜಿಲ್ಲಾ ಪಂಚಾಯತ ಮಾಜಿ ಅಧ್ಯಕ್ಷ ಬಸವಂತಪ್ಪ ಮೇಟಿ, ತಹಶೀಲ್ದಾರ ಅಮರೇಶ ಪಮ್ಮಾರ, ಗ್ರೇ–2 ತಹಶೀಲ್ದಾರ ಮಹಾಂತೇಶ ಬಿರಾದಾರ, ನಾಗರಾಜ ಹದ್ಲಿ, ದ್ಯಾಮಣ್ಣ ಗಾಳಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ರಾಯಚೂರ ಜಿಲ್ಲಾ ಪಂಚಾಯತ್ ಸಿಇಓ ರಾಹುಲ್ ತುಕಾರಾಂ ಪಾಂಡ್ವೆ ಅವರಿಗೆ ಸರ್ಕಾರದಿಂದ ಪ್ರಶಂಸನಾ ಪತ್ರ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರುಜುಲೈ02–ರಾಯಚೂರ ಜಿಲ್ಲೆಯಲ್ಲಿ ಸರಕಾರಿ ಯೋಜನೆಗಳನ್ನು ಅತ್ಯುತ್ತಮವಾಗಿ ಅನುಷ್ಠಾನಗೊಳಿಸಿರುವ ಹಿನ್ನೆಲೆಯಲ್ಲಿ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಾಹುಲ್ ತುಕಾರಾಂ ಪಾಂಡ್ವೆ ಅವರಿಗೆ ಸರಕಾರದಿಂದ ಪ್ರಶಂಸನಾ ಪತ್ರ ಲಭಿಸಿದೆ.

ಕಳೆದ ಮೇ 14ರಂದು ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ನಡೆದ ಕೇಂದ್ರ ವಲಯ, ಕೇಂದ್ರ ಪುರಸ್ಕೃತ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ, ರಾಯಚೂರ ಜಿಲ್ಲೆಯಲ್ಲಿ ಕೇಂದ್ರ ಪುರಸ್ಕೃತ ಯೋಜನೆಗಳಾದ ಮಣ್ಣಿನ ಫಲವತ್ತತೆಯ ರಾಷ್ಟ್ರೀಯ ಯೋಜನೆ (ಎಸ್‌ಎಚ್ಸಿ) ಪ್ರಧಾನಮಂತ್ರಿ ಕೃಷಿ ಸಿಂಚಾಯಿ ಯೋಜನೆ, ಪ್ರಧಾನಮಂತ್ರಿ ಮಾತೃ ವಂದನಾ ಯೋಜನೆ, ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ (ಆರ್‌ಕೆವಿವೈ), ಮನರೇಗಾ ಮತ್ತು ರಾಷ್ಟ್ರೀಯ ತೋಟಗಾರಿಕೆ ಮಿಷನ್ ಹೀಗೆ ನಾನಾ ಯೋಜನೆಗಳ ಅನುಷ್ಠಾನದಲ್ಲಿ ಗಣನೀಯ ಪ್ರಗತಿ ಸಾಧಿಸಿರುವುದನ್ನು ಮುಖ್ಯಮಂತ್ರಿಗಳು ಗಮನಿಸಿ, ಸಂಬಂಧಿಸಿದ ಸಾಧನೆ ಮಾಡಿದ ಅಧಿಕಾರಿಗಳಿಗೆ ಪ್ರಶಂಸನಾ ಪತ್ರ ನೀಡಿ ಅಭಿನಂದಿಸಲು ತಿಳಿಸಿದ್ದಾರೆ. ಈ ಉತ್ತಮ ಪ್ರಗತಿಯನ್ನು ಸಾಧಿಸಲು ಇಲಾಖಾಧಿಕಾರಿಗಳು ಹಾಗೂ ಇಲಾಖೆಯ ಎಲ್ಲ ಸಿಬ್ಬಂದಿಯ ಅಚಲ ಬದ್ಧತೆ, ನಿರಂತರ ಶ್ರಮ ಹಾಗೂ ಸಮನ್ವಯದ ಕಾರ್ಯಪದ್ಧತಿಯೇ ಕಾರಣ. ನಿಮ್ಮ ತಂಡದ ಈ ಉತ್ಸಾಹ ಹಾಗೂ ಕಠಿಣ ಪರಿಶ್ರಮವೇ ಇಂತಹ ಯಶಸ್ಸಿಗೆ ನಾಂದಿಯಾಗಿದೆ ಎಂದು ಸರಕಾರದ ಮುಖ್ಯ ಕಾರ್ಯದರ್ಶಿ ಡಾ.ಶಾಲಿನಿ ರಜನೀಶ್ ಅವರು ಜಿಪಂ ಸಿಇಓ ರಾಹುಲ್ ಪಾಂಡ್ವೆ ಅವರಿಗೆ ನೀಡಿದ ಪ್ರಶಂಸನಾ ಪತ್ರದಲ್ಲಿ ತಿಳಿಸಿದ್ದಾರೆ.

# ತೆಲಂಗಾಣ ಸ್ಫೋಟ: ಸತ್ತವರ ಸಂಖ್ಯೆ 35

ಹೈದರಾಬಾದ್,ಜು2–ತೆಲಂಗಾಣ ಔಷಧ ತಯಾರಿಕಾ ಘಟಕದಲ್ಲಿ ಸ್ಫೋಟ ಸಂಭವಿಸಿ ಮೃತಪಟ್ಟವರ ಸಂಖ್ಯೆ 35ಕ್ಕೆ ಏರಿಕೆಯಾಗಿದ್ದು ಅವಶೇಷಗಳ ಅಡಿಯಲ್ಲಿ ಇನ್ನೂ ಹೆಚ್ಚಿನ ಶವಗಳು ಇರಬಹುದು, ಹೀಗಾಗಿ ಸಾವಿನ ಸಂಖ್ಯೆ ಮತ್ತಷ್ಟು ಹೆಚ್ಚಾಗಲಿದೆ ಎಂದು ಅಂದಾಜು ಮಾಡಲಾಗಿದೆ. ತೆಲಂಗಾಣದ ಸಂಗರೆಡ್ಡಿ ಜಿಲ್ಲೆಯ ರಾಸಾಯನಿಕ ಉತ್ಪಾದನಾ ಘಟಕದಲ್ಲಿ ರಿಯಾಕ್ಟರ್ ಸ್ಫೋಟದಲ್ಲಿ ಸಾವನ್ನಪ್ಪಿದವರ ಸಂಖ್ಯೆ 35 ಕ್ಕೆ ಏರಿಕೆಯಾಗಿದ್ದು ರಕ್ಷಣಾ ಕಾರ್ಯ ಮುಂದುವರೆದಿದ್ದು, ರಾಜ್ಯ ಸರ್ಕಾರ ಘಟನೆಯ ಕುರಿತು ಉನ್ನತ ಮಟ್ಟದ ತನಿಖೆಗೆ ಆದೇಶಿಸಿದೆ.

# ಡಾ.ಹಳಕಟ್ಟಿ ಸೇವೆ ಅನುಕರಣೀಯ: ತಹಸಿಲ್ದಾರ್ ಹೂಗಾರ



ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ಡಾ. ಫ.ಗು. ಹಳಕಟ್ಟಿಯವರು ಕೇವಲ ಶರಣರ ವಚನಗಳನ್ನು ರಕ್ಷಿಸುವ ಕೆಲಸವನ್ನು ಮಾತ್ರ ಮಾಡಲಿಲ್ಲ ಅವರು ಸಾಮಾಜಿಕ ಕ್ಷೇತ್ರದಲ್ಲಿಯೂ ಸಾಕಷ್ಟು ಸೇವೆಯನ್ನು ಮಾಡಿದ್ದಾರೆ ಅವುಗಳನ್ನು ತಿಳಿದುಕೊಳ್ಳುವ ಅಗತ್ಯ ಇದೆ ಎಂದು ತಹಸಿಲ್ದಾರ್ ಡಾ.ವಿನಯಾ ಹೂಗಾರ ಹೇಳಿದರು. ಬುಧವಾರ ಪಟ್ಟಣದ ತಹಸಿಲ್ದಾರ್ ಕಾರ್ಯಾಲಯದ ಸಭಾಂಗಣದಲ್ಲಿ ವಚನ ಪಿತಾಮಹ ಡಾ.ಫ.ಗು. ಹಳಕಟ್ಟಿ ಅವರ ಜನ್ಮ ದಿನಾಚರಣೆ ಹಾಗೂ ವಚನ ಸಂರಕ್ಷಣಾ ದಿನದ ಅಂಗವಾಗಿ ಹಮ್ಮಿಕೊಂಡ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ವಿಜಯಪುರದ ಭೂತನಾಳ ಕೆರೆ ನಿರ್ಮಾಣ, ಪ್ರಸಿದ್ಧ ಬಿ.ಎಲ್.ಡಿ.ಇ ಸಂಸ್ಥೆ ಸ್ಥಾಪನೆ, ವಿಜಯಪುರದ ಶ್ರೀ ಸಿದ್ದೇಶ್ವರ ಸಹಕಾರಿ ಬ್ಯಾಂಕ್ ಹಾಗೂ ಮಹಿಳೆಯರಿಗಾಗಿ ಮೂರು ಕನ್ನಡ ಶಾಲೆಗಳನ್ನು ತೆರೆದಿರುವುದು ಅವರ ವಿಶಿಷ್ಟ ಸೇವೆಗಳಾಗಿವೆ ನಮಗೆಲ್ಲರಿಗೂ ಅವರ ಬದುಕು ಮಾದರಿಯಾಗಬೇಕಾಗಿದೆ ಎಂದರು. ಕಸಾಪ ಗೌರವ ಕಾರ್ಯದರ್ಶಿ ಗಂಗಾಧರ ಕಸ್ತೂರಿ ಮಾತನಾಡಿ ವಚನ ಪಿತಾಮರೆಂದೇ ಹೆಸರುವಾಸಿಯಾಗಿದ್ದ ಡಾ.ಫ.ಗು. ಹಳಕಟ್ಟಿ ಅವರು ಶ್ರೇಷ್ಠ ಸಂಶೋಧಕರು ಸಾಹಿತ್ಯ ಪ್ರಚಾರಕರು ಮತ್ತು ಸಂಪಾದಕರಾಗಿದ್ದರು. ಹೆಸರು ಫಕೀರಪ್ಪ ಆಗಿತ್ತು ಆದರೆ ಬಸವಾದಿ ಶರಣರ ವಚನಗಳನ್ನು ರಕ್ಷಿಸಿ ಬೆಳೆಸಲು ತಮ್ಮ ಜೀವನವನ್ನು ಪಕೀರನಂತೆ ನಡೆಸಿದರು. ವಚನಗಳನ್ನು ಮುದ್ರಿಸಿ ಪ್ರಕಟಿಸಲು ತಮ್ಮ ಸ್ವಂತ ಮನೆಯನ್ನೂ ಮಾರಿ ಬಾಡಿಗೆ ಮನೆಯಲ್ಲಿ ಜೀವನ ಸಾಗಿಸಿದರು. ಅವರು ಈ ಕಾರ್ಯ ಮಾಡದೇ ಹೋದಲ್ಲಿ ಜನಸಾಮಾನ್ಯರಿಗೆ ಶರಣರ ವಚನಗಳ ನೈಜ ಪರಿಚಯವೇ ಆಗುತ್ತಿರಲಿಲ್ಲ, ಇಂದಿನ ಯುವ ಪೀಳಿಗೆ ಅವರ ಬದುಕಿನ ಈ ಆದರ್ಶಗಳನ್ನು ತಿಳಿದುಕೊಳ್ಳುವ ಅಗತ್ಯ ಇದೆ ಎಂದರು. ಕಾರ್ಯಕ್ರಮದ ಆರಂಭದಲ್ಲಿ ಡಾ.ಫ.ಗು.ಹಳಕಟ್ಟಿ ಅವರ ಭಾವಚಿತ್ರಕ್ಕೆ ವಿಶೇಷ ಪೂಜೆ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಡಾ.ಶ್ರೀಶೈಲ ಹುಕ್ಕೇರಿ ಜಿ.ಜಿ.ಮದರಕಲ್ಲ, ಇಸಿಓ ಸುರೇಶ ಹಿರೇಮಠ, ಸಿ.ಆರ್.ಸಿ. ರಾಜು ವಿಜಾಪುರ, ಸಂಗಮೇಶ ಪಾಲ್ಕಿ, ಈರಣ್ಣ ಕಲಬುರ್ಗಿ, ಶಿವಲಿಂಗಪ್ಪ ಪಾಲ್ಕಿ ಮಹಾಂತೇಶ ಮುರಾಳ, ಜಗದೀಶ ಬಿಳೇಬಾವಿ, ಅಶೋಕ ಚಿನಗುಡಿ, ಪ್ರಭು ಸಣ್ಣಕ್ಕಿ,ಡಾ. ಅನಿತಾ ಸಜ್ಜನ, ಮಹಾನಂದ ಉಮಾರ್ಜಿ, ಸುಮಂಗಲ, ಶೈಲಶ್ರೀ ಕಂಚಾಣಿ,ಮಹಾಂತಗೌಡ ದೊರೆಗೋಳ, ಮುನ್ನಾ ಅತ್ತಾರ, ಮತ್ತಿತರರು ಇದ್ದರು.

# ಗುಣಮಟ್ಟದ ಕಾಮಗಾರಿಗೆ ಸಿಇಓ ಸೂಚನೆ ಸಿಸಿ ರಸ್ತೆ, ಬದು ನಿರ್ಮಾಣ ಕಾಮಗಾರಿ ಪರಿಶೀಲನೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.2–ಜಿಲ್ಲೆಯ ಹುನಗುಂದ ತಾಲೂಕಿನ ಗ್ರಾಮೀಣ ಪ್ರದೇಶ ವ್ಯಾಪ್ತಿಯಲ್ಲಿ ಬರುವ ವಿವಿಧ ಗ್ರಾಮಗಳಲ್ಲಿ ಸಿಸಿ ರಸ್ತೆ, ಅಂಗನವಾಡಿ ಕಟ್ಟಡ, ಬದು ನಿರ್ಮಾಣ ಸೇರಿದಂತೆ ವಿವಿಧ ಕಾಮಗಾರಿಗಳನ್ನು ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಪರಿಶೀಲನೆ ಮಾಡಿದರು.

ಹುನಗುಂದ ತಾಲೂಕಿನ ಸೂಳೆಭಾವಿ ಗ್ರಾಮದಲ್ಲಿ ಕೃಷಿ ಇಲಾಖೆಯ ಗೋಕಟ್ಟೆ ಕಾಮಗಾರಿ, ಕಮತಗಿಯಿಂದ ಬೆನಕಟ್ಟಿ ಗ್ರಾಮದವರೆಗೆ ರಸ್ತೆ ಕಾಮಗಾರಿ, ಹಿರೇಮಾಗಿ ಗ್ರಾಮದಲ್ಲಿನ ಸಂತ ಸೇವಾಲಾಲ್ ಮಂದಿರ ಹತ್ತಿರ ಸಿಸಿ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಪರಿಶೀಲನೆ ವೇಳೆಯಲ್ಲಿ ಗುಣಮಟ್ಟದ ಕಾಮಗಾರಿಗಳಿಗೆ ಹೆಚ್ಚಿನ ಗಮನಹರಿಸಬೇಕು. ನಿಗದಿತ ಅವಧಿಯಲ್ಲಿ ಕಾಮಗಾರಿ ಪೂರ್ಣಗೊಳಿಸುವಂತೆ ಸೂಚನೆ ನೀಡಿದರು. ಹಿರೇಮಾಗಿ ಗ್ರಾಮದ ನರ್ಸರಿಗೆ ಭೇಟಿ ನೀಡಿದ ಕುರೇರ ಅವರು, ಹಸರೀಕರಣಕ್ಕಾಗಿ ಕೈಗೊಂಡ ಅಭಿಯಾನ ಕುರಿತು ಮಾಹಿತಿ ಪಡೆದುಕೊಂಡು ನರ್ಸರಿಯಲ್ಲಿ ಸಸಿಯನ್ನು ನೆಟ್ಟು ನೀರುಣಿಸಿದರು. ಅಮೀನಗಡ ಹೋಬಳಿ ವ್ಯಾಪ್ತಿಯ ಕೃಷಿ ಇಲಾಖೆಯಡಿ ಕೈಗೊಂಡ ಬದು ನಿರ್ಮಾಣ ಕಾಮಗಾರಿ ವೀಕ್ಷಣೆ ಮಾಡಿ ನಂತರ ಹುನಗುಂದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿಗೆ ಭೇಟಿ ನೀಡಿ ಕಡತ ವಿಲೇವಾರಿ ಕಾರ್ಯವನ್ನು ಪರಿಶೀಲನೆ ಮಾಡಿದರು.

ಶಿಶುಅಭಿವೃದ್ದಿಯೋಜನಾಧಿಕಾರಿಗಳ ಕಚೇರಿಗೆ ಭೇಟಿ ನೀಡಿ ಕಡತ ಪರಿಶೀಲನೆ ಮಾಡಿ ನಿವೇಶನ ರಹಿತ ಅಂಗನವಾಡಿ ಕೇಂದ್ರಗಳಿಗೆ ನಿವೇಶನ ಗುರುತಿಸುವ ಕಾರ್ಯ ಚುರುಕಾಗಿ ಮಾಡಬೇಕು. ಕೇವಲ ಗುರುತಿಸುವ ಕಾರ್ಯ ಮಾಡಿದರೆ ಸಾಕು ಮುಂದಿನ ಕ್ರಮ ಮೇಲ್ಮಟ್ಟದ ಅಧಿಕಾರಿಗಳು ಮಾಡಲಿದ್ದಾರೆ ಎಂದು ತಿಳಿಸಿದರು.

ನಂತರ ತಾಲೂಕಾ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳ ಕಾರ್ಯಾಲಯಕ್ಕೆ ಭೇಟಿ ನೀಡಿ ಇಲಾಖೆಯ ಪ್ರಗತಿ ಪರಿಶೀಲನೆ ಕೈಗೊಂಡರು.

ಇಸ್ಲಾಂಪೂರದಲ್ಲಿನ ಡಬ್ಲೂಟಿಪಿ ಕಾಮಗಾರಿ ಪರಿಶೀಲನೆ ಮಾಡಿ ನಂತರ ತಾಲೂಕಾ ವ್ಯಾಪ್ತಿಯಲ್ಲಿ ಬರುವ ವಿವಿಧ ವಸತಿ ನಿಲಯಗಳಿಗೆ ಭೇಟಿ ನೀಡಿ ಮಕ್ಕಳ ಹಾಜರಾತಿ, ಸ್ವಚ್ಚತೆ, ಕಲಿಕಾ ಸಾಮರ್ಥ್ಯ ಪರಿಶೀಲನೆ ಮಾಡಿದರು. ಭೇಟಿ ಸಮಯದಲ್ಲಿ ತಾಲೂಕಾ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಮುರಳಿ ದೇಶಪಾಂಡೆ, ಜಂಟಿ ಕೃಷಿ ನಿರ್ದೇಶಕ ಲಕ್ಷ್ಮಣ ಕಳ್ಳೇನ್ನವರ, ಕೃಷಿ ಉಪನಿರ್ದೇಶಕ ಎಲ್.ಐ.ರೂಢಗಿ ಸೇರಿದಂತೆ ಇತರರು ಇದ್ದರು.

## ಭೋಸರಾಜು ರಾಯಚೂರ ಜಿಲ್ಲಾ ಪ್ರವಾಸ

ರಾಯಚೂರು ಜುಲೈ 02–: ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಹಾಗೂ ಕರ್ನಾಟಕ ವಿಧಾನ ಪರಿಷತ್ತು ಸಭಾ ನಾಯಕರಾದ ಎನ್.ಎಸ್.ಭೋಸರಾಜು ಅವರು ಜುಲೈ 5ರಂದು ರಾಯಚೂರು ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿದ್ದಾರೆ. ಅಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲೆಯ ಮಾನ್ವಿ ವಿಧಾನಸಭಾ ಕ್ಷೇತ್ರದಲ್ಲಿ ನಡೆಯುವ ಕಂದಾಯ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗಿಯಾಗಿ, ನಂತರ ಮಾನ್ವಿ ವಿಧಾನಸಭಾ ಕ್ಷೇತ್ರದ ಶಾಸಕರೊಂದಿಗೆ ವಿವಿಧ ಗ್ರಾಮಗಳಿಗೆ ಭೇಟಿ ನೀಡುವರು. ಸಂಜೆ 7 ಗಂಟೆಗೆ ರಾಯಚೂರಿಗೆ ಆಗಮಿಸಿ ವಾಸ್ತವ್ಯ ಹೂಡಲಿದ್ದಾರೆ ಎಂದು ಸಚಿವರ ಆಪ್ತ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ದೇಶ ರಕ್ಷಣೆಗೆ ಯುವಕರು ಸೈನ್ಯಕ್ಕೆ ಸೇರಬೇಕು–ಅರಕೇರಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.2– ದೇಶ ಸೇವೆ ಮಾಡುವ ಛಲವುಳ್ಳ ಯುವಕರು ಸೈನ್ಯಕ್ಕೆ ಸೇರಬೇಕು ಎಂದು ಅಖಿಲ ಕರ್ನಾಟಕ ಮಾಜಿ ಸೈನಿಕರ ಸಂಘದ ಜಿಲ್ಲಾಧ್ಯಕ್ಷ ಗದಿಗೆಪ್ಪ ಅರಕೇರಿ ಹೇಳಿದರು.

ಭಾರತೀಯ ಸೇನಾ ಪಡೆಯಲ್ಲಿ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿ ಮಂಗಳವಾರ ತವರಿಗೆ ಆಗಮಿಸಿದ ಶಿರಗುಂಪಿ ಗ್ರಾಮದ ಹವಾಲ್ದಾರ್ ಮಂಜುನಾಥ ಜೋಗಿ ಅವರಿಗೆ ಏರ್ಪಡಿಸಿದ್ದ ಸ್ವಾಗತ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.ಇಂದು ಯುವಕರಿಗೆ ಸೇನೆಗೆ ಸೇರಲು ಸಾಕಷ್ಟು ಅವಕಾಶಗಳಿವೆ. ದೇಶ ಸೇವೆಯೇ ಈಶ ಸೇವೆ ಎಂಬಂತೆ ದೇಶ ರಕ್ಷಣೆಯಲ್ಲಿ ತೊಡಗಲು ಮುಂದಾಗಬೇಕು ಎಂದ ಅರಕೇರಿ, ಇಂದು ಮಹಿಳೆಯರು ಸಹ ಸೈನ್ಯ ಸೇರಿ ದೇಶ ಸೇವೆಗೆ ಮುಂದಾಗಿದ್ದಾರೆ ಎಂದು ಹೇಳಿದರು. ತಳಗಿಹಾಳ ಪ್ರೌಢಶಾಲಾ ಮುಖ್ಯಗುರು ಎಸ್.ಎಸ್.ನಾಗರಾಳ ಹಾಗೂ ನಿವೃತ್ತ ಶಿಕ್ಷಕ ಗಣೇಶ ಹೊರಪೇಟೆ ಮಾತನಾಡಿ, ಹಗಲು ರಾತ್ರಿಯೆನ್ನದೆ ಸೈನಿಕರು ದೇಶದ ಗಡಿ ಕಾಯುತ್ತಿರುವುದರಿಂದ ನಾವೆಲ್ಲ ಸುರಕ್ಷಿತವಾಗಿದ್ದೇವೆ. ಯೋಧರ ಸೇವೆ ಅವಿಸ್ಮರಣೀಯ ಎಂದರು.

ಅಖಿಲ ಕರ್ನಾಟಕ ಮಾಜಿ ಸೈನಿಕರ ಸಂಘದ ಕಾರ್ಯಾಧ್ಯಕ್ಷ ಪ್ರಕಾಶ ಸಿಂಗರಡ್ಡಿ, ಕ್ಯಾಪ್ಟನ್‌ಯಂಕಣ್ಣ ಹಟ್ಟಿ, ಗ್ಯಾನಪ್ಪ ದಳವಾಯಿ, ಸುಬೇದಾರ ಶಂಕ್ರಪ್ಪ ಬಾರಕೇರ, ಮಾಜಿ ಸೈನಿಕರಾದ ಮಂಜುನಾಥ ಮನಗೂಳಿ, ಯಲ್ಲಪ್ಪ ಕಡೆಮನಿ, ನಾಗಪ್ಪ ಮುಳಗುಂದ, ಗುರುರಾಜ್ ರೊಳ್ಳಿ, ನಿವೃತ್ತ ಶಿಕ್ಷಕ ಆರ್.ಎಸ್.ಗಾಡದ ಅತಿಥಿಗಳಾಗಿದ್ದರು.

ಕಾರ್ಯಕ್ರಮಕ್ಕೂ ಮೊದಲು ಗ್ರಾಮಕ್ಕೆ ಆಗಮಿಸಿದ ಹವಾಲ್ದಾರ್ ಮಂಜುನಾಥ ಜೋಗಿ ಅವರನ್ನು ಇಲಾಳ, ತಳಗಿಹಾಳ ಮತ್ತು ಶಿರಗುಂಪಿ ಗ್ರಾಮಗಳ ಜನತೆ ಮೆರವಣಿಗೆ ಮೂಲಕ ಗ್ರಾಮ ದೇವತೆಯ ದೇವಸ್ಥಾನಕ್ಕೆ ಕರೆತಂದರು. ಮೂರೂ ಗ್ರಾಮಗಳ ಪರವಾಗಿ ಯೋಧನನ್ನು ಸನ್ಮಾನಿಸಲಾಯಿತು.

# ಸಮಾನತೆಗೆ ಕರುಣೆಯ ತತ್ವವಿರುತ್ತದೆ:ಬಸವಮೂರ್ತಿ ಸ್ವಾಮೀಜಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.2–ಮನುಷ್ಯನ ವೈಚಾರಿಕ ಪ್ರಜ್ಞೆಗೆ ಎಡ ಬಲವೆಂಬ ಗುದ್ದಾಟವಿದೆ ವಿನ: ಮನುಷ್ಯತ್ವಕ್ಕೆ ಮಾತ್ರ ಸಮಾನತೆಯ ಕರುಣೆಯ ತತ್ವವಿರುತ್ತದೆ ಎಂಬುದನ್ನು ನಮ್ಮ ಸಮುದಾಯ ಕಾಲದುದ್ದಕ್ಕೂ ಸಾರುತ್ತಲೇ ಬಂದಿದೆ ಎಂದು ಚಿತ್ರದುರ್ಗದ ಶಿವಶರಣ ಮಾದಾರ ಚೆನ್ನಯ್ಯ ಗುರುಪೀಠದ ಡಾ.ಬಸವಮೂರ್ತಿ ಮಾದಾರ ಚೆನ್ನಯ್ಯ ಸ್ವಾಮಿಗಳು ಹೇಳಿದರು.

ನಗರದ ಶಿವಶರಣ ಮಾದಾರ ಚೆನ್ನಯ್ಯ ಸೇವಾ ಸಮಿತಿ ಬಿ.ವಿ.ವಿ.ಸಂಘದ ನೂತನ ಸಭಾಂಗಣದಲ್ಲಿ ಬುಧವಾರ ಹಮ್ಮಿಕೊಂಡಿದ್ದ ಪ್ರೊ.ಹೆಚ್.ಲಿಂಗಪ್ಪ ಚಿತ್ರದುರ್ಗ ರಚಿಸಿರುವ ಆದಿಮರ ಚರಿತ್ರೆ ಮತ್ತು ಎಂಟು ದಲಿತ ಶರಣ–ಶರಣೆ ವಚನಕಾರರ ಕೃತಿಗಳ ಲೋಕಾರ್ಪಣೆ ಸಮಾರಂಭದ ದಿವ್ಯ ಸಾನಿಧ್ಯವಹಿಸಿ ಅವರು ಮಾತನಾಡಿದರು.

ಸಾಮಾಜಿಕ, ಸಾಂಸ್ಕೃತಿಕವಾಗಿ, ಆರ್ಥಿಕವಾಗಿ ಉಳಿದೆಲ್ಲ ಸಮುದಾಯಗಳಂತೆ ನಮ್ಮ ಇರುವಿಕೆ ಮತ್ತು ಅಸ್ತಿತ್ವವನ್ನು ಸಾಬೀತುಪಡಿಸುವುದರಿಂದ ನಮ್ಮ ಜನರ ಸ್ವಾಭಿಮಾನವು ಹೆಚ್ಚುತ್ತದೆ. ಸಮಾಜ ಹಾಗೂ ಸರಕಾರಗಳ ಸೌಲಭ್ಯ ಹಾಗೂ ಗೌರವ ಪಡೆಯಲು ಒಂದು ಅಸ್ತಿತ್ವ ಹೊಂದಿದಂತಾಗುತ್ತದೆ. ಅಂಥ ಅಸ್ತಿತ್ವದ ಪ್ರಶ್ನೆಗಳಿಗೆ ಉತ್ತರ ನೀಡಲೆಂದು ಇಂತಹ ಸಂಶೋಧನಾತ್ಮಕ ಹಾಗೂ ವಿಮರ್ಶಾತ್ಮಕ ಕೃತಿಗಳು ಅತ್ಯಂತ ಮಹತ್ವದ ಸಂಗತಿಗಳಾಗಿ ನಮಗೆ ಬೆಂಬಲವಾಗಿ ದೊರಕಿದಂತಾಗುತ್ತದೆ ಎಂದು ಸ್ವಾಮೀಜಿ ಹೇಳಿದರು. ಕಾರ್ಯಕ್ರಮ ಉದ್ಘಾಟಿಸಿ ಕೃತಿಗಳನ್ನು ಬಿಡುಗಡೆ ಮಾಡಿ ಮಾತನಾಡಿದ ಮಾಜಿ ಸಚಿವ ಎಸ್.ಆರ್. ಪಾಟೀಲ, ಶರಣ ಪರಂಪರೆಯಯಲ್ಲಿ ಶೋಷಿತ ವರ್ಗಗಳನ್ನು ಕೂಡಿಸಿಕೊಂಡು ಸರ್ವರಿಗೂ ಸಮಾನತೆ ತಂದವರು ಬಸವಣ್ಣನವರು. ಅಂದು ನಡೆನುಡಿ ಒಂದಾಗಿತ್ತು, ಇಂದು ನಡೆ ನುಡಿಗೆ ಬಾರಿ ಅಂತರವಿದೆ. ಶರಣ ಶರಣೆಯರ ಆದಿಮರ ಕುರಿತು ರಚಿಸಿರುವ ಮೌಲಿಕ ಗ್ರಂಥ ಸಮುದಾಯಕ್ಕೆ ಉಪಯುಕ್ತವಾಗಿವೆ. ಇಂದು ಸಮ ಸಮಾಜದ ನಿರ್ಮಾಣದ ಅವಶ್ಯಕತೆ ಇದೆ ಎಂದರು.

ಚಾಲುಕ್ಯಶ್ರೀ ಪ್ರಶಸ್ತಿ ಸ್ವೀಕರಿಸಿ ಮಾತನಾಡಿದ ಚಿತ್ರದುರ್ಗದ ಲೇಖಕರು ಹಾಗೂ ಶರಣ ಸಾಹಿತಿ ಪ್ರೊ. ಹೆಚ್.ಲಿಂಗಪ್ಪ, ಜಗತ್ತಿನಲ್ಲಿಯೇ ಅತ್ಯಂತ ಶ್ರೇಷ್ಠವಾದ ಸಂಸ್ಕೃತಿ ನಮ್ಮದು. ನಮ್ಮ ಸಮಾಜ ಉತ್ತಮ ಪರಂಪರೆಯನ್ನು ಹೊಂದಿದೆ. ಆದರೆ ಶೋಷಣೆ ಅನ್ಯಾಯಕ್ಕೆ ಒಳಗಾದಂತ ಈ ಸಮಾಜದಲ್ಲಿ ಹುಟ್ಟಿರುವಂತ ಮಹಾನ ದಾರ್ಶನಿಕರು ಸಾಕಷ್ಟು ಕೊಡುಗೆಗಳನ್ನು ಭಾರತದ ಸಾಹಿತ್ಯಕ್ಕೆ ಕೊಟ್ಟಿದ್ದಾರೆ ಎಂದರು. ಅಧ್ಯಕ್ಷತೆ ವಹಿಸಿ ಮಾತನಾಡಿದ ಮಾಜಿ ಶಾಸಕ ವೀರಣ್ಣ ಚರಂತಿಮಠ, ಶರಣರ ಆದರ್ಶಗಳನ್ನು ಅನುಸರಿಸಿದಲ್ಲಿ ಸಮಸ್ಯೆಗಳಿರುವುದಿಲ್ಲ, ಆ ನಿಟ್ಟಿನಲ್ಲಿ ಸಮಕಾಲಿನ ಸಮಸ್ಯೆಗಳನ್ನು ಅರಿತು ಮಾತನಾಡುವಂತವರು, ಬರೆಯುವಂತಹ ಚಿಂತಕರು ಶೋಷಿತ ಸಮುದಾಯದಿಂದ ಬೆಳೆಯಬೇಕಿದೆ ಎಂದು ಹೇಳಿದರು. ಮುತ್ತಣ್ಣ ಬೆಣ್ಣೂರ ಪ್ರಾಸ್ತಾವಿಕವಾಗಿ ಮಾತನಾಡಿದರು. ಶಿವಾನಂದ ಟವಳಿ ಸ್ವಾಗತಿಸಿದರು. ಇತಿಹಾಸ ಸಂಶೋಧಕ ಡಾ.ಎನ್.ಎಸ್. ಮಹಂತೇಶ ಆದಿಮರ ಚರಿತ್ರೆ ಕುರಿತು ಹಾಗೂ ಹಿರಿಯ ಜಾನಪದ ತಜ್ಞ ಡಾ.ಮೀರಾಸಾಬಿಹಳ್ಳಿ ಶಿವಣ್ಣ ದಲಿತ ವಚನಕಾರರು ಪುಸ್ತಕ ಕುರಿತು ಮತ್ತು ಎಂ.ಜಿ.ರಂಗಸ್ವಾಮಿ ಕಲ್ಯಾಣ ಕಾಲದ ಶರಣೆಯರ ಕುರಿತು ಮಾತನಾಡಿದರು. ಕಾರ್ಯಕ್ರಮದಲ್ಲಿ ಜಿ.ಎನ್.ಪಾಟೀಲ, ಡಾ.ಚನ್ನವೀರೇಗೌಡ, ಎಂ.ಯು. ಮೂಗನೂರ, ಯಲ್ಲಪ್ಪ ಬೆಂಡಿಗೇರಿ, ಸಂತೋಷ ಸವಣೂರ, ಯಲ್ಲಪ್ಪ ನಾರಾಯಣಿ, ಎಚ್.ವಿ.ಲಿಂಗಣ್ಣವರ್, ಲಕ್ಷ್ಮಣ ಯಂಕಂಚಿ, ಪರುಶುರಾಮ ಬಸವ್ವಗೋಳ, ಶ್ಯಾಮರಾವ ಘಾಟಗೆ, ಸಚಿನ ಕೊಡತ್ಞೆ, ಸುನಿಲ ಕಂಬೋಗಿ, ಕಾಂತಚಂದ್ರ ಜ್ಯೋತಿ, ಶಿವಾನಂದ ಬಿಸನಾಳ, ಹನಮಂತ ಚಿಮ್ಮಲಗಿ ಇದ್ದರು.

# ವಚನ ಸಾಹಿತ್ಯ ಸಂರಕ್ಷಣೆಯಲ್ಲಿ ಹಳಕಟ್ಟಿಯವರ ಶ್ರಮ ಅನನ್ಯ:ಶರಣು ಪಪ್ಪಾ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಜು.02:ವಚನಗಳನ್ನು ಸಂರಕ್ಷಣೆ ಮಾಡಿ ನಮಗೆ ಶರಣ ಸಾಹಿತ್ಯವನ್ನು ಓದಲು ಮಹತ್ವದ ಕಾರ್ಯ ಮಾಡಿದ ಡಾ.ಫ.ಗು.ಹಳ್ಳಕಟ್ಟಿ ಅವರು ಸೇವೆ ಅವಿಸ್ಮರಣೀಯ ಎಂದು ಕಲಬುರಗಿ ಚೇಂಬರ್ ಆಫ್ ಕಾರ್ಮಸ್‌ನ ಅಧ್ಯಕ್ಷ ಶರಣು ಪಪ್ಪಾ ಅವರು ಹೇಳಿದರು.

ಬುಧವಾರದಂದು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತ ಸುವರ್ಣ ಸಭಾ ಭವನದಲ್ಲಿ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಹಾನಗರಪಾಲಿಕೆ ಹಾಗೂ ಜಿಲ್ಲಾ ಪಂಚಾಯತ್ ಕಲಬುರಗಿ ಇವರುಗಳು ಸಂಯುಕ್ತಾಶ್ರಯದಲ್ಲಿ ಡಾ.ಫ.ಗು. ಹಳಕಟ್ಟಿಯವರ 146ನೇ ಜನ್ಮದಿನ "ವಚನ ಸಾಹಿತ್ಯ ಸಂರಕ್ಷಣಾ ದಿನಾಚರಣೆ" ಅವರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿ ಉದ್ಘಾಟಿಸಿ ಮಾತನಾಡಿದರು.

ಕಲ್ಯಾಣದ ಕ್ರಾಂತಿಯಿಂದ ಚದುರಿ ಹೋದ ಶರಣರ ವಚನಗಳನ್ನು ಸಂರಕ್ಷಣೆ ಮಾಡಿ ನಮಗೆ ಇಂದು ನಮಗೆ ನೀಡಿದ್ದಾರೆ. ಶರಣರ ತತ್ವಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕೆಂದು ಹೇಳಿದರು

ಮಾದನ ಹಿಪ್ಪರಗಾ ಶ್ರೀ ಶಿವಲಿಂಗೇಶ್ವರ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಾದ ಡಾ.ಬಸವ ಪಾಟೀಲ ಜವಳಿ ವಿಶೇಷ ಉಪನ್ಯಾಸ ನೀಡಿ ಮಾತನಾಡಿ, ಕತ್ತಲೆಯಲ್ಲಿ ಕೆಳದು ಹೋಗಿದ್ದ ವಚನಗಳನ್ನು ಸಂರಕ್ಷಣೆ ಮಾಡಿ ಮುಂದಿನ ತಲೆಮಾರುಗಳಿಗೆ ಮಾರ್ಗದರ್ಶಿ ಯಾಗಬೇಕೆಂಬ ಕಾರಣಕ್ಕೆ ತಮ್ಮ ಇಡೀ ಬದುಕು ಸವೆಸಿದ ಫ.ಗು. ಹಳಕಟ್ಟಿಯವರು



ಈ ನೆಲದ ಬೆಳಕ್ಕಾಗಿ ಈ ನೆಲದ ದಾರ್ಶನಿಕರಾಗಿ ಗಮನಸೆಳೆಯುತ್ತಾರೆ. ಎಂದರು.

ಅವರ ಸಾಮಾನ್ಯ ಬದಕು ಅಸಾಮಾನ್ಯವಾಗಿದ್ದು ಅವರ ಶ್ರಮದ ಫಲ ವಾಗಿ ಇಂದು ನಾವು ವಚನಗಳನ್ನು ನೋಡುತ್ತಿದ್ದೇವೆ ಎಂದು ಹೇಳಿದರು.

ಇಂಗ್ಲೀಷ ಮತ್ತು ಕನ್ನಡ ಎರಡು ಭಾಷೆಗೆ ಅನುವಾದ ಮಾಡಿದ್ದು, ದೂರದೃಷ್ಟಿ ಇರುವ ಕಾರಣಕ್ಕೆ ವಿಜಯಪುರಕ್ಕೆ ಆಗಿನ ಕಾಲದಲ್ಲಿ ಕೆರೆಕಟ್ಟಿಸಿದ್ದು, ಸಹಕಾರಿ ಬ್ಯಾಂಕ್ ಸ್ಥಾಪಿಸಿದ್ದು, ಬಿ.ಎಲ್.ಡಿ.ಈ ಸಂಸ್ಥೆ ಆರಂಭಿಸಿದ್ದು ಅವರ ಜನಪರ ಕಾಳಜಿ ಎತ್ತಿ ಹಿಡಿಯುತ್ತದೆ ಎಂದು ತಿಳಿಸಿದರು.

ಬಸವಣ್ಣನವರ ಕಾಲದಲ್ಲಿ ಅನೇಕ ವಚನಗಳನ್ನು ಸಾಹಿತ್ಯಗಳನ್ನು ರಚಿಸಿ ತಮ್ಮ ಜೀವನದಲ್ಲಿ ಅನೇಕ ಸಾಧನೆ ಮಾಡಿದರು ಎಂದರು. ಅವರ ಆದರ್ಶ ಮತ್ತು ತತ್ವಗಳನ್ನು ನಮ್ಮ ಇಂದಿನ ಯುವಕರು ಆಳವಡಿಕೊಳ್ಳಬೇಕೆಂದು ಅವರು ಹೇಳಿದರು.

ರಾಷ್ಟ್ರಪತಿ ಪದಕ ಪುರಸ್ಕøತರಾದ ಹಾಗೂ ನಿವೃತ್ತ ಡಿ.ವೈ.ಎಸ್.ಪಿ. ಸಮಿತಿ ಅಧ್ಯಕ್ಷರಾದ ಆರ್.ಸಿ.ಫಾಳೆ ಅವರು ಮಾತನಾಡಿ, ಡಾ.ಫ.ಗು.ಹಳ್ಳಿಯವರು ಧಾರವಾಡದಲ್ಲಿ ಬಿ.ಎ.ಪದವಿ ಮತ್ತು ಮಹಾರಾಷ್ಟ್ರದ ಮುಂಬಯಿ ಹೋಗಿ ಎಲ್.ಎಲ್.ಬಿ.ಪದವಿ ಪಡೆದರು ಬಸವಣ್ಣನವರ ಕಾಲದಲ್ಲಿ ಅನೇಕ ವಚನಗಳನ್ನು ರಚಿಸಿದರು

ಬಿಜಾಪೂರದಲ್ಲಿ ಕೆರೆಗಳ ನೀರು ಹರಿಸಿದರು. ಸರಳ ಜೀವನ ಸಾಗಿಸಿದರು. ಎಂದರು. ಅವರ ಆದರ್ಶ ತತ್ವಗಳನ್ನು ನಾವು ಪಾಲಿಸಿಕೊಂಡು ಹೋಗಬೇಕೆಂದರು.

ವೀರಶೈವ ಮಹಾಸಭಾದ ಕಾರ್ಯಾಧ್ಯಕ್ಷರು ರವಿಂದ್ರ ಶಾಹಬಾದಿ, ಜಿಲ್ಲಾಧಿಕಾರಿಗಳ ಕಚೇರಿ ಸಾಮಾಜಿಕ ಭದ್ರತಾ ಮತ್ತು ಪಿಂಚಣಿ ಸಹಾಯಕ ನಿರ್ದೇಶಕ ಶಿವಶರಣಪ್ಪ ದನ್ನಿ ಮಾತನಾಡಿದರು. ಕನ್ನಡ ಮತ್ತು ಸಂಸ್ಕತಿ ಇಲಾಖೆಯ ಉಪನಿರ್ದೇಶಕಿ ಜಗದೀಶ್ವರಿ ಶಿವಕೇರಿ ಸ್ವಾಗತಿಸಿದರು.

ಜಗತ್ ವೃತ್ತದಿಂದ ಸರ್ದಾರ ವಲ್ಲಭಭಾಯಿ ಪಟೇಲ್ ವೃತ್ತ ಮಾರ್ಗವಾಗಿ

ಕನ್ನಡದ ಭವನ ಸಾಂಸ್ಕøತಿಕ ಮೆರವಣಿಗೆ ಸಾಮಾಜಿಕ ಚಿಂತಕರಾದ ಜಾಹ್ನವಿ, ಶರಣಕುಮಾರ ಮೋದಿ ಚಾಲನೆ ನೀಡಿದರು.

ವೇದಿಕೆ ಮೇಲೆ ಜಿಲ್ಲಾಧಿಕಾರಿಗಳ ಶಿಷ್ಠಾಚಾರದ ತಹಶೀಲ್ದಾರ ಪಂಪಯ್ಯ ಕನ್ನಡ ಸಾಹಿತ್ಯ ಪರಿಷತ್ತ ಕಾರ್ಯದರ್ಶಿ ಶಿವರಾಜ ಅಂಗಡಿ,

ಸಮಾಜದ ಮುಖಂಡರಾದ ಅಪ್ಪಾರಾವ ಅಕ್ಕೋಣೆ, ಶಿವಪುತ್ತಪ್ಪ ಭಾವಿ, ವಿನೋದಕುಮಾರ, ಜೇನವೇರಿ , ಶಿವಲಿಂಗಪ್ಪ ಅಷ್ಟಗಿ, ಡಾ ಬಸವರಾ ಚೆನ್ನಾ ಸೇರಿದಂತೆ ಸರ್ವ ಪದಾಧಿಕಾರಿಗಳು ಹಾಗೂ ಸಮಿತಿಯ ಸದಸ್ಯರು ಭಾಗವಹಿಸಿದ್ದರು.

# ಚಿಟಗುಪ್ಪ ಅಭಿವೃದ್ಧಿಗೆ ಕಾಂಗ್ರೆಸ್ ಕೊಡುಗೆ ಅಪಾರ

ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್:ಜು.2:ಚಿಟಗುಪ್ಪ ಪಟ್ಟಣದ ಸಮಗ್ರ ಅಭಿವೃದ್ಧಿಗೆ ಪೂರಕವಾಗಿ ಕಾಂಗ್ರೆಸ್ ಸರಕಾರ ನೀಡಿದ ಕೊಡುಗೆ ಅಪಾರವಾಗಿದೆ ಎಂದು ಮಾಜಿ ಸಚಿವ ರಾಜಶೇಖರ ಪಾಟೀಲ್ ಪತ್ರಿಕಾ ಹೇಳಿಕೆ ನೀಡಿದ್ದಾರೆ.

ಈ ಹಿಂದೆ ಮುಖ್ಯಮಂತ್ರಿಯಾಗಿದ್ದ ಜಗದೀಶ ಶೆಟ್ಟರ್ ಹಾಗೂ ಕಂದಾಯ ಸಚಿವರಾಗಿದ್ದ,ಆರ್.ಅಶೋಕಗೆ ಅನೇಕ ಬಾರಿ ಅನುದಾನ ನೀಡಯವಂತೆ ಮನವಿ ಮಾಡಲಾಗಿತ್ತು. ಆದರೆ ಅವರು ನೀಡಿದ ಭರವಸೆ ಕೇವಲ



ಭರವಸೆಯಾಗಿಯೇ ಉಳಿಯಿತು. ಇದು ಬಹಳ ಬೇಸರದ ಸಂಗತಿಯಾಗಿದೆ ಎಂದರು.

ಆದರೆ ರಾಜ್ಯದಲ್ಲಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರಕಾರ ಬಂದ ನಂತರ ಚಿಟಗುಪ್ಪ ತಾಲೂಕಿನ ಸಮಗ್ರ ಅಭಿವೃದ್ಧಿಗೆ ಪೂರಕವಾಗಿ ನಮ್ಮ ಮನವಿಗೆ ಸ್ಪಂಧಿಸಿದ ಕಂದಾಯ ಸಚಿವ ಕೃಷ್ಣಬೈರೆಗೌಡ ವರು ಚಿಟಗುಪ್ಪ ಪಟ್ಟಣದಲ್ಲಿ ಪ್ರಜಾಸೌಭ ನಿರ್ಮಾಣಕ್ಕೆ 8.60 ಕೋಟಿ ರೂಪಾಯಿ ಅನುದಾನ ಮಂಜೂರು ಮಾಡಿದ್ದು, ಈ ಭಾಗದ ಜನರ ಪರವಾಗಿ ಸರಕಾರಕ್ಕೆ ಧನ್ಯವಾದಗಳನ್ನು ತಿಳಿಸುತ್ತೇನೆ ಎಂದು ತಿಳಿಸಿದ್ದಾರೆ.

# ಅವ್ಯವಸ್ಥೆ ವಿರುದ್ಧ ಅಸಮಧಾನ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜು.2:ತಾಲೂಕಿನ ಅಂಗನವಾಡಿ, ಸರಕಾರಿ ಶಾಲೆ, ವಸತಿ ಶಾಲೆ, ವಸತಿ ನಿಲಯ, ಗ್ರಾಮ ಪಂಚಾಯಿತಿ ಸೇರಿ ವಿವಿಧೆಡೆ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರು ಭೇಟಿ ನೀಡಿ ಅವ್ಯವಸ್ಥೆ ವಿರುದ್ಧ ಅಸಮಧಾನ ಹೊರಹಾಕಿದರು. ತಳವಾಡ(ಕೆ) ಗ್ರಾಮದ ಅಂಗನವಾಡಿ, ಸರಕಾರಿ ಹಿರಿಯ ಪ್ರಾಥಮಿಕ ಶಾಲೆ, ಕೋನಮೇಳಕುಂದಾ ಮೊರಾರ್ಜಿ ವಸತಿ ಶಾಲೆ, ನಿಟ್ಟೂರ(ಬಿ) ಗ್ರಾಮದ ಗ್ರಾಮ ಪಂಚಾಯತಿಗೆ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಶಶಿಧರ ಕೋಸಂಬೆ ನೇತೃತ್ವದ ತಂಡ ಬುಧವಾರ ಭೇಟಿ ನೀಡಿ ಮೊಟ್ಟೆ, ಆಹಾರ ಧಾನ್ಯ ಪೂರೈಕೆ ಸೇರಿ ಶಾಲಾ, ಮಕ್ಕಳ ಗ್ರಾಮ ಸಭೆ ನಡಾವಳಿ ದಾಖಲೆ ಪರಿಶೀಲನೆ ನಡೆಸಿತು. ಅಂಗನವಾಡಿ ಕೇಂದ್ರದ ಭೇಟಿ ನೀಡಿದ ಸಂದರ್ಭದಲ್ಲಿ ಅಂಗನವಾಡಿ ಕಾರ್ಯಕರ್ತೆ ಇಲ್ಲದಿರುವುದನ್ನು ಕಂಡು ಆಯೋಗದ ಸದಸ್ಯರು ಗರಂ ಆದರು. 23 ಮಕ್ಕಳ ದಾಖಲಾತಿಯಲ್ಲಿ ಕೇವಲ 2 ಮಕ್ಕಳು ಹಾಜರಾತಿ ಇದ್ದರೇ ಹೇಗೆ ಉಳಿದ ಮಕ್ಕಳು ಎಲ್ಲಿದ್ದಾರೆ ಎಂದು ಪ್ರಶ್ನಿಸಿದರು.

ಆಹಾರ ಧಾನ್ಯದ ಜತೆಗೆ ಸಣ್ಣ ಗಾತ್ರದ ಮೊಟ್ಟೆ ಕಂಡು ಆಶ್ಚರ್ಯ ವ್ಯಕ್ತಪಡಿಸಿ ಒಂದು ಮಗುವಿಗೆ ಕನಿಷ್ಠ 50ಗ್ರಾಂ ನಷ್ಟು ಮೊಟ್ಟೆ ಕೊಡಬೇಕು.

ಆದರೆ ಅದಕ್ಕಿಂತ ಸಣ್ಣ ಗಾತ್ರದ ಮೊಟ್ಟೆ ಪೂರೈಕೆ ಆಗುತ್ತಿರುವುದಕ್ಕೆ ಅಸಮಧಾನ ವ್ಯಕ್ತಪಡಿಸಿ ದಾಖಲೆಯನ್ನು ಸಮರ್ಪಕವಾಗಿ ನಿರ್ವಹಿಸದ ಅಂಗನವಾಡಿ ಕಾರ್ಯಕರ್ತೆ ಮತ್ತು ಮೊಟ್ಟೆ ಪೂರೈಕೆದಾರರಿಗೆ ನೋಟಿಸ್ ನೀಡಿ ಆಯೋಗಕ್ಕೆ ವರದಿ ಸಲ್ಲಿಸುವಂತೆ ಸಿಡಿಪಿಓಗೆ ಸೂಚನೆ ನೀಡಿದರು. ನಂತರ ಅಲ್ಲಿಯೇ ಸಮೀಪದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ಅಡುಗೆ, ತರಗತಿ ಕೋಣೆಗಳಿಗೆ ಭೇಟಿ ನೀಡಿದರು. ಒಂದು ಕೋಣೆಯಲ್ಲಿ 1 ರಿಂದ 5 ಮತ್ತೊಂದು ಕೋಣೆಯಲ್ಲಿ 6 ರಿಂದ 7ನೆಯ ತರಗತಿ ವರೆಗೆ ಮಕ್ಕಳಿಗೆ ಸಾಮೂಹಿಕವಾಗಿ ಕುಡಿಸಿ ಪಾಠ ಬೋಧನೆ ಮಾಡುತ್ತಿರುವುದನ್ನು ಕಂಡು ದಂಗಾದರು. ನಂತರ ಅಡುಗೆ ಕೋಣೆಗೆ ಭೇಟಿ ನೀಡಿ ತೊಗರಿ ಬೇಳೆ ಪರಿಶೀಲಿಸಿ ಕಲಬೆರಿಕೆ ಕಳಪೆ

> ಈ ಭಾಗದ ಶೈಕ್ಷಣಿಕ ಪ್ರಗತಿಗೆ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರು ವಿವಿಧ ಯೋಜನೆಯಡಿ ಸಾಕಷ್ಟು ಪಾಠೋಪಕರಣ, ಪೀಠೋಪಕರಣ ಒದಗಿಸುತ್ತಿದ್ದಾರೆ. ಆದರೆ ಸಮರ್ಪಕವಾಗಿ ಬಳಕೆ ಆಗದಿರುವುದು ಬೇಸರ ತರಿಸಿದೆ.
>
> –ಶಶಿಧರ ಕೋಸಂಬೆ ಸದಸ್ಯರು ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಬೆಂಗಳೂರು.

> ಶಾಲೆಯ ಒಂದೇ ಕೋಣೆಯಲ್ಲಿ 1 ರಿಂದ 5ನೆಯ ತರಗತಿ ಮಕ್ಕಳಿಗೆ ಪಾಠ ಬೋಧನೆ ಮಾಡಿದ್ದರೇ ಶಿಕ್ಷಣ ವ್ಯವಸ್ಥೆ ಹೇಗೆ ಸುಧಾರಣೆ ಆಗಲು ಸಾಧ್ಯ. ಮೇಲಧಿಕಾರಿಗಳು ಗಮನ ಹರಿಸಿ ವ್ಯವಸ್ಥೆ ಸುಧಾರಿಸಬೇಕು.
>
> ಶೇಖರ ಗೌಡ ಜಿ ಸದಸ್ಯರು ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಬೆಂಗಳೂರು.

> ತಹಸೀಲ್ದಾರರ ಅಧ್ಯಕ್ಷತೆಯಲ್ಲಿ ಕಡ್ಡಾಯವಾಗಿ ಪ್ರತಿ ಮೂರು ತಿಂಗಳಿಗೊಮ್ಮೆ ಟಾಸ್ಕ್‌ಫೋರ್ಸ್ ಸಭೆ ನಡೆಸಿ ಪರಿಣಾಮಕಾರಿ ಕ್ರಮ ಜರುಗಿಸಬೇಕು.
>
> ಡಾ.ತಿಪ್ಪೇಸ್ವಾಮಿ ಕೆ.ಟಿ ಸದಸ್ಯರು ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಬೆಂಗಳೂರು

ತೊಗರಿ ಬೇಳೆ ಪೂರೈಕೆ ಮಾಡುತ್ತಿರುವ ವಿತರಿಕರಿಗೆ ನೋಟಿಸ್ ನೀಡುವಂತೆ ಸೂಚನೆ ನೀಡಿದರು.

ಶಾಲೆಯ ಆವರಣ ಸ್ವಚ್ಚತೆ ಇಲ್ಲದಿರುವುದಕ್ಕೆ ಅಸಮಧಾನ ಹೊರಹಾಕಿ ಮಕ್ಕಳಿಗೆ ಪ್ರತ್ಯೇಕ ತರಗತಿ ಕೋಣೆ ವ್ಯವಸ್ಥೆ ಮಾಡಿಸಿ ಪಾಠ ಬೋಧನೆ ಮಾಡಿಸುವಂತೆ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಆಯೋಗದ ಸದಸ್ಯರು ಸೂಚನೆ ನೀಡಿದರು.

ಪ್ರಿನ್ಸಿಪಲ್‌ಗೆ ತರಾಟೆ

ಕೋನಮೇಳಕುಂದಾ ಗ್ರಾಮದ ಮೊರಾರ್ಜಿ ದೇಸಾಯಿ ವಸತಿ ಶಾಲೆಗೆ ಆಯೋಗದ ಸದಸ್ಯರು ಭೇಟಿ ನೀಡಿ ಅಲ್ಲಿಯ ವ್ಯವಸ್ಥೆ ಪರಿಶೀಲಿಸಿದರು. ತರಗತಿ ಕೋಣೆಗೆ ಭೇಟಿ ನೀಡಿ ಮಕ್ಕಳ ಸಮಸ್ಯೆ ಆಲಿಸಿದರು.

ಕಳೆದ ವರ್ಷ ಸರಬರಾಜು ಆದ ಸಾಬೂನು, ಪೇಸ್ಟ್ ಒಳಗೊಂಡ ಕಿಟ್, ಶೂ, ಕಂಪಾಸ್ ಬಾಕ್ಸ್ ಮಕ್ಕಳಿಗೆ ನೀಡದೇ ಹಾಗೇ ಇಟ್ಟಿರುವುದನ್ನು ಗಮನಿಸಿದರು. ದಾಖಲೆ ಪುಸ್ತಕ ಅಮರ್ಪಕ ಮಾಹಿತಿ ಇರಲಿಲ್ಲ.

ನಂತರ ಪ್ರಿನ್ಸಿಪಲ್ ಅವರನ್ನು ವಿಚಾರಿಸಿ ಶಾಲೆಯಲ್ಲಿ ಮಕ್ಕಳ ದಾಖಲಾತಿ ಸಂಖ್ಯೆ ಎಷ್ಟಿದೆ ಎಸ್ಸೆಸ್ಸೆಲ್ಸಿ ಫಲಿತಾಂಶ ಎಷ್ಟು ಬಂದಿದೆ. ಕಳೆದ ವರ್ಷ ಪೂರೈಕೆಯಾದ ಕಿಟ್, ಶೂ ಮಕ್ಕಳಿಗೆ ಏಕೆ ವಿತರಿಸಿಲ್ಲ. ದೂರು ಪಟ್ಟಿಗೆ ಎಷ್ಟು ಪತ್ರಗಳು ಬಂದಿವೆ ಎಂದು ಪ್ರಶ್ನಿಸಿದರು. ಸಮರ್ಪಕ ಉತ್ತರ, ಸರಿಯಾಗಿ ದಾಖಲೆ ನೀಡದ ಪ್ರಿನ್ಸಿಪಲ್ ಮತ್ತು ವಾರ್ಡನ್ ಅವರನ್ನು ತರಾಟೆಗೆ ತೆಗೆದುಕೊಂಡು ಈ ಇಬ್ಬರನ್ನು ನೋಟಿಸ್ ನೀಡಿ ಆಯೋಗಕ್ಕೆ ವರದಿ ಸಲ್ಲಿಸುವಂತೆ ಸದಸ್ಯ ಶಶಿಧರ ಕೋಸಂಬೆ ಮೇಲಧಿಕಾರಿಗಳಿಗೆ ಮೊಬೈಲ್ ಕರೆ ಮಾಡಿ ಸೂಚಿಸಿದರು.

ಈ ಸಂದರ್ಭದಲ್ಲಿ ತಾಲೂಕು ಪಂಚಾಯತಿ ಸಹಾಯಕ ನಿರ್ದೇಶಕ ಚಂದ್ರಶೇಖರ ಬನ್ನಾಳೆ, ಕ್ಷೇತ್ರ ಶಿಕ್ಷಣಾಧಿಕಾರಿ ಸಿ.ಜಿ.ಹಳ್ಳದ, ಸಮಾಜ ಕಲ್ಯಾಣ ಇಲಾಖೆ ಎಡಿ ಸತೀಶ ಸಂಗನ್, ಬಿಸಿಯೂಟ ಅಧಿಕಾರಿ ಮಲ್ಲಿನಾಥ ಸಜ್ಜನ್ ಸೇರಿದಂಥೆ ಹಲವರು ಇದ್ದರು.

ನೀರಿನ ಸಮಸ್ಯೆ ನೀಗಿಸಿ

ನಿಟ್ಟೂರ(ಬಿ) ಗ್ರಾಮದ ಸಮಾಜ ಕಲ್ಯಾಣ

ಇಲಾಖೆಯ ಬಾಲಕರ ವಸತಿ ನಿಲಯಕ್ಕೆ ಸದಸ್ಯರು ಭೇಟಿ ನೀಡಿ ಕೊಠಡಿ, ಶೌಚಾಲಯ, ನೀರಿನ ವ್ಯವಸ್ಥೆ ಪರಿಶೀಲಿಸಿದರು. ನೀರಿನ ವ್ಯವಸ್ಥೆ ಇಲ್ಲದಿದ್ದರೆ ಮಕ್ಕಳು ಹೇಗೆ ವಸತಿ ಮಾಡಲು ಸಾಧ್ಯ ಕೂಡಲೇ ವ್ಯವಸ್ಥೆ ಸುಧಾರಿಸಿ ನೀರಿನ ವ್ಯವಸ್ಥೆ ಮಾಡಿಕೊಳ್ಳುವಂತೆ ಸಮಾಜ ಕಲ್ಯಾಣ ಇಲಾಖೆ ಎಡಿಗೆ ಸೂಚಿಸಿದರು.

ಪಿಡಿಓಗೆ ನೋಟಿಸ್

ನಿಟ್ಟೂರ(ಬಿ) ಗ್ರಾಮ ಪಂಚಾಯತಿಗೆ ಭೇಟಿ ನೀಡಿದ ಆಯೋಗದ ಸದಸ್ಯರು ಮಕ್ಕಳಿಗೆ ಸಂಬಂಧಿತ ವಿವಿಧ ಮಾಹಿತಿ ಕೇಳಿದ್ದರು. ಯಾವುದನ್ನು ದಾಖಲೆ ಪುಸ್ತಕದಲ್ಲಿ ಇಲ್ಲದ ಹಿನ್ನೆಲೆಯಲ್ಲಿ ಪಿಡಿಓಗೆ ನೋಟಿಸ್ ನೀಡಿ ಉತ್ತರಿಸುವಂತೆ ಸೂಚನೆ ನೀಡಿದರು.

# ಅಪರ ಜಿಲ್ಲಾಧಿಕಾರಿ ಶೀಲವಂತ ಅವರ ತಾಳ್ಮೆ, ಶಾಂತತೆ ಸಂಯಮದ ಕಾರ್ಯವೈಖರಿ ಶ್ಲಾಘನೀಯ:ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಜು.02 : ಬೀದರ ಜಿಲ್ಲೆಯಲ್ಲಿ ಕಳೆದ 15 ವರ್ಷಗಳಿಂದ ಸರಕಾರದ ವಿವಿಧ ಹುದ್ದೆಗಳಲ್ಲಿ ಕಾರ್ಯನಿರ್ವಹಿಸಿರುವ ಅಪರ ಜಿಲ್ಲಾಧಿಕಾರಿ ಶಿವಕುಮಾರ ಶೀಲವಂತ ಅವರ ತಾಳ್ಮೆ, ಸಂಯಮ, ಶಾಂತತೆಯ ಕಾರ್ಯವೈಖರಿ, ಸಿಬ್ಬಂದಿಗಳ ಜೊತೆ ಉತ್ತಮ ಸಂಬಂಧದ ಒಡನಾಟದ ಸೇವೆಯು ಶ್ಲಾಘನೀಯವೆಂದು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ಮೆಚ್ಚುಗೆ ವ್ಯಕ್ತಪಡಿಸಿದರು.

ಇಂದು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ದಾವಣಗೆರೆ ಜಿಲ್ಲೆಗೆ ಅಪರ ಜಿಲ್ಲಾಧಿಕಾರಿಯಾಗಿ ನಿರ್ಗಮಿಸುತ್ತಿರುವ ಶಿವಕುಮಾರ ಶೀಲವಂತ ಇವರಿಗೆ ಬೀಳ್ಕೊಡುಗೆ ಹಾಗೂ ನೂತನವಾಗಿ ಆಗಮಿಸಿರುವ ಡಾ.ಈಶ್ವರ ಉಳ್ಳಾಗಡ್ಡಿ ಅವರಿಗೆ ಸ್ವಾಗತ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡುತ್ತಿದ್ದರು.

ಕಂದಾಯ ಇಲಾಖೆಯ ವಿವಿಧ ಸ್ತರದ ಸಿಬ್ಬಂದಿಗಳು ಹಾಗೂ ಜಿಲ್ಲಾಧಿಕಾರಿಗಳ ನಡುವೆ



ಶಿವಕುಮಾರ ಶೀಲವಂತ ಅವರು ಸೇತುವೆಯಾಗಿ ಅತ್ಯುತ್ತಮವಾಗಿ ಕಾರ್ಯನಿರ್ವಹಿಸಿದ್ದಾರೆ. ಪ್ರತಿ ತಿಂಗಳು ತಾವು ತಿಂಗಳಿಗೊಮ್ಮೆ ಅಧಿಕಾರಿಗಳ ಸಭೆ ನಡೆಸುತ್ತಾರೆ. ಆದರೆ ಅಪರ ಜಿಲ್ಲಾಧಿಕಾರಿಯಾಗಿ ಶಿವಕುಮಾರ ಶೀಲವಂತ ಅವರು ವಾರಕ್ಕೊಮ್ಮೆ ಅಧಿಕಾರಿಗಳ ಜೊತೆ ವಿಡಿಯೋ ಸಂವಾದ ನಡೆಸಿ ಪ್ರಗತಿ ಮಾಹಿತಿ ಪಡೆಯುತ್ತಿದ್ದರು. ಅನೇಕ ಒತ್ತಡ ಸಂದರ್ಭಗಳನ್ನು ಸಂಯಮದಿಂದ ತಾಳ್ಮೆಯಿಂದ ಬಗೆಹರಿಸಿದ್ದಾರೆ. ಅವರ ಶಾಂತತೆಯ ಸ್ವಭಾವ ಮೆಚ್ಚುವಂತದ್ದು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಬೀದರ ವಿಶ್ವವಿದ್ಯಾಲಯದ ಕುಲಸಚಿವರಾದ ಸುರೇಖಾ ಅವರು ಮಾತನಾಡಿ, ಅಪರ ಜಿಲ್ಲಾದಿಕಾರಿಗಳ ಮಾರ್ಗದರ್ಶನ ಸಿಬ್ಬಂದಿಗಳ ಜೊತೆ ಒಡನಾಟ ನಮ್ಮೆಲ್ಲರಿಗೂ ಮಾದರಿಯಾಗಿದೆಯೆಂದರು. ತಾವು ವಿವಿಧ ಹುದ್ದೆಗಳಲ್ಲಿ ಸೇವೆ ಸಲ್ಲಿಸುವಾಗ ಉತ್ತಮ ಸಲಹೆ ಸೂಚನೆಗಳನ್ನು ನೀಡಿ ಸಮಸ್ಯೆಗಳನ್ನು ತಕ್ಷಣವೇ ಪರಿಹರಿಸುತ್ತಿದ್ದರೆಂದು ತಿಳಿಸಿದರು.

ನೂತನ ಅಪರ ಜಿಲ್ಲಾದಿಕಾರಿ ಡಾ.ಈಶ್ವರ ಉಳ್ಳಾಗಡ್ಡಿ ಅವರು ಮಾತನಾಡಿ, ಬೀದರ ಜಿಲ್ಲೆಯಲ್ಲಿ ತಾವು 5 ವರ್ಷ ಪಶು ವಿಶ್ವವಿದ್ಯಾಲಯದಲ್ಲಿ ಅಧ್ಯಯನ ಮಾಡಿದ್ದು, ಪ್ರೊಬೇಷನರಿ ತಹಸೀಲ್ದಾರಾಗಿಯೂ ಸೇವೆ ಸಲ್ಲಿಸಿದ ಹಿನ್ನೆಲೆಯಲ್ಲಿ ಬೀದರ ಜಿಲ್ಲೆಯ ಬಗ್ಗೆ ತಮಗೆ ಅನುಭವವಿದೆ. ಜಿಲ್ಲಾಧಿಕಾರಿಗಳ ಮಾರ್ಗದರ್ಶನದಲ್ಲಿ ಉತ್ತಮ ಸೇವೆ ಸಲ್ಲಿಸುವುದಾಗಿ ಭರವಸೆ ನೀಡಿದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಶಿವಕುಮಾರ ಶೀಲವಂತ ಅವರು ಬೀದರ ಜಿಲ್ಲೆಯಲ್ಲಿ ವಿವಿಧ ಹುದ್ದೆಗಳಲ್ಲಿ ಕಾರ್ಯನಿರ್ವಹಿಸಿದ್ಧದ ಜಿಲ್ಲಾಧಿಕಾರಿಳ ಮಾರ್ಗದರ್ಶನದಲ್ಲಿ ಉತ್ತಮ ಆಡಳಿತದ ಅನುಭವ ದೊ–ರೆತ್ತಿದೆಯೆಂದರು. ಜಿಲ್ಲಾಧಿಕಾರಿಗಳ ಸೂಕ್ಷ ?? ಹಾಗೂ ಪಾರದರ್ಶಕ ಆಡಳಿತದ ವೈಖರಿ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದ ಶೀಲವಂತ ಅವರು ಕಳೆದೊಂದು ವರ್ಷದಲ್ಲಿ ವಿವಿಧ ರೀತಿಯ ಆಡಳಿತ ಸುಧಾರಣಾ ಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದರು. ಜಿಲ್ಲಾಡಳಿತ ಭವನದ ಸ್ಥಳಾಂತರ, ಕಡತ ನಿರ್ವಹಣೆ, ಆಧಾರ ಸೀಡಿಂಗ್, ಕಂದಾಯ ಗ್ರಾಮ, ವಸತಿ ನಿಲಯಗಳ ಕಟ್ಟಡ ಮಂಜೂರು ಮುಂತಾದ ಅನೇಕ ಸುಧಾರಣಾ ಕ್ರಮ, ಮಹಿಳೆ ಹಾಗೂ ಮಕ್ಕಳ ಮೇಲೆ ಅಪಾರ ಕಾಳಜಿ ಹೊಂದಿದ್ದಾರೆ ಎಂದರು. ಈ ಕಾರ್ಯಕ್ರಮದಲ್ಲಿ ಬಸವಕಲ್ಯಾಣ ಹಾಗೂ ಬೀದರ ಸಹಾಯಕ ಆಯುಕ್ತರಾದ ಮುಕುಲ್ ಜೈನ್, ಎಂ.ಡಿ.ಶಕೀಲ್, ಪ್ರೊ. ಐಎಎಸ್ ಅಧಿಕಾರಿಗಳಾದ ರಮ್ಯಾ, ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಗ್ರಾಹಕರ ಶ್ರೇಯೋಭಿವೃದ್ಧಿಯೇ ಬ್ಯಾಂಕ್ ವ್ಯವಸ್ಥೆಯ ಉದ್ದೇಶ : ಹರೀಷ್



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜು.2: ಭ್ಯಾಂಕಿನ ಗ್ರಾಹಕರ ಶ್ರೇಯೋಭಿವೃದ್ಧಿಯೇ ಬ್ಯಾಂಕಿನ ವ್ಯವಸ್ಥೆಯ ಮುಖ್ಯ ಉದ್ದೇಶವಾಗಿದೆ ಎಂದು ಎಸ್‌ಬಿಐ ವ್ಯವಸ್ಥಾಪಕ ಹರೀಷ್ ಅಭಿಪ್ರಾಯಪಟ್ಟರು.

ಪಟ್ಟಣದ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದಲ್ಲಿ ನಡೆದ ಎಸ್‌ಬಿಐ 70ನೇ ಸಂಸ್ಥಾಪನಾ ದಿನಾಚರಣೆಗೆ ಚಾಲನೆ ನೀಡಿ ಅವರು ಮಾತನಾಡಿದರು. ಎಸ್‌ಬಿಐ ನಲ್ಲಿ ತುಂಬಾ ಗ್ರಾಹಕರಿದ್ದಾರೆ. ಅವರ ಕೆಸಲಗಳು ಸಕಾಲದಲ್ಲಿ ಮಾಡಿಕೊಡುವುದು ಇಲ್ಲಿಯ ಕರ್ಮಚಾರಿಗಳ ಮುಖ್ಯ ಕರ್ತವ್ಯವಾಗಿದೆ. ಬ್ಯಾಂಕ್ ಕರ್ಮಚಾರಿಗಳು ಬ್ಯಾಂಕಿನ ಗ್ರಾಹಕರಿಗೆ ಹೆಚ್ಚಿಗೆ ಕಾಯಿಸದೇ, ಅವರ ಎಲ್ಲಾ ಕಾರ್ಯಗಳನ್ನು ತಕ್ಷಣವೇ ಮಾಡಿಕೊಡುವಂತಾಗಬೇಕು. ಗ್ರಾಹಕರು ಸಂತುಷ್ಟರಾಗಿದ್ದರೆ ನಮ್ಮ ಕರ್ತವ್ಯಕ್ಕೆ ಬೆಲೆ ಬರುತ್ತದೆ ಎಂದು ಹೇಳಿದರು.

ಸರ್ಕಾರಿ ನೌಕರರ ಸಂಘದ ತಾಲೂಕು ಘಟಕದ ಮಾಜಿ ಅಧ್ಯಕ್ಷ ಮಲ್ಲಿಕಾರ್ಜುನ ಹಲಮಂಡಗೆ ಮಾತನಾಡಿ, ಭಾಲ್ಕಿ ಎಸ್‌ಬಿಐ ಶಾಖೆಯಲ್ಲಿ ಎಲ್ಲಾ ಕರ್ಮಚಾರಿಗಳು ಉತ್ತಮವಾಗಿ ಕಾರ್ಯ ನಿರ್ವಹಿಸುತ್ತಲಿದ್ದಾರೆ. ಹೀಗಾಗಿ ಭಾಲ್ಕಿಯ ಎಲ್ಲಾ ಬ್ಯಾಂಕ್ ಗಳಿಗಿಂತಲೂ ಎಸ್‌ಬಿಐ ನಲ್ಲಿ ಹೆಚ್ಚಿನ ಖಾತೆಗಳಿವೆ ಎಂದು ಹೇಳಿದರು.

ಕ್ಷೇತ್ರ ಶಿಕ್ಷಣಾಧಿಕಾರಿ ಸಿ.ಜಿ.ಹಳ್ಳದ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಕಾರ್ಯಕ್ರಮದಲ್ಲಿ ನಿವೃತ್ತ ಮುಖ್ಯಗುರು ಷಡಕ್ಷರಿ ಸ್ವಾಮಿ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದ ಪತ್ರಾಂಕಿತ ವ್ಯವಸ್ಥಾಪಕ ಶಿವಕುಮಾರ ಫುಲಾರಿ, ಎಸ್‌ಬಿಐ ಕರ್ಮಚಾರಿ ಗಂಭೀರ, ಮಹೇಶ ಚಿದ್ರೆ, ಮಂಜುನಾಥ ಭಾಗವತ, ಮುಡಲಗಿರಿ, ಪ್ರೇಮಕುಮಾರ ಅರಳಿ, ಸಂಗಮೇಶ ಡೊಂಗರೆ, ಸುಜಿತ ಇದ್ದರು.

# ಮಳೆ ನೀರು ಸಂಗ್ರಹ: ಪರದಾಟ



ಭಾಲ್ಕಿ: ತಾಲ್ಲೂಕಿನ ಖಟಕಚಿಂಚೋಳಿ ಗ್ರಾಮದ ಮುಖ್ಯದ್ವಾರದ ಬಳಿ ಮಳೆ ನೀರು ಸರಾಗವಾಗಿ ಹರಿದು ಹೋಗಲು ಸೂಕ್ತ ಚರಂಡಿ ವ್ಯವಸ್ಥೆ ಇಲ್ಲದ ಕಾರಣ ನೀರು ಸಂಗ್ರಹಗೊಂಡಿದ್ದು ವಿದ್ಯಾರ್ಥಿಗಳು ನಡೆದು–ಕೊಂಡು ಹೋಗಲು ಪರದಾಡುತ್ತಿದ್ದಾರೆ.

ಮಲ್ಲಮ್ಮ ನುಡಿ ವಾರ್ತೆ

ಬೀದರ. ಜು. 02 : ಭಾಲ್ಕಿ ತಾಲ್ಲೂಕಿನ ಖಟಕಚಿಂಚೋಳಿ ಗ್ರಾಮದ ಮುಖ್ಯದ್ವಾರದ ಬಳಿ ಮಳೆ ನೀರು ಸರಾಗವಾಗಿ ಹರಿದು ಹೋಗಲು ಸೂಕ್ತ ಚರಂಡಿ ವ್ಯವಸ್ಥೆ ಇಲ್ಲದ ಕಾರಣ ನೀರು ಸಂಗ್ರಹಗೊಂಡಿದ್ದು ವಿದ್ಯಾರ್ಥಿಗಳು, ಸಾರ್ವಜನಿಕರು, ಹಿರಿಯರು ನಡೆದುಕೊಂಡು ಹೋಗಲು ಪರದಾಡುತ್ತಿದ್ದಾರೆ ಎಂದು ಗ್ರಾಮಸ್ಥ ಕಾಶಿನಾಥ ಚಿಲಶೆಟ್ಟಿ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಗ್ರಾಮಸ್ಥರ, ಸಾರ್ವಜನಿಕರ ಸುಗಮ ಓಡಾಟದ ಹಿತದೃಷ್ಟಿಯಿಂದ ಸಂಬಂಧಪಟ್ಟ ಅಧಿಕಾರಿಗಳು, ಜನಪ್ರತಿನಿಧಿಗಳು ಕೂಡಲೇ ಈ ಸಮಸ್ಯೆಯತ್ತ ತಮ್ಮ ಚಿತ್ತವನ್ನು ಹರಿಸಿ ಸೂಕ್ತ ಚರಂಡಿ ವ್ಯವಸ್ಥೆ ಮಾಡಬೇಕು ಎಂದು ಎಬಿವಿಪಿ ಮುಖಂಡ ರೇವಣಸಿದ್ದ ಜಾಡರ್ ಒತ್ತಾಯಿಸಿದ್ದಾರೆ.

# ಜು. ೯ ರಂದು ರಾಜ್ಯಾದ್ಯಂತ ಬಿಸಿಯೂಟ ಬಂದ್

ಲಿಂಗಸಗೂರು:ಜು.2:ಬಿಸಿಯೂಟ ನೌಕರರ ಬದುಕನ್ನು ಉಳಿಸುವ ಸಂಘದ ಹಕ್ಕು ಹಾಗೂ ಮುಷ್ಕರದ ಹಕ್ಕು ಮತ್ತು ಸಂವಿಧಾನಾತ್ಮಕವಾದ ಹಕ್ಕುಗಳನ್ನು ಕಸಿಯುವ 4 ಕಾರ್ಮಿಕ ಸಂಹಿತೆಗಳನ್ನು ರದ್ದುಗೊಳಿಸಲು ಕೇಂದ್ರ ಸರ್ಕಾರ ಮುಂದಾಗಿದೆ ಮತ್ತು ನೌಕರರ ಕೆಲಸದಲ್ಲಿ ಬಹಳಷ್ಟು ಬದಲಾವಣೆ ಬಂದಿದೆ ಜುಲೈ 9 ರಂದು ರಾಜ್ಯಾಧ್ಯಂತ ಬಿಸಿಯೂಟ ಬಂದ್ ಮಾಡಿ ಅಖಿಲ ಭಾರತ ಸರ್ವತ್ರಿಕ ಮುಷ್ಕರದಲ್ಲಿ ಬಿಸಿಯೂಟ ನೌಕರರು ಭಾಗವಹಿಸಲಿದ್ದಾರೆಂದು( ಇಒ ) ತಾಲೂಕ ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಕರ್ನಾಟಕ ರಾಜ್ಯ ಅಕ್ಷರ ದಾಸೋಹ



ನೌಕರರ ತಾಲೂಕ ಅಧ್ಯಕ್ಷೆ ಸಿದ್ದಮ್ಮ ಮನವಿಯನ್ನು ಸಲ್ಲಿಸಿದರು

ಮೊದಲಿಗೆ ಮಧ್ಯಾಹ್ನ ಅನ್ನ–ಸಾರು ಮಾತ್ರವಿತ್ತು, ಈಗ ನೂರಾರು ಮಕ್ಕಳಿಗೆ ಮೊಟ್ಟೆ ಬೇಯಿಸಿ, ಸುಲಿದು ಕೊಡಬೇಕು ಮಾತ್ರವಲ್ಲದೇ ಕೆಲವಡೆ ಚಪಾತಿ, ದೋಸೆ", ಹೋಳಿಗೆ ಮಾಡಿಸುವ ಪದ್ಧತಿಯಿದೆ. ರಾಗಿ ಮಾಲ್ಟ್ , ಹಾಲು, ಶಾಲಾ ಸ್ವಚ್ಛತೆ ಮಾಡುವುದು ಹೀಗೆ ತಮ್ಮ ಕೆಲಸದ ಜೊತೆ ಇತರೆ ಪ್ರತಿನಿತ್ಯ ಒತ್ತಡ ಕೆಲಸ ನಿರ್ವಹಿಸುತ್ತಿದ್ದಾರೆ. ಕೇಂದ್ರ ಸರ್ಕಾರವು 2013 ರಿಂದಲೂ ನಯಾಪೈಸೆ ವೇತನ ಹೆಚ್ಚಳ ಮಾಡಿಲ್ಲ. ಬಿಸಿಯೂಟ ಯೋಜನೆ ಪ್ರಾರಂಭವಾಗಿ 24 ವರ್ಷಗಳಾಗಿದೆ. ಶಿಕ್ಷಣದ ಏಕಾಗ್ರತೆಗಾಗಿ ಮಕ್ಕಳ ಅಪೌಷ್ಟಿಕತೆ ಹೋಗಲಾಡಿಸುವ ದೃಷ್ಟಿಕೋನದಿಂದ ದುಡಿಯುವ ಬಿಸಿಯೂಟ ನೌಕರರನ್ನು ಖಾಯಂ ಮಾಡಬೇಕೆಂದು ಒತ್ತಾಯಿಸಿ ಜುಲೈ 9ರಂದು ಬಿಸಿಯೂಟ ನೌಕರರು ತಮ್ಮ ಕೆಲಸ ಸ್ಥಗಿತ ಗೊಳಿಸಿ ತಾಲ್ಲೂಕು/ಜಿಲ್ಲಾ ಕೇಂದ್ರಗಳಲ್ಲಿ ಮುಷ್ಕರ ನಡೆಸುತ್ತಿದ್ದೇವೆ ಎಂದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.